VOLUME: 16 | 09 APRIL 2026 | ಗುರುವಾರ | RS: 2 | PAGE: 06 ISSUE: 68 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಬಹುಭಾಷಾ ನಟಿ ಮಂಗಳೂರು ಮೂಲದ ನಿಮಿಕಾ ರತ್ನಾಕರ್ ಅವರು ಉದ್ಯಮಿ ಆಶಿಶ್ ಎಂಬುವರ ಜೊತೆ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದಾರೆ. ಮಂಗಳೂರಿನಲ್ಲಿ ಮದುವೆ ಸಮಾರಂಭ ನಡೆಸಿದ್ದು ಕುಟುಂಬದವರು, ಗುರು-ಹಿರಿಯರು ಆಪ್ತರ ಸಮ್ಮುಖದಲ್ಲಿ ಮದುವೆ ಆಗಿದ್ದಾರೆ. ಮದುವೆಯ ಫೋಟೋಗಳನ್ನು ಇನ್‌ಸ್ಟಾಗ್ರಾಂನಲ್ಲಿ ಹಂಚಿಕೊಂಡಿದ್ದಾರೆ.



BHARATHA SARATHI
KANNADA DAILY NEWS PAPER
# ಭಾರತ ಸಾರಥಿ
CALL 9740160669
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಕದನವಿರಾಮ ಇದ್ದರೂ ನಿಲ್ಲದ ದಾಳಿ



ಬೆಂಗಳೂರು: ಮಹತ್ವದ ಬೆಳವಣಿಗೆಯಲ್ಲಿ ಅಮೆರಿಕ ಮತ್ತು ಇರಾನ್ ನಡುವೆ 2 ವಾರಗಳ ಕದನ ವಿರಾಮ ಘೋಷಣೆಯಾಗಿದೆ. ಇರಾನ್‌ಗೆ ನೀಡಿದ್ದ 48 ಗಂಟೆಗಳ ಡೆಡ್‌ಲೈನ್ ಅಮೆರಿಕ ಕಾಲಮಾನ ರಾತ್ರಿ 8 ಗಂಟೆಗೆ ಅಂತ್ಯವಾಗುವ ಒಂದು ಗಂಟೆಯ ಮೊದಲು ಟ್ರಂಪ್ ತಮ್ಮ ಟ್ರೂಥ್ ಸಾಮಾಜಿಕ ಜಾಲತಾಣದಲ್ಲಿ ಈ ವಿಚಾರವನ್ನು ಬಹಿರಂಗಪಡಿಸಿದ್ದಾರೆ.

ಹಾರ್ಮುಜ್ ಜಲಸಂಧಿಯನ್ನು ತೆರೆಯಲು ಇರಾನ್ ಒಪ್ಪಿಕೊಂಡಿದೆ ಮತ್ತು ಅವರ ಕಡೆಯಿಂದ 10 ಅಂಶಗಳ ಪ್ರಸ್ತಾವನೆಯನ್ನು ಸ್ವೀಕರಿಸಲಾಗಿದೆ ಎಂದು ತಿಳಿಸಿದ್ದಾರೆ.

ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಮತ್ತು ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಅವರು ಇಂದು ರಾತ್ರಿ ಇರಾನ್‌ಗೆ ಕಳುಹಿಸಲಾಗುತ್ತಿರುವ ವಿನಾಶಕಾರಿ ಪಡೆಗಳನ್ನು ತಡೆಹಿಡಿಯುವಂತೆ ಮನವಿ ಮಾಡಿದರು.

ಹಾರ್ಮುಜ್ ಜಲಸಂಧಿಯನ್ನು ಸಂಪೂರ್ಣವಾಗಿ ಈ ಕೂಡಲೇ ತೆರೆಯಲು ಒಪ್ಪಿಕೊಂಡರೆ ಇರಾನ್ ಮೇಲೆ ಮಾಡಲು ಉದ್ದೇಶಿಸಿರುವ ಬಾಂಬ್ ದಾಳಿಯನ್ನು ಎರಡು ವಾರಗಳ ಕಾಲ ತಡೆ ಹಿಡಿಯಲು ಒಪ್ಪಿಗೆ ನೀಡುತ್ತೇನೆ. ಇದು ದ್ವಿಪಕ್ಷೀಯ ಕದನ ವಿರಾಮ ಆಗಲಿದೆ.

ಈಗಾಗಲೇ ನಾವು ಎಲ್ಲಾ ಮಿಲಿಟರಿ ಉದ್ದೇಶಗಳನ್ನು ಪೂರೈಸಿದ್ದೇವೆ ಮತ್ತು ಮೀರಿದ್ದೇವೆ. ಇರಾನ್‌ನೊಂದಿಗೆ ದೀರ್ಘಾವಧಿಯ ಶಾಂತಿ ಮತ್ತು ಮಧ್ಯಪ್ರಾಚ್ಯದಲ್ಲಿ ಶಾಂತಿಗೆ ಸಂಬಂಧಿಸಿದ ನಿರ್ಣಾಯಕ ಒಪ್ಪಂದದೊಂದಿಗೆ ಬಹಳ ದೂರದಲ್ಲಿದ್ದೇವು.

ಇರಾನ್ ಕಡೆಯಿಂದ 10 ಅಂಶಗಳ ಪ್ರಸ್ತಾವನೆಯನ್ನು ಸ್ವೀಕರಿಸಲಾಗಿದ್ದು, ಇದು ಶಾಶ್ವತ ಶಾಂತಿ ಮಾತುಕತೆಗೆ ಉತ್ತಮ ಆಧಾರವಾಗಿದೆ. ಅಮೆರಿಕಾ ಮತ್ತು ಇರಾನ್ ನಡುವೆ ಕಳೆದ ಐದು ವಾರಗಳಿಂದ ತೀವ್ರ ಯುದ್ಧ ಪರಿಸ್ಥಿತಿ ನಿರ್ಮಾಣವಾಗಿತ್ತು. ಕ್ಷಿಪಣಿ ದಾಳಿ, ಡ್ರೋನ್ ದಾಳಿ, ಸಮುದ್ರ ಮಾರ್ಗಗಳ ಮೇಲೆ ಒತ್ತಡ ಮತ್ತು ಅಣು ಕಾರ್ಯಕ್ರಮದ ಕುರಿತ ಉದ್ವಿಗ್ನತೆ ಮಧ್ಯಪ್ರಾಚ್ಯವನ್ನು ಮತ್ತೊಮ್ಮೆ ಯುದ್ಧದ ಅಂಚಿಗೆ ತಳ್ಳಿತ್ತು. ಈ ಸಂಘರ್ಷದಲ್ಲಿ ಇಸ್ರೇಲ್ ಕೂಡ ಪರೋಕ್ಷವಾಗಿ ಭಾಗಿಯಾಗಿದ್ದು, ಪರಿಸ್ಥಿತಿ ಇನ್ನಷ್ಟು ಗಂಭೀರವಾಗಿತ್ತು. ಆದರೆ ಈಗ 15 ದಿನಗಳ ಕಾಲ ಕದನವಿರಾಮದಿಂದ ಅಲ್ಪ ತಣ್ಣಗಾದರೂ ಉದ್ವಿಗ್ನತೆ ಮಾತ್ರ ಹೆಚ್ಚಿದೆ.

ಯುದ್ಧದ ಸಂದರ್ಭದಲ್ಲಿ ಅಮೆರಿಕಾ ಇರಾನ್‌ನ ಅಣು ಸ್ಥಾವರಗಳು, ಸೇನಾ ನೆಲೆಗಳು ಮತ್ತು ಕ್ಷಿಪಣಿ ಸಂಗ್ರಹಣಾ ಕೇಂದ್ರಗಳ ಮೇಲೆ ದಾಳಿ ನಡೆಸುವ ಎಚ್ಚರಿಕೆ ನೀಡಿತ್ತು. ಇದಕ್ಕೆ ಪ್ರತಿಯಾಗಿ ಇರಾನ್ ಹಾರ್ಮುಜ್ ಜಲಸಂಧಿಯನ್ನು ಬಂದ್ ಮಾಡುವ ಸೂಚನೆ ನೀಡಿತ್ತು. ಜಗತ್ತಿನ ಬಹುಪಾಲು ತೈಲ ಸಾಗಾಟ ನಡೆಯುವ ಈ ಸಮುದ್ರ ಮಾರ್ಗ ಮುಚ್ಚಿದರೆ ಜಾಗತಿಕ ಆರ್ಥಿಕತೆಗೆ ದೊಡ್ಡ ಹೊಡೆತ ಬೀಳುತ್ತಿತ್ತು. ಇದೇ ಕಾರಣಕ್ಕೆ ಜಗತ್ತಿನ ರಾಷ್ಟ್ರಗಳು ಕಳವಳ ವ್ಯಕ್ತಪಡಿಸಿದ್ದವು.

ಕೊನೆಗೆ ಎರಡೂ ರಾಷ್ಟ್ರಗಳು ಎರಡು ವಾರಗಳ ತಾತ್ಕಾಲಿಕ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ. ಇದರ ಪ್ರಕಾರ, ಅಮೆರಿಕಾ ಹೊಸ ದಾಳಿಗಳನ್ನು ತಾತ್ಕಾಲಿಕವಾಗಿ ನಿಲ್ಲಿಸಲಿದೆ. ಇರಾನ್ ಕೂಡ ಹಾರ್ಮುಜ್ ಜಲಸಂಧಿಯನ್ನು ತೆರೆಯಿಡಲು ಮತ್ತು ನೇರ ಸೈನಿಕ ಪ್ರತಿದಾಳಿ ನಡೆಸದಿರಲು ಸಮ್ಮತಿಸಿದೆ. ಈ ಅವಧಿಯಲ್ಲಿ ಎರಡೂ ದೇಶಗಳು ಮಾತುಕತೆ ನಡೆಸಲಿವೆ.

ಈ ಯುದ್ಧದ ಪ್ರಮುಖ ಕಾರಣ ಇರಾನ್‌ನ ಅಣು ಕಾರ್ಯಕ್ರಮ. ಅಮೆರಿಕಾ ಮತ್ತು ಇಸ್ರೇಲ್, ಇರಾನ್ ಅಣ್ವಸ್ತ್ರ ಅಭಿವೃದ್ಧಿ ಮಾಡುತ್ತಿದೆ ಎಂದು ಆರೋಪಿಸುತ್ತಿವೆ.

ಆದರೆ ಇರಾನ್ ತನ್ನ ಅಣು ಯೋಜನೆ ಶಾಂತಿಯುತ ಉದ್ದೇಶಗಳಿಗಾಗಿ ಮಾತ್ರ ಎಂದು ಹೇಳುತ್ತಿದೆ. ಇದೇ ವಿಚಾರದಿಂದ ಎರಡು ದೇಶಗಳ ನಡುವೆ ಹಲವು ವರ್ಷಗಳಿಂದ ಉದ್ವಿಗ್ನತೆ ಮುಂದುವರಿದಿದೆ.

ಇದೀಗ ನಡೆದ ಕದನ ವಿರಾಮದ ಹಿಂದೆ ಹಲವು ಕಾರಣಗಳಿವೆ. ಮೊದಲನೆಯದಾಗಿ, ಯುದ್ಧ ಮುಂದುವರಿದರೆ ತೈಲ ಬೆಲೆಗಳು ಭಾರೀ ಏರಿಕೆಯಾಗುತ್ತಿತ್ತು.

## ಇಂದು ಮತದಾನ

ಬೆಂಗಳೂರು: ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭೆ ಚುನಾವಣೆಯ ಭಾಗವಾಗಿ ಇಂದುಏಪ್ರಿಲ್ 9ರಂದು ಕೇರಳ, ಅಸ್ಸಾಂ ಹಾಗೂ ಪುದುಚೇರಿಯಲ್ಲಿ ಮತದಾನ ನಡೆಯಲಿದೆ. ಇದೇ ವೇಳೆ ಕರ್ನಾಟಕ, ನಾಗಾಲ್ಯಾಂಡ್ ಮತ್ತು ತ್ರಿಪುರಾದಲ್ಲಿ ಉಪಚುನಾವಣೆಗಳೂ ಜರುಗಲಿವೆ.

ಮತದಾನ ಪ್ರಕ್ರಿಯೆ ಮುಕ್ತ, ನ್ಯಾಯಸಮ್ಮತ ಮತ್ತು ಶಾಂತಿಯುತವಾಗಿರಲೆಂದು ಕೇಂದ್ರ ಚುನಾವಣಾ ಆಯೋಗವು ವ್ಯಾಪಕ ಭದ್ರತಾ ವ್ಯವಸ್ಥೆ ಕೈಗೊಂಡಿದೆ. ಸಾವಿರಾರು ಚುನಾವಣಾ ಸಿಬ್ಬಂದಿಯನ್ನು ನಿಯೋಜಿಸಲಾಗಿದ್ದು, ಸೂಕ್ಷ್ಮ ಮತಗಟ್ಟೆಗಳಲ್ಲಿ ಬಿಗಿ ಮೇಲ್ವಿಚಾರಣೆ ವಹಿಸಲಾಗಿದೆ.

> ಅಸ್ಸಾಂನಲ್ಲಿ ಎಲ್ಲಾ 126 ವಿಧಾನಸಭಾ ಕ್ಷೇತ್ರಗಳಿಗೆ ಒಂದೇ ಹಂತದಲ್ಲಿ ಮತದಾನ ನಡೆಯಲಿದೆ. ರಾಜ್ಯದಲ್ಲಿ ಒಟ್ಟು 722 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ, ಕಾಂಗ್ರೆಸ್ ನಾಯಕ ಗೌರವ್ ಗೊಗೊಯ್, ಎಐಯುಡಿಎಫ್ ಮುಖ್ಯಸ್ಥ ಬದ್ರುದ್ದೀನ್ ಅಜ್ಮಲ್ ಹಾಗೂ ರೈಜೋರ್ ದಳದ ಅಖಿಲ್ ಗೊಗೊಯ್ ಪ್ರಮುಖ ಅಭ್ಯರ್ಥಿಗಳಾಗಿದ್ದಾರೆ.

ಅಸ್ಸಾಂನಲ್ಲಿ ಎಲ್ಲಾ 126 ವಿಧಾನಸಭಾ ಕ್ಷೇತ್ರಗಳಿಗೆ ಒಂದೇ ಹಂತದಲ್ಲಿ ಮತದಾನ ನಡೆಯಲಿದೆ. ರಾಜ್ಯದಲ್ಲಿ ಒಟ್ಟು 722 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ, ಕಾಂಗ್ರೆಸ್ ನಾಯಕ ಗೌರವ್ ಗೊಗೊಯ್, ಎಐಯುಡಿಎಫ್ ಮುಖ್ಯಸ್ಥ ಬದ್ರುದ್ದೀನ್ ಅಜ್ಮಲ್ ಹಾಗೂ ರೈಜೋರ್ ದಳದ ಅಖಿಲ್ ಗೊಗೊಯ್ ಪ್ರಮುಖ ಅಭ್ಯರ್ಥಿಗಳಾಗಿದ್ದಾರೆ.

ಸತತ ಮೂರನೇ ಅವಧಿಗೆ ಅಧಿಕಾರಕ್ಕೆ ಬರಲು ಬಿಜೆಪಿ ನೇತೃತ್ವದ ರಾಷ್ಟ್ರೀಯ ಜನತಾಂತ್ರಿಕ ಮೈತ್ರಿಕೂಟ ಪ್ರಯತ್ನಿಸುತ್ತಿದ್ದರೆ, ಕಾಂಗ್ರೆಸ್ ನೇತೃತ್ವದ ವಿರೋಧ ಪಕ್ಷಗಳ ಮೈತ್ರಿಕೂಟ ಮತ್ತೆ ಅಧಿಕಾರ ಪಡೆಯಲು ಕಣಕ್ಕಿಳಿದಿದೆ.

ರಾಜ್ಯದಲ್ಲಿ 31,490 ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಸುಮಾರು 2.5 ಕೋಟಿ ಮತದಾರರು ಮತ ಚಲಾಯಿಸಲು ಅರ್ಹರಾಗಿದ್ದಾರೆ. ಕೇರಳ ವಿಧಾನಸಭೆಯ ಎಲ್ಲಾ 140 ಸ್ಥಾನಗಳಿಗೆ ಇಂದುಮತದಾನ ನಡೆಯಲಿದೆ. ಒಟ್ಟು 890 ಅಭ್ಯರ್ಥಿಗಳು ಕಣದಲ್ಲಿದ್ದು, 2.7 ಕೋಟಿಗೂ ಹೆಚ್ಚು ಮತದಾರರು ಮತದಾನಕ್ಕೆ ಅರ್ಹರಾಗಿದ್ದಾರೆ.

ಆಡಳಿತಾರೂಢ ಸಿಪಿಐ(ಎಂ) ನೇತೃತ್ವದ ಎಡ ಪ್ರಜಾಸತ್ತಾತ್ಮಕ ರಂಗ ಮತ್ತು ಕಾಂಗ್ರೆಸ್ ನೇತೃತ್ವದ ಯುನೈಟೆಡ್ ಪ್ರಜಾಸತ್ತಾತ್ಮಕ ರಂಗದ ನಡುವೆ ನೇರ ಪೈಪೋಟಿ ಏರ್ಪಟ್ಟಿದೆ. ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಸತತ ಮೂರನೇ ಅವಧಿಗೆ ಅಧಿಕಾರ ಉಳಿಸಿಕೊಳ್ಳುವ ಗುರಿ ಹೊಂದಿದ್ದರೆ, ವಿರೋಧ ಪಕ್ಷಗಳು ಆಡಳಿತ ಬದಲಾವಣೆಯ ನಿರೀಕ್ಷೆಯಲ್ಲಿ ಕಣಕ್ಕಿಳಿದಿವೆ.

ಬೆಳಿಗ್ಗೆ 7ರಿಂದ ಸಂಜೆ 6ರವರೆಗೆ ರಾಜ್ಯದ 30 ಸಾವಿರಕ್ಕೂ ಹೆಚ್ಚು ಮತಗಟ್ಟೆಗಳಲ್ಲಿ ಮತದಾನ ನಡೆಯಲಿದೆ.

ಕೇಂದ್ರಾಡಳಿತ ಪ್ರದೇಶ ಪುದುಚೇರಿಯ ಎಲ್ಲಾ 30 ವಿಧಾನಸಭಾ ಸ್ಥಾನಗಳಿಗೆ ಇಂದುಮತದಾನ ನಡೆಯಲಿದೆ. ಮುಖ್ಯಮಂತ್ರಿ ಎನ್. ರಂಗಸಾಮಿ ಸೇರಿದಂತೆ ಒಟ್ಟು 294 ಅಭ್ಯರ್ಥಿಗಳು ಕಣದಲ್ಲಿದ್ದಾರೆ.

## ಕಾಫಿ ಬೆಳೆಗಾರರಿಗೆ ಬೃಹತ್ ಹೊಡೆತ

ಹಾಸನ: ಇಡೀ ಜಗತ್ತನ್ನೇ ತಲ್ಲಣಗೊಳಿಸಿರುವ ಮಧ್ಯಪ್ರಾಚ್ಯ ಯುದ್ಧದ ಪರಿಣಾಮಗಳು ಈಗ ಕರ್ನಾಟಕದ ಕಾಫಿ ತೋಟಗಳಿಗೂ ತಟ್ಟಿವೆ. ಅಡುಗೆ ಅನಿಲ ಮತ್ತು ಆಟೋ ಗ್ಯಾಸ್ ಕೊರತೆಯ ನಡುವೆ, ದೇಶಕ್ಕೆ ಅತಿ ಹೆಚ್ಚು ವಿದೇಶಿ ವಿನಿಮಯ ತಂದುಕೊಡುತ್ತಿದ್ದ ಕಾಫಿ ಉದ್ಯಮ ಈಗ ಸಂಕಷ್ಟದ ಸುಳಿಗೆ ಸಿಲುಕಿದೆ. ಇಸ್ರೇಲ್ ಮತ್ತು ಇರಾನ್ ನಡುವಿನ ಭೀಕರ ಕದನದಿಂದಾಗಿ ಕಾಫಿ ರಫ್ತು ಸಂಪೂರ್ಣವಾಗಿ ಸ್ಥಗಿತಗೊಂಡಿದ್ದು, ಮಾರುಕಟ್ಟೆಯಲ್ಲಿ ಕಾಫಿ ಬೆಲೆ ತೀವ್ರವಾಗಿ ಕುಸಿಯುತ್ತಿದೆ.

ಕಳೆದ ಹಲವು ದಶಕಗಳ ನಂತರ ಕಾಫಿಗೆ ಬಂಪರ್ ಬೆಲೆ ಬಂದಿತ್ತು. ಇದರಿಂದ ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದ ಬೆಳೆಗಾರರು, ಬೆಲೆ ಮತ್ತಷ್ಟು ಏರಬಹುದು ಎಂಬ ನಿರೀಕ್ಷೆಯಲ್ಲಿ ಕಾಫಿಯನ್ನು ಮಾರಾಟ ಮಾಡದೆ ಸಂಗ್ರಹಿಸಿಟ್ಟುಕೊಂಡಿದ್ದರು.

ಆದರೆ, ಯುದ್ಧ ಶುರುವಾದ ಕೇವಲ ಒಂದು ತಿಂಗಳ ಅವಧಿಯಲ್ಲಿ ಬೆಲೆ ಬರೋಬ್ಬರಿ ಶೇಕಡಾ 20 ರಷ್ಟು ಕುಸಿದಿದೆ.

ಅರೇಬಿಕಾ ಕಾಫಿ: ಕಳೆದ ವರ್ಷ 50 ಕೆಜಿ ಚೀಲಕ್ಕೆ 29 ಸಾವಿರ ರೂ. ಇದ್ದ ಬೆಲೆ ಈಗ 23 ಸಾವಿರಕ್ಕೆ ಕುಸಿದಿದೆ. ರೊಬಸ್ಟಾ ಕಾಫಿ: 12 ಸಾವಿರ ರೂ. ಇದ್ದ ಬೆಲೆ ಈಗ ಕೇವಲ 8 ಸಾವಿರಕ್ಕೆ ಇಳಿಕೆಯಾಗಿದೆ.

ಒಂದೆಡೆ ಯುದ್ಧದಿಂದ ರಫ್ತು ನಿಂತಿದ್ದರೆ, ಮತ್ತೊಂದೆಡೆ ಜಗತ್ತಿನ ಅತಿ ದೊಡ್ಡ ಕಾಫಿ ಬೆಳೆಗಾರ ರಾಷ್ಟ್ರಗಳಾದ ಬ್ರೆಜಿಲ್ ಮತ್ತು ವಿಯೆಟ್ನಾಂನಲ್ಲಿ ಈ ಬಾರಿ ಉತ್ತಮ ಫಸಲು ಬಂದಿದೆ.

ಕಳೆದ ವರ್ಷ ಅಲ್ಲಿ ಫಸಲು ಕೈಕೊಟ್ಟಿದ್ದರಿಂದ ಭಾರತದ ಕಾಫಿಗೆ ಭಾರಿ ಬೇಡಿಕೆ ಇತ್ತು. ಆದರೆ ಈಗ ಆ ದೇಶಗಳಲ್ಲೂ ಫಸಲು ಚೆನ್ನಾಗಿರುವುದು ಮತ್ತು ಯುದ್ಧದ ಪರಿಣಾಮ ರಫ್ತು ರದ್ದಾಗಿರುವುದು ಬೆಳೆಗಾರರ ಗಾಯದ ಮೇಲೆ ಬರೆ ಎಳೆದಂತಾಗಿದೆ.

ದೇಶದ ಒಟ್ಟು ಕಾಫಿ ಉತ್ಪಾದನೆಯಲ್ಲಿ ಕರ್ನಾಟಕದ ಪಾಲು ಶೇ.70ರಷ್ಟಿದೆ. ಕೊಡಗು, ಚಿಕ್ಕಮಗಳೂರು ಮತ್ತು ಹಾಸನ ಜಿಲ್ಲೆಯ ಲಕ್ಷಾಂತರ ಕುಟುಂಬಗಳು ಈ ಉದ್ಯಮವನ್ನೇ ನಂಬಿವೆ. 'ರಫ್ತುದಾರರಿಗೆ ಕೇಂದ್ರ ಸರ್ಕಾರ ಹೇಗೆ ನೆರವಿನ ಹಸ್ತ ನೀಡುತ್ತದೆಯೋ, ಅದೇ ಮಾದರಿಯಲ್ಲಿ ಕಾಫಿ ಬೆಳೆಗಾರರಿಗೂ ವಿಶೇಷ ಪರಿಹಾರ ಘೋಷಿಸಬೇಕು' ಎಂದು ಅಂತರಾಷ್ಟ್ರೀಯ ಕಾಫಿ ಸಂಘಟನೆ ಸಲಹಾ ಸಮಿತಿ ಸದಸ್ಯರಾದ ಡಾ.ಎಚ್ ಡಿ ಮೋಹನ್ ಕುಮಾರ್ ಆಗ್ರಹಿಸಿದ್ದಾರೆ.

ಸದ್ಯ ಇರಾನ್-ಅಮೆರಿಕ ಯುದ್ಧಕ್ಕೆ 2 ವಾರಗಳ ಕದನ ವಿರಾಮ ಘೋಷಿಸಲಾಗಿದ್ದು, ಇದು ಮುಂದೆ ಯಾವ ರೀತಿ ಪರಿಣಾಮ ಬೀರಲಿದೆ ಎಂಬುದನ್ನು ಕಾದುನೋಡಬೇಕಿದೆ.




ಬೆಂಗಳೂರಿನ ಡಾ.ಬಾಬು ಜಗಜೀವನ್ ರಾಮ್ ಭವನದಲ್ಲಿ ಬುಧವಾರ ನಡೆದ ಬಮೂಲ್ ಒಕ್ಕೂಟ ವ್ಯಾಪ್ತಿಯ ಎಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಿಬ್ಬಂದಿಗೆ ವಿಶೇಷ ಪ್ರೋತ್ಸಾಹ ಧನದ ಚೆಕ್ ವಿತರಣಾ ಸಮಾರಂಭದಲ್ಲಿ ಒಕ್ಕೂಟದ ನಿರ್ದೇಶಕರು ಹಾಗೂ ಅಧಿಕಾರಿಗಳೊಂದಿಗೆ ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ಅವರು ಪಾಲ್ಗೊಂಡರು.

## ಮತ್ತೊಂದು ಲವ್‌ಜಿಹಾದ್ ಪ್ರಕರಣ ಬೆಳಕಿಗೆ



ಹುಬ್ಬಳ್ಳಿ: ವಾಣಿಜ್ಯ ನಗರಿ ಹುಬ್ಬಳ್ಳಿಯಲ್ಲಿ ಸಾಲು ಸಾಲು ಲವ್ ಜಿಹಾದ್ ಆರೋಪ ಪ್ರಕರಣಗಳು ಬೆಳಕಿಗೆ ಬರುತ್ತಿವೆ. ಇದೀಗ ಇವುಗಳ ಸಾಲಿಗೆ ಮತ್ತೊಂದು ಹೊಸ ಸೇರ್ಪಡೆಯಾಗಿದ್ದು, ತನ್ನ ಮಗಳನ್ನು ಮುಸ್ಲಿಂ ಸಮುದಾಯದ ವಿವಾಹಿತ ವ್ಯಕ್ತಿ ಪುಸಲಾಯಿಸಿ ಕರೆದುಕೊಂಡು ಹೋಗಿದ್ದಾನೆ. ಜೊತಗೆ ಮನೆ ಖರೀದಿಸಲು ನೀಡಿದ್ದ ಹತ್ತು ಲಕ್ಷ ಹಣ ಕೂಡಾ ತೆಗೆದುಕೊಂಡು ಹೋಗಿದ್ದಾನೆ. ಇದೀಗ ಹಣವೂ ಇಲ್ಲ, ಮಗಳೂ ಇಲ್ಲ ಎಂಬಂತಾಗಿದೆ. ದಯವಿಟ್ಟು ಮಗಳನ್ನು ಹುಡುಕಿ ಕೊಡಿ ಎಂದು ತಾಯಿಯೊಬ್ಬಳು ಮನವಿ ಮಾಡಿದ್ದಾರೆ. ಕಳೆದ ಎರಡು ವರ್ಷಗಳಿಂದ ಮಗಳಿಗಾಗಿ ಹುಡುಕಾಟ ನಡೆಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ದೂರಿದ್ದಾರೆ.

ಧಾರವಾಡದ ಕೆಲಗೇರಿಯ ನಿವಾಸಿ ಇಪ್ಪತ್ತೆರಡು ವರ್ಷದ ತಂಗೆಮ್ಮಾ ಎಂಬ ಯುವತಿ ಮನೆ ಎದುರಿನ ನಿವಾಸಿ ಕಾರು ಚಾಲಕನಾಗಿದ್ದ ಮುಸ್ಲಿಂ ವ್ಯಕ್ತಿಯ ಜೊತೆಗೆ ಓಡಿ ಹೋಗಿದ್ದಾಳಂತೆ. ಈ ಬಗ್ಗೆ ಆಕೆಯ ತಾಯಿ ಮಂಜುಳಾ ಅವರೇ ಮಾಹಿತಿ ನೀಡಿದ್ದು, ತಮ್ಮ ಮಗಳಿಗೆ ಪರಿಚಿತ ಯುವಕನ ಜೊತೆ ವಿವಾಹವಾಗಿತ್ತು. ಆದ್ರೆ ಮಗಳು ನಮ್ಮ ಜೊತೆಯೇ ಇದ್ದಳು. ಆಕೆಯ ಪತಿ ಆಗಾಗ ಬಂದು ಹೋಗುತ್ತಿದ್ದ. ಧಾರವಾಡದ ಕೆಲಗೇರಿಯಲ್ಲಿ ಬಾಡಿಗೆ ಮನೆಯಲ್ಲಿದ್ದಾಗ, ತಮಗೆ ವಕೀಲರೊಬ್ಬರು ಪರಿಚಯವಿದ್ದರು.

ಅವರ ಕಾರ್ ಡ್ರೈವರ್ ಆಗಿ ಮುನ್ನಾ ಎಂಬಾತ ಕೆಲಸ ಮಾಡ್ತಿದ್ದ. ಆಗ ನಾವು ನಮಗೆ ಸ್ವಂತದೊಂದು ಮನೆ ಮಾಡಬೇಕು. ಹೀಗಾಗಿ ಮನೆ ಹುಡುಕಿ ಕೊಡಿ ಎಂದು ಮುನ್ನಾ ಮತ್ತು ವಕೀಲರಿಗೆ ಹತ್ತು ಲಕ್ಷ ಹಣ ನೀಡಿದ್ದೆವು. ಆ ಬಳಿಕ ವಕೀಲರು ಮತ್ತು ಮುನ್ನಾ ಆಗಾಗ ಮನೆಗೆ ಬಂದು ಹೋಗಿ ಮಾಡುತ್ತಿದ್ದರು. ಆದರೆ 2023ರಲ್ಲಿ ನಾವು ಮನೆಯಲ್ಲಿ ಇಲ್ಲದ ಸಂದರ್ಭ ಮುನ್ನಾ ತಮ್ಮ ಮಗಳನ್ನು ಪುಸಲಾಯಿಸಿ ಕರೆದುಕೊಂಡು ಹೋಗಿದ್ದಾನೆ. ಈ ಬಗ್ಗೆ ಧಾರವಾಡದ ಸಬ್ ಅರ್ಬನ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದೆವು. ಆಗ ಪೊಲೀಸರು ಮುನ್ನಾ ವಿರುದ್ಧ ದೂರು ದಾಖಲಿಸಿಕೊಳ್ಳದೇ ಕೇವಲ ಮಿಸ್ಸಿಂಗ್ ಕಂಪ್ಲೇಟ್ ದಾಖಲಿಸಿಕೊಂಡಿದ್ದರು. ಆದ್ರೆ ಇಲ್ಲಿವರಗೆ ಮುನ್ನಾ ಮತ್ತು ತಮ್ಮ ಮಗಳು ಎಲ್ಲಿದ್ದಾರೆ ಎಂದು ಹುಡುಕಿಲ್ಲ ಎಂದು ಆರೋಪಿಸಿದ್ದಾರೆ.

ಇನ್ನು ಮುನ್ನಾಗೆ ಬೆಳಗಾವಿ ಜಿಲ್ಲೆಯ ರಾಮದುರ್ಗದ ಮುಸ್ಲಿಂ ಯುವತಿ ಜೊತೆ ಈ ಹಿಂದೆಯೇ ವಿವಾಹವಾಗಿತ್ತಂತೆ. ದಂಪತಿಗೆ ಇಬ್ಬರು ಮಕ್ಕಳು ಕೂಡಾ ಇವೆಯಂತೆ. ಹೀಗಿದ್ದರೂ ಹೆಂಡತಿ ಮಕ್ಕಳನ್ನು ಬಿಟ್ಟು ಮುನ್ನಾ ತಂಗೆಮ್ಮಳನ್ನು ಕರೆದುಕೊಂಡು ನಾಪತ್ತೆಯಾಗಿದ್ದಾನೆ. ಆತನಿಗಾಗಿ ಆರಂಭದಲ್ಲಿ ಪೊಲೀಸರು ಅನೇಕ ಕಡೆ ಹುಡುಕಾಡಿದ್ದರು.

ಹೈದ್ರಾಬಾದ್ ಸೇರಿದಂತೆ ಅನೇಕ ಕಡೆ ತೆರಳಿದ್ದರು. ಆದ್ರೆ ಆತ ಸಿಮ್ ಬದಲಾವಣೆ ಮಾಡಿದ್ದು, ಕುಟುಂಬದವರ ಸಂಪರ್ಕ ಕೂಡ ಇಟ್ಟುಕೊಂಡಿಲ್ಲ. ಹೀಗಾಗಿ ಮುನ್ನಾ ಮತ್ತು ತಂಗೆಮ್ಮಾ ಎಲ್ಲಿದ್ದಾರೆಂದು ಪತ್ತೆ ಮಾಡೋದು ಪೊಲೀಸರಿಗೂ ಸವಾಲಾಗಿ ಮಾರ್ಪಟ್ಟಿದೆ. ಇನ್ನು ಮುನ್ನಾ ಮೇಲೆ ದೆಹಲಿಯಲ್ಲಿ ಅತ್ಯಾಚಾರ ಪ್ರಕರಣ ಕೂಡಾ ಇರೋದು ಗೊತ್ತಾಗಿದ್ದು, ಆತ ಕ್ರಿಮಿನಲ್ ಹಿನ್ನೆಲೆಯುಳ್ಳ ವ್ಯಕ್ತಿ ಎಂಬುದು ಬಹಿರಂಗಗೊಂಡಿದೆ. ತಮ್ಮ ಮಗಳನ್ನು ಹುಡುಕಿ ಕೊಡುವಂತೆ ಧಾರವಾಡ ಸಬ್ ಅರ್ಬನ್ ಪೊಲೀಸರಿಗೆ ಹತ್ತಾರು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗದ ಕಾರಣ ಹಿಂದೂಪರ ಸಂಘಟನೆಗಳ ಜೊತೆ ಆಗಮಿಸಿ ಪೊಲೀಸ್ ಕಮಿಷನರ್‌ಗೆ ಮಂಜುಳಾ ದೂರು ನೀಡಿದ್ದಾರೆ.

## ಗ್ಯಾಸ್: ವದಂತಿ ಹರಡದಂತೆ ಕ್ರಮ

ಬೆಂಗಳೂರು: ರಾಜ್ಯದ ವಿವಿಧ ಆಟೋ ಗ್ಯಾಸ್ ಬಂಕ್‌ಗಳಲ್ಲಿ ಅನಿಲದ ದಾಸ್ತಾನು ಕೊರತೆಯಿದೆ ಎಂಬ ತಪ್ಪು ಮಾಹಿತಿಯ ಆಧಾರದ ಮೇಲೆ, ಕಳೆದ ಕೆಲವು ದಿನಗಳಿಂದ ಆಟೋ ಮಾಲೀಕರು ಮತ್ತು ಚಾಲಕರು ಬಂಕ್‌ಗಳ ಮುಂದೆ ಸುದೀರ್ಘ ಸರತಿ ಸಾಲಿನಲ್ಲಿ ನಿಲ್ಲುತ್ತಿರುವ ಅಂಶ ಸರ್ಕಾರದ ಗಮನಕ್ಕೆ ಬಂದಿದೆ. ಈ ಕುರಿತು ಕೆಲವು ಮಾಧ್ಯಮಗಳಲ್ಲಿ ಪ್ರಕಟವಾಗಿರುವ ವರದಿಗಳು ಕೇವಲ ವದಂತಿಗಳಾಗಿದ್ದು, ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯು ಸ್ಪಷ್ಟಪಡಿಸಿದೆ.

ಕೆಲವು ಖಾಸಗಿ ಆಟೋ ಗ್ಯಾಸ್ ಸರಬರಾಜು ಸಂಸ್ಥೆಗಳಲ್ಲಿ ಮಾತ್ರ ಅಲ್ಪಮಟ್ಟಿನ ಕೊರತೆ ಕಂಡುಬಂದಿದ್ದು, ಇದನ್ನು ಸರಿಪಡಿಸಲು ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳಾದ ಇಂಡಿಯನ್ ಆಯಿಲ್, ಭಾರತ್ ಪೆಟ್ರೋಲಿಯಂ ಮತ್ತು ಹಿಂದೂಸ್ತಾನ್ ಪೆಟ್ರೋಲಿಯಂ ಮೂಲಕ ಹೆಚ್ಚಿನ ಪ್ರಮಾಣದ ಅನಿಲವನ್ನು ಪೂರೈಕೆ ಮಾಡಲಾಗುತ್ತಿದೆ.

ಹಿಂದೆ ಈ ಮೂರು ಸಂಸ್ಥೆಗಳು ಸರಾಸರಿ 56.67 ಮೆಟ್ರಿಕ್ ಟನ್ ಆಟೋ ಗ್ಯಾಸ್ ಅನ್ನು ಸರಬರಾಜು ಮಾಡುತ್ತಿದ್ದವು. ಆದರೆ ಪ್ರಸ್ತುತ ಬೇಡಿಕೆಯನ್ನು ಪೂರೈಸಲು ಸರಬರಾಜು ಪ್ರಮಾಣವನ್ನು ಗಣನೀಯವಾಗಿ ಹೆಚ್ಚಿಸಲಾಗಿದ್ದು, ಸದ್ಯ ಪ್ರತಿದಿನ ಸರಾಸರಿ 83.58 ಮೆಟ್ರಿಕ್ ಟನ್ ಗ್ಯಾಸ್ ಅನ್ನು ಚಿಲ್ಲರೆ ಮಾರಾಟ ಮಳಿಗೆಗಳಿಗೆ ಪೂರೈಸಲಾಗುತ್ತಿದೆ.

## ಇಂದು ಪಿಯು ಫಲಿತಾಂಶ

ಬೆಂಗಳೂರು: 2026ರ ದ್ವಿತೀಯ ಪಿಯುಸಿ ಪರೀಕ್ಷೆ-1ರ ಫಲಿತಾಂಶವು ಹೊರಬೀಳಲಿದೆ. ಮಧ್ಯಾಹ್ನ 3 ಗಂಟೆಗೆ ಫಲಿತಾಂಶ ಪ್ರಕಟವಾಗಲಿದೆ.

https://karresults.nic.in ಲಿಂಕ್ ಮೂಲಕ ಹಾಗೂ KarnatakaOne Mobile App ಮೂಲಕವೂ ರಿಸಲ್ಟ್ ನೋಡಬಹುದು. ಅಲ್ಲದೆ, ವಿದ್ಯಾರ್ಥಿಗಳ ನೋಂದಾಯಿತ ಮೊಬೈಲ್ ಸಂಖ್ಯೆಗೆ ವಾಟ್ಸ್‌ಆಪ್/ಎಸ್‌ಎಂಎಸ್ ಮೂಲಕವೂ ಫಲಿತಾಂಶದ ಮಾಹಿತಿಯನ್ನು ಮಂಡಳಿಯಿಂದ ರವಾನಿಸಲಾಗುತ್ತಿದೆ ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ವರ್ಷ ಮೊದಲ ಬಾರಿಗೆ ವಿಶೇಷವಾಗಿ, ವಿದ್ಯಾರ್ಥಿಗಳ ಫಲಿತಾಂಶದ ಅಂಕ ಪಟ್ಟಿಯು ಡಿಜಿಲಾಕರ್ ಮೂಲಕ ಇಂದು ಮಧ್ಯಾಹ್ನ 3 ಗಂಟೆಗೆ ಲಭ್ಯವಿರಲಿದೆ.

## 'ಖರ್ಗೆಗೆ ಅರಳು-ಮರಳು ನಾಲಿಗೆ ಹದ್ದು ಬಸ್ತಿನಲ್ಲಿಟ್ಟುಕೊಳ್ಳಲಿ'




ಬೆಂಗಳೂರು: ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ತಮ್ಮ ನಾಲಿಗೆಯನ್ನು ಹದ್ದುಬಸ್ತಿನಲ್ಲಿ ಇಟ್ಟುಕೊಳ್ಳಬೇಕು. ಅರಳು- ಮರಳು ರೀತಿ ಮಾತನಾಡಬಾರದು. ಇವರ ಮಾನಸಿಕ ಆರೋಗ್ಯ ಸರಿ ಇಲ್ಲ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಹೇಳಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮಲ್ಲಿಕಾರ್ಜುನ ಖರ್ಗೆ ಅವರು ಬಿಜೆಪಿ ಮತ್ತು ಆರ್‌ಎಸ್‌ಎಸ್ ವಿರುದ್ಧ ಪ್ರಚೋದನಾಕಾರಿ ಹೇಳಿಕೆ ನೀಡಿರುವುದು ಖಂಡನೀಯ. ದೇಶದಾದ್ಯಂತ ಜನರು ಇವರ ವಿರುದ್ಧ ಹಿಡಿಶಾಪ ಹಾಕುತ್ತಿದ್ದಾರೆ. ಕೊಲ್ಲಲು ಪ್ರಚೋದನೆ ನೀಡುವುದು ಸರಿ ಅಲ್ಲ ಎಂದರು.

ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧ ತಡೆ ಮಸೂದೆಗೆ ಅಂಗೀಕಾರ ದೊರೆತಿದೆ. ಆ ಮಸೂದೆ ಅನ್ವಯ ಖರ್ಗೆ ಅವರ ರೀತಿ ಪ್ರಚೋದನಾಕಾರಿಯಾಗಿ ಮಾತನಾಡಿದರೆ ಪ್ರಕರಣ ದಾಖಲು ಮಾಡಬಹುದು. ಆದ್ದರಿಂದ ಬಿಜೆಪಿ ದೂರು ನೀಡಿದೆ. ಖರ್ಗೆ ಅವರ ಹೇಳಿಕೆ ಖಂಡಿಸಿ ಬಿಜೆಪಿಯ ಕಾರ್ಯಕರ್ತರು ಸಿಡಿದೆದ್ದು ಎಲ್ಲಾ ಕಡೆ ಪ್ರತಿಭಟನೆ ನಡೆಸುತ್ತಿದ್ದಾರೆ ಎಂದರು.

ರಜಾಕರಿಂದ ತಮ್ಮ ಕುಟುಂಬದ ಮೇಲೆ ದಾಳಿ ನಡೆದಿದೆ ಎಂದು ಖರ್ಗೆ ಅವರೇ ಹೇಳಿದ್ದಾರೆ. ತಮ್ಮ ಮನೆತನ ಹಾಳು ಮಾಡಿದವರ ವಿರುದ್ಧ ಮಾತನಾಡುವುದನ್ನು ಬಿಟ್ಟು ಬಿಜೆಪಿ ಮತ್ತು ಆರ್‌ಎಸ್‌ಎಸ್ ವಿರುದ್ಧ ಮಾತನಾಡುತ್ತಿದ್ದಾರೆ ಎಂದು ಹೇಳಿದರು. ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆಗೆ ಮಗ ಪ್ರಿಯಾಂಕ್ ಖರ್ಗೆ ಅವರು ಬೆಂಬಲ ನೀಡಿದ್ದಾರೆ. ಇದು ಬೇವಿನ ಕಾಯಿಗೆ ಹಾಗಲಕಾಯಿ ಸಾಕ್ಷಿ ಇದ್ದಂತೆ. ಇವರಿಬ್ಬರ ಮನಸ್ಥಿತಿ ಒಂದೇ ಆಗಿದೆ ಆಗಿದೆ ಎಂದರು.

ಮಲ್ಲಿಕಾರ್ಜುನ ಖರ್ಗೆ ಅವರ ಬೆಂಬಲಕ್ಕೆ ಕಾಂಗ್ರೆಸ್‌ನಿಂದ ಯಾರೂ ಬಂದಿಲ್ಲ. ಪ್ರಿಯಾಂಕ್ ಹಾಗೂ ಮಲ್ಲಿಕಾರ್ಜುನ ಖರ್ಗೆ ಅವನ್ನು ನಿರ್ಲಕ್ಷ್ಯ ಮಾಡಿದ್ದಾರೆ. ಕಾಂಗ್ರೆಸ್‌ನಿಂದ ಮೂಲೆಗುಂಪಾದ ಇವರಿಬ್ಬರು ತಮ್ಮನ್ನು ತೋರಿಸಿಕೊಳ್ಳಲು ಈ ರೀತಿಯ ಹಗೆತನದ ಹೇಳಿಕೆ ನೀಡಿದ್ದಾರೆ. ಅಪ್ಪ ಮತ್ತು ಮಗನ ತಲೆಯಲ್ಲಿ ವಿಷಕಾರಿ ಹಾವಿಗಿಂತ ಹೆಚ್ಚು ವಿಷ ಇದೆ ಎಂದು ವ್ಯಂಗ್ಯವಾಡಿದರು.



ಬೆಂ: 93.5 ರೆಡ್ ಎಫ್‌ಎಂ ಹಾಗೂ ೦೯ ಸೊಲ್ಯೂಷನ್ಸ್ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ದಿ ವಾಕ್‌ಥಾನ್ ಕಾರ್ಯಕ್ರಮದ ಟಿ-ಶರ್ಟ್ ಬಿಡುಗಡೆ ಸಮಾರಂಭ ಯಶಸ್ವಿಯಾಗಿ ನಡೆಯಿತು. ನಗರದ ಸೇಂಟ್ ಜೋಸೆಫ್ ಇಂಡಿಯನ್ ಇನ್‌ಸ್ಟಿಟ್ಯೂಷನ್ ಮೈದಾನದಲ್ಲಿ ಆಯೋಜಿಸಲಾದ ಈ ವಾಕ್‌ಥಾನ್‌ನಲ್ಲಿ ವಿವಿಧ ಸಮುದಾಯದ ಸದಸ್ಯರು, ಕಾರ್ಪೊರೇಟ್ ಪ್ರತಿನಿಧಿಗಳು, ವಿದ್ಯಾರ್ಥಿಗಳು ಹಾಗೂ ಫಿಟ್ನೆಸ್ ಅಭಿಮಾನಿಗಳು ಉತ್ಸಾಹದಿಂದ ಭಾಗವಹಿಸಿ ಗುಣಮಟ್ಟದ ಶಿಕ್ಷಣವನ್ನು ಎಲ್ಲರಿಗೂ ಸುಲಭವಾಗಿ ಲಭ್ಯವಾಗುವಂತೆ ಮಾಡುವ ಉದ್ದೇಶದಿಂದ ನಡೆಯುತ್ತಿದೆ ವೇದಿಕೆಯಲ್ಲಿ, ದಿಲೀಪ್ ಜಯರಾಮ್, ಆರ್ ಜೆ. ರೋಹಿತ್,೦೯ ಸೊಲ್ಯೂಷನ್ಸ್ ಸಂಸ್ಥೆಯ ಮುಖ್ಯಸ್ಥೆ ಅಪರ್ಣಾ, ನಟ ಹಾಗೂ ನಿರ್ಮಾಪಕರಾದ ಗಂಡಸಿ ಸದಾನಂದಸ್ವಾಮಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಕಾರ್ಯಕ್ರಮವು ಸಮಾಜದಲ್ಲಿ ಶಿಕ್ಷಣದ ಮಹತ್ವದ ಕುರಿತು ಜಾಗೃತಿ ಮೂಡಿಸುವುದರೊಂದಿಗೆ, ಆರೋಗ್ಯಕರ ಜೀವನಶೈಲಿಯನ್ನೂ ಉತ್ತೇಜಿಸುವಲ್ಲಿ ಪಾತ್ರವಹಿಸಲಿದೆ ಎಂದು ತಿಳಿಸಿದರು.

# 24 ಗಂಟೆ ಕಳೆದ್ರೂ ಸಿಗದ ಸುಳಿವು

ಚಿಕ್ಕಮಗಳೂರು

ದತ್ತಪೀಠದ ತಪ್ಪಲಿನ ಮಾಣಿಕ್ಯಾಧಾರಕ್ಕೆ ಕುಟುಂಬದ ಜೊತೆ ಬಂದಿದ್ದ 15 ವರ್ಷದ ಬಾಲಕಿ ಇದ್ದಕ್ಕಿದ್ದಂತೆ ಆ ದಟ್ಟ ಕಾನನದಲ್ಲಿ ಕಾಣೆಯಾಗಿದ್ದು, ಒಂದು ದಿನ ಕಳೆದ್ರೂ ಸುಳಿವು ಸಿಕ್ಕಿಲ್ಲ.

ಕೇರಳದ ಪಾಲಕ್ಕಾಡ್ ಜಿಲ್ಲೆಯ ಶ್ರೀನಂದ (15) ನಾಪತ್ತೆಯಾದ ಬಾಲಕಿ. ಶಾಲೆಗೆ ರಜೆ ಸಲುವಾಗಿ ಕುಟುಂಬಸ್ಥರ ಸಮೇತ ಕರ್ನಾಟಕದ ಪ್ರವಾಸಕ್ಕೆ ಬಂದಿದ್ದಳು. ಉತ್ತರ ಕರ್ನಾಟಕ ಸುತ್ತಿ ದಕ್ಷಿಣ ಕಾರ್ನಾಟಕದ ಕಾಫಿನಾಡಿಗೆ ಬಂದಿದ್ದವಳು ದತ್ತಪೀಠದ ಮಾಣಿಕ್ಯಾಧಾರ ಬಳಿ ಇದ್ದಕ್ಕಿದ್ದಂತೆ ನಾಪತ್ತೆಯಾಗಿದ್ದಾಳೆ. ಕುಟುಂಬದ ಜೊತೆಗಿದ್ದ ಆಕೆ ಮಾಣಿಕ್ಯಾಧಾರದ ಜಲಪಾತದ ಬಳಿ ಹೋಗುವಾಗ ಕುಟುಂಬಸ್ಥರು ಮುಂದೆ ಹೋಗುತ್ತಿದ್ದರು. ಈ ವೇಳೆ ಹಿಂದಿದ್ದವಳು ಕ್ಷಣಾರ್ಧದಲ್ಲಿ ನಾಪತ್ತೆಯಾಗಿದ್ದಾಳೆ.ಕುಟುಂಬಸ್ಥರು ತಕ್ಷಣ ಸುತ್ತಮುತ್ತ ಹುಡುಕಾಟ ಆರಂಭಿಸಿದರೂ ಕೂಡ ಆಕೆ ಸುಳಿವು ಸಿಕ್ಕಿಲ್ಲ. ವಿಷಯ ತಿಳಿದು ಅರಣ್ಯ ಇಲಾಖೆ ಸಿಬ್ಬಂದಿ, ಪೊಲೀಸ್ ಹಾಗೂ ಅಗ್ನಿಶಾಮಕ ದಳದ 30ಕ್ಕೂ ಹೆಚ್ಚು ಸಿಬ್ಬಂದಿ ಏ.7ರ ಮಧ್ಯರಾತ್ರಿ 1 ಗಂಟೆವರೆಗೆ ಹುಡುಕಾಡಿದ್ದಾರೆ.

# ಪತ್ರಕರ್ತ-ರಂಗಕರ್ಮಿ ಚನ್ನಕೇಶವಮೂರ್ತಿಗೆ ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ



ಬೆಂಗಳೂರು

ಸಂವಹನ ಮಾಸಪತ್ರಿಕೆಯ ಸಂಪಾದಕರಾಗಿರುವ ಪತ್ರಕರ್ತ ಹಾಗೂ ರಂಗಕರ್ಮಿ ಚನ್ನಕೇಶವಮೂರ್ತಿಯವರಿಗೆ ಕರ್ನಾಟಕ ಸರ್ಕಾರದ ಕರ್ನಾಟಕ ನಾಟಕ ಅಕಾಡೆಮಿ ವತಿಯಿಂದ 2025–26ನೇ ಸಾಲಿನ ವಾರ್ಷಿಕ ರಾಜ್ಯ ಪ್ರಶಸ್ತಿ ಪ್ರದಾನ ಮಾಡಲಾಗಿದೆ.

ಸುಮಾರು ನಾಲ್ಕು ದಶಕಗಳ ಕಾಲ ಮುದ್ರಣ ಮಾಧ್ಯಮದಲ್ಲಿ ವಿವಿಧ ಪತ್ರಿಕೆಗಳ ಮುದ್ರಕರಾಗಿ, ಮುಕ್ತ ಬರಹಗಾರರಾಗಿ ಸೇವೆ ಸಲ್ಲಿಸಿರುವ ಅವರು ಕನ್ನಡ ಪತ್ರಿಕೋದ್ಯಮ ಕ್ಷೇತ್ರದಲ್ಲಿ ವಿಶಿಷ್ಟ ಗುರುತಿಸಿಕೊಂಡಿದ್ದಾರೆ. ಪತ್ರಿಕೋದ್ಯಮದ ಜೊತೆಗೆ ರಂಗಭೂಮಿಯಲ್ಲಿಯೂ ನಟ, ನಾಟಕಕಾರ ಹಾಗೂ ನಿರ್ದೇಶಕರಾಗಿ ತೊಡಗಿಸಿಕೊಂಡು ಮಹತ್ವದ ಕೊಡುಗೆ ನೀಡಿದ್ದಾರೆ.


ಚನ್ನಕೇಶವಮೂರ್ತಿಯವರ ಬಹುಮುಖ ಸೇವೆಯನ್ನು ಗುರುತಿಸಿ ಕರ್ನಾಟಕ ನಾಟಕ ಅಕಾಡೆಮಿ ಈ ಪ್ರತಿಷ್ಠಿತ ಪ್ರಶಸ್ತಿಯನ್ನು ನೀಡಿ ಗೌರವಿಸಿದೆ. ಈ ಸಾಧನೆಗೆ ಸಾಹಿತ್ಯ ಮತ್ತು ರಂಗಭೂಮಿ ವಲಯದ ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ.

# ನಾಪತ್ತೆಯಾಗಿದ್ದ ಪ್ರಥಮ ದರ್ಜೆ ಕಂಟ್ರಾಕ್ಟರ್ ಶವ ಪತ್ತೆ!

ಮಂಡ್ಯ

ನಾಲ್ಕು ದಿನಗಳ ಹಿಂದೆ ಕಾಣೆಯಾಗಿದ್ದ ಪ್ರಥಮ ದರ್ಜೆ ಗುತ್ತಿಗೆದಾರ ಅನುಮಾನಾಸ್ಪದ ರೀತಿಯಲ್ಲಿ ಕಾವೇರಿ ನದಿಯಲ್ಲಿ ಶವವಾಗಿ ಪತ್ತೆಯಾಗಿರುವ ಘಟನೆ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದಲ್ಲಿ ನಡೆದಿದೆ. ಶ್ರೀರಂಗಪಟ್ಟಣ ತಾಲೂಕಿನ ಹುಣಸನ ಹಳ್ಳಿಯ ನಿವಾಸಿ ಪವನ್ (27) ಎಂಬ ಯುವಕನ ಶವ ಕಾವೇರಿ ನದಿಯಲ್ಲಿ ಪತ್ತೆಯಾಗಿದ್ದು, ಈ ಪ್ರಕರಣ ಹಲವು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ. ಪವನ್ ಕೋಟ್ಯಾಂತರ ರೂಪಾಯಿ ಮೌಲ್ಯದ ಕಾಮಗಾರಿಗಳನ್ನು ನಿರ್ವಹಿಸುತ್ತಿದ್ದ ಕಾಂಟ್ರಾಕ್ಟರ್ ಆಗಿದ್ದು, ನಾಲ್ಕು ದಿನಗಳ ಹಿಂದೆ ಕೆಲಸ ಇದೆ, ಇಂದು ಮನೆಗೆ ಬರುವುದಿಲ್ಲ ಎಂದು ಕುಟುಂಬಕ್ಕೆ ತಿಳಿಸಿ ಹೊರಟಿದ್ದ. ಶ್ರೀರಂಗಪಟ್ಟಣ ತಾಲೂಕಿನ ಕಾವೇರಿ ನದಿಯಲ್ಲಿ ಪವನ್ ಅವರ ಮೃತದೇಹ ಪತ್ತೆಯಾಗಿದ್ದು, ದೇಹದ ಮೇಲೆ ಗಾಯ ಗಳಿರುವುದು ಕಂಡುಬಂದಿದೆ. ಈ ಹಿನ್ನೆಲೆಯಲ್ಲಿ ಕುಟುಂಬಸ್ಥರು ಮತ್ತು ಆಪ್ತರು ಇದು ಕೊಲೆ ಆಗಿರಬಹುದೆಂದು ಶಂಕೆ ವ್ಯಕ್ತಪಡಿಸಿದ್ದಾರೆ. ಪವನ್ ಸಾವಿನ ಸತ್ಯಾಸತ್ಯತೆ ಕುರಿತು ಸಮಗ್ರ ತನಿಖೆ ನಡೆಸುವಂತೆ ಕುಟುಂಬಸ್ಥರು ಆಗ್ರಹಿಸಿದ್ದಾರೆ. ಪ್ರಕರಣ ಸಂಬಂಧ ಶ್ರೀರಂಗಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


# ನವೀನ ಪ್ಲಂಬಿಂಗ್ ತಂತ್ರಜ್ಞಾನಗಳ ಕುರಿತು ಹೆಗ್ಗುರುತು ಸೆಮಿನಾರ್



ಬೆಂಗಳೂರು

ಸ್ಮೈಲ್ ಫೌಂಡೇಶನ್, ಭಾರತದ ಪ್ರಮುಖ ಪ್ಲಂಬಿಂಗ್ ಮತ್ತು ನೀರು ನಿರ್ವಹಣಾ ಪರಿಹಾರಗಳ ಪೂರೈಕೆದಾರರಾದ ಅಲಿಯಾಕ್ಸಿಸ್‌ನಿಂದ ಆಶೀರ್ವಾದ್ ಸಹಯೋಗದೊಂದಿಗೆ ಬೆಂಗಳೂರಿನಲ್ಲಿ "ಪ್ಲಂಬಿಂಗ್‌ನಲ್ಲಿ ನವೀನ ತಂತ್ರಜ್ಞಾನಗಳು" ಎಂಬ ವಿಷಯದ ಕುರಿತು ಸೆಮಿನಾರ್ ಅನ್ನು ಆಯೋಜಿಸಿತು. ಸೆಮಿನಾರ್ 44% ರಷ್ಟು ಉದ್ಯೋಗಿಗಳಿಗೆ ಆಧುನಿಕ ಪ್ಲಂಬಿಂಗ್ ತಂತ್ರಜ್ಞಾನಗಳೊಂದಿಗೆ ತರಬೇತಿ ನೀಡುವ ಮೂಲಕ ವಲಯವನ್ನು ಪರಿವರ್ತಿಸಲು, ಹೆಚ್ಚಿನ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಮಹತ್ವದ ಅವಕಾಶವನ್ನು ಹೈಲೈಟ್ ಮಾಡಿತು. ಉದ್ಯಮದ ನಾಯಕರು, ವಲಯ ಕೌಶಲ್ಯ ಮಂಡಳಿಗಳು ಮತ್ತು ತರಬೇತಿ ಸಂಸ್ಥೆಗಳನ್ನು ಒಟ್ಟುಗೂಡಿಸಿ, ಸೆಮಿನಾರ್ ತಂತ್ರಜ್ಞಾನ ಅಳವಡಿಕೆಯನ್ನು ವೇಗಗೊಳಿಸುವುದು, ನೆಲದ ತರಬೇತಿಯನ್ನು ವಿಸ್ತರಿಸುವುದು ಮತ್ತು ಭಾರತದ ತ್ವರಿತ ನಗರ ಮತ್ತು ಮೂಲಸೌಕರ್ಯ ಬೆಳವಣಿಗೆಯನ್ನು ಬೆಂಬಲಿಸಲು ಭವಿಷ್ಯಕ್ಕೆ ಸಿದ್ಧವಾದ ಪ್ಲಂಬಿಂಗ್ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವುದರ ಮೇಲೆ ಕೇಂದ್ರೀಕರಿಸಿದೆ. ಈ ಸೆಮಿನಾರ್ ಉದಯೋನ್ಮುಖ ಪ್ರವೃತ್ತಿಗಳು, ವಿಕಸನಗೊಳ್ಳುತ್ತಿರುವ ಯೋಜನೆಯ ಅವಶ್ಯಕತೆಗಳು ಮತ್ತು ಪ್ಲಂಬಿಂಗ್ ವ್ಯವಸ್ಥೆಗಳಲ್ಲಿ ದಕ್ಷತೆ ಮತ್ತು ಸುಸ್ಥಿರತೆಯನ್ನು ಸುಧಾರಿಸುವಲ್ಲಿ ನಾವೀನ್ಯತೆಯ ಪಾತ್ರದ ಕುರಿತು ಒಳನೋಟಗಳನ್ನು ವಿನಿಮಯ ಮಾಡಿಕೊಳ್ಳಲು ಪಾಲುದಾರರಿಗೆ ಅಂತರ-ಉದ್ಯಮ ವೇದಿಕೆಯಾಗಿ ಕಾರ್ಯನಿರ್ವಹಿಸಿತು. ಈ ವಿಚಾರ ಸಂಕಿರಣದಲ್ಲಿ ಅಲಿಯಾಕ್ಸಿಸ್‌ನ ಆಶೀರ್ವಾದ್‌ನ ಶ್ರೀ ಸುಧೀರ್ ಪೊಬ್ಬತಿ, ಅಶೀರ್ವಾದ್ ತರಬೇತಿ ಅಕಾಡೆಮಿಯ ಶ್ರೀ ರೋಜರ್ ವಿನ್ಸೆಂಟ್, ನೀರು ನಿರ್ವಹಣೆ ಮತ್ತು ಪ್ಲಂಬಿಂಗ್ ವಲಯದ ಕೌಶಲ್ಯ ಮಂಡಳಿಯ ಪ್ರತಿನಿಧಿಗಳು, ಪ್ರೆಸ್ಟೀಜ್ ಗ್ರೂಪ್, ಕೊಹ್ಲರ್ ಮತ್ತು ಸಿಮಿಂಡಿಯಾ ಪ್ರಾಜೆಕ್ಟ್ ಲಿಮಿಟೆಡ್‌ನ ಉದ್ಯಮ ಮುಖಂಡರು ಮತ್ತು ಸ್ಮೈಲ್ ಫೌಂಡೇಶನ್‌ನ ಪ್ರಮುಖ ಪ್ರತಿನಿಧಿಗಳು ಭಾಗವಹಿಸಿದ್ದರು.

# ಜಿಸಿಇಎಂ ವಿಭಾಗದಿಂದ ತಾಂತ್ರಿಕ ಉತ್ಸವ




ಬೆಂಗಳೂರು

ಗೋಪಾಲನ್ ಕಾಲೇಜ್ ಆಫ್ ಎಂಜಿನಿಯರಿಂಗ್ ಮತ್ತು ಮ್ಯಾನೇಜ್‌ಮೆಂಟ್ (ಜಿಸಿಇಎಂ) ನಲ್ಲಿ ಕಂಪ್ಯೂಟರ್ ಸೈನ್ಸ್ ಮತ್ತು ಎಂಜಿನಿಯರಿಂಗ್ (ಸಿಎಸ್‌ಇ) ಮತ್ತು ಸಿಎಸ್‌ಇ (ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ) ವಿಭಾಗವು ಆಲ್ಗೋ-ರಿದಮ್ 3.0 ಅನ್ನು ಘೋಷಿಸಿದೆ.

ಇದು ಏಪ್ರಿಲ್ 10 ಮತ್ತು 11, 2026 ರಂದು ನಿಗದಿಯಾಗಿರುವ ತಾಂತ್ರಿಕ ಉತ್ಸವವಾಗಿದೆ. ಈ ಕಾರ್ಯಕ್ರಮವು ವಿದ್ಯಾರ್ಥಿಗಳಿಗೆ ತಂತ್ರಜ್ಞಾನ, ಸೃಜನಶೀಲತೆ ಮತ್ತು ನಾವೀನ್ಯತೆಯಲ್ಲಿ ತಮ್ಮ ಕೌಶಲ್ಯಗಳನ್ನು ಪ್ರದರ್ಶಿಸಲು ವೇದಿಕೆಯನ್ನು ನೀಡುತ್ತದೆ.

ಶ್ರೀ ಅಬ್ರಾರ್ ಸೈಯದ್ ಮುಖ್ಯ ಅತಿಥಿಯಾಗಿ ಸೇವೆ ಸಲ್ಲಿಸಲಿದ್ದಾರೆ. ಅವರು ಪ್ರಸ್ತುತ ಡೋಬಿನ್‌ನಲ್ಲಿ ಪ್ಲಾಟ್‌ಫಾರ್ಮ್ ಎಂಜಿನಿಯರಿಂಗ್ ಮುಖ್ಯಸ್ಥರಾಗಿದ್ದಾರೆ ಮತ್ತು ನೂಡಲ್ ಫ್ಯಾಕ್ಟರಿಯಲ್ಲಿ ಎಂಜಿನಿಯರಿಂಗ್ ಉಪಾಧ್ಯಕ್ಷ, ರೂಲ್‌ಜೀರೋದಲ್ಲಿ ಲೀಡ್ ಎಐ ಎಂಜಿನಿಯರ್ ಮತ್ತು ಜ್ಞಾಪ್ತಿಯಲ್ಲಿ ಸ್ಥಾಪಕ ಎಂಜಿನಿಯರ್ ಸೇರಿದಂತೆ ಹುದ್ದೆಗಳನ್ನು ಅಲಂಕರಿಸಿದ್ದಾರೆ. ಶ್ರೀ ಸೈಯದ್ ಎಐ ಮತ್ತು ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಪರಿಣತಿಯನ್ನು ಹೊಂದಿರುವ ಮಾನ್ಯತೆ ಪಡೆದ ಕಾರ್ಪೊರೇಟ್ ತರಬೇತುದಾರರೂ ಆಗಿದ್ದಾರೆ.

ಆಲ್ಗೋ-ರಿದಮ್ 3.0 ಪ್ರೋಗ್ರಾಮಿಂಗ್ ಮತ್ತು ಸಮಸ್ಯೆ-ಪರಿಹರಿಸುವ ಕೌಶಲ್ಯಗಳನ್ನು ನಿರ್ಣಯಿಸಲು ಕೋಡಿಂಗ್ ಸ್ಪರ್ಧೆಗಳನ್ನು ಒಳಗೊಂಡಿರುತ್ತದೆ; ಕಂಪ್ಯೂಟರ್ ವಿಜ್ಞಾನ ಕ್ಷೇತ್ರಗಳಲ್ಲಿ ಜ್ಞಾನವನ್ನು ಮೌಲ್ಯಮಾಪನ ಮಾಡಲು ತಾಂತ್ರಿಕ ರಸಪ್ರಶ್ನೆ; ಸ್ಪರ್ಧಾತ್ಮಕ ಭಾಗವಹಿಸುವಿಕೆಗಾಗಿ ಗೇಮಿಂಗ್ ಈವೆಂಟ್‌ಗಳು; ಕಾರ್ಯತಂತ್ರದ ಸ್ಪರ್ಧೆಗಾಗಿ ಚೆಸ್ ಪಂದ್ಯಾವಳಿ; ಸೃಜನಶೀಲ ಪ್ರದರ್ಶನಗಳಿಗಾಗಿ ನೃತ್ಯ ಕಾರ್ಯಕ್ರಮ ಇಗ್ನೈಟ್ ದಿ ಬೀಟ್; ನವೀನ ಪರಿಹಾರಗಳನ್ನು ಪ್ರದರ್ಶಿಸಲು ಪ್ರಾಜೆಕ್ಟ್ ಎಕ್ಸ್‌ಪೋ ಮತ್ತು ಐಡಿಯಾ ಪ್ರಸ್ತುತಿ; ಮತ್ತು ಸಂವಾದಾತ್ಮಕ ಆಟಗಳು ಮತ್ತು ಚಟುವಟಿಕೆಗಳನ್ನು ಒಳಗೊಂಡ ಮೋಜಿನ ಮತ್ತು ಸ್ಪಾಟ್ ಈವೆಂಟ್‌ಗಳು.


# ದೇಶದಾದ್ಯಂತ ಮೊದಲ ಬಾರಿಗೆ 'ವಿಶ್ವ ವಜ್ರ ದಿನ' ಆಚರಣೆ

ಬೆಂಗಳೂರು

ಬುಧವಾರ ಏ.8ರಂದು ದೇಶದಾದ್ಯಂತ ಮೊದಲ ಬಾರಿಗೆ 'ವಿಶ್ವ ವಜ್ರ ದಿನ'ವನ್ನು ಆಚರಿಸಲಾಯಿತು. ನೈಸರ್ಗಿಕ ವಜ್ರಗಳೊಂದಿಗೆ ಜನರ ಭಾವನಾತ್ಮಕ ಬಾಂಧವ್ಯ, ನೆನಪುಗಳು, ಪರಂಪರೆ ಮತ್ತು ವೈಯಕ್ತಿಕ ಸಾಧನೆಗಳನ್ನು ಸ್ಮರಿಸುವ ಉದ್ದೇಶದಿಂದ ಈ ವಿಶೇಷ ದಿನವನ್ನು ಪರಿಚಯಿಸಲಾಗಿದೆ.

ಈ ದಿನವನ್ನು ನ್ಯಾಚುರಲ್ ಡಐಮಂಡ್ ಕೌನ್ಸಿಲ್ ಆರಂಭಿಸಿದ್ದು, ನೈಸರ್ಗಿಕ ವಜ್ರಗಳ ಹೊಳಪಿನಾಚೆಗೆ ಇರುವ ಪ್ರೀತಿ, ಜೀವನದ ಮಹತ್ವದ ಕ್ಷಣಗಳು ಮತ್ತು ಕುಟುಂಬದ ಪರಂಪರೆಯನ್ನು ಜಗತ್ತಿನ ಮುಂದೆ ತರುವ ಉದ್ದೇಶ ಹೊಂದಿದೆ.

ಪ್ರತಿ ನೈಸರ್ಗಿಕ ವಜ್ರವೂ ಕೇವಲ ಒಂದು ಆಭರಣವಲ್ಲ. ಅದು ವ್ಯಕ್ತಿಯ ಜೀವನದಲ್ಲಿ ನಡೆದ ಮಹತ್ವದ ಕ್ಷಣ, ಒಂದು ಸಂಬಂಧದ ನೆನಪು, ಕುಟುಂಬದ ಪರಂಪರೆ ಮತ್ತು ವೈಯಕ್ತಿಕ ಗೆಲುವಿನ ಸಂಕೇತವಾಗಿದೆ. ಇದೇ ಕಾರಣದಿಂದ ವಿಶ್ವ ವಜ್ರ ದಿನವು ಜಾಗತಿಕ ಮಟ್ಟದಲ್ಲಿ ವಿಶೇಷ ಆಚರಣೆಯಾಗಿ ರೂಪುಗೊಂಡಿದೆ. ಈ




ಅಭಿಯಾನದಲ್ಲಿ ಕುಶಲಕರ್ಮಿಗಳು, ತಯಾರಕರು, ವ್ಯಾಪಾರಿಗಳು ಮತ್ತು ಗ್ರಾಹಕರು ತಮ್ಮ ನೈಜ ಅನುಭವಗಳು ಹಾಗೂ ವಜ್ರಗಳೊಂದಿಗೆ ಹೊಂದಿರುವ ಭಾವನಾತ್ಮಕ ಸಂಬಂಧವನ್ನು ಹಂಚಿಕೊಂಡರು.ಭಾರತದಲ್ಲಿ ಈ ಆಚರಣೆ ಪರಂಪರೆ ಮತ್ತು ಆಧುನಿಕ ಆಶಯಗಳ ಸುಂದರ ಸಂಗಮವಾಗಿ ಮೂಡಿಬಂದಿತು. ಪ್ರಮುಖ ವಜ್ರ ವ್ಯಾಪಾರಿಗಳು ಹಾಗೂ ತಯಾರಕರು, ನೈಸರ್ಗಿಕ ವಜ್ರವು ತನ್ನ ಮೂಲದಿಂದ ಅಂತಿಮ ಆಭರಣವಾಗುವವರೆಗೆ ಸಾಗುವ ಪಯಣವನ್ನು ಜನರಿಗೆ ಪರಿಚಯಿಸಿದರು.

# ಬಸವೇಶ್ವರರ ಅಶ್ವಾರೂಢ ಪ್ರತಿಮೆಯ ಮೇಲೆ ಸೂರ್ಯನ ಹೊಂಬೆಳಕು

ಇಳಕಲ್

ನೇಯ್ಗೆಯ ನಗರಿ, ಕೆಂಪು ಕಲ್ಲಿನ ನಾಡು ಇಳಕಲ್ ನಗರವು ಬುಧವಾರ ಒಂದು ಅದ್ಭುತ ಲೋಕಕ್ಕೆ ಸಾಕ್ಷಿಯಾಯಿತು. ಸೂರ್ಯೋದಯದ ಹೊಂಬೆಳಕು ಜಗಜ್ಯೋತಿ ಬಸವಣ್ಣನವರ ಭವ್ಯ ಅಶ್ವಾರೂಢ ಪ್ರತಿಮೆಯ ಮೇಲೆ ಬಿದ್ದಾಗ ಸೃಷ್ಟಿಯಾದ ದಿವ್ಯ ದೃಶ್ಯವು ಸಾರ್ವಜನಿಕರ ಕಣ್ಣಿಗೆ ಹಬ್ಬವನ್ನುಂಟು ಮಾಡಿತು.

ಕಾಯಕ ಯೋಗಿಯ ತೇಜಸ್ಸು:

ನಗರದ ಆಕಾಶದಲ್ಲಿ ಮುಂಜಾನೆಯ ಕೆಂಬಣ್ಣದ ಚಿತ್ತಾರ ಮೂಡುತ್ತಿದ್ದಂತೆ, ಇತ್ತ ಭೂಮಿಯ ಮೇಲೆ ಕ್ರಾಂತಿ ಯೋಗಿ ಬಸವಣ್ಣನವರ ತತ್ವಗಳು ಮರುಜೀವ ಪಡೆದಂತೆ ಭಾಸವಾಯಿತು. ಎತ್ತರದ ಪಾಮ್ ಮರಗಳ ಹಿನ್ನೆಲೆಯಲ್ಲಿ, ಹಸಿರು ಶಾಖೆಗಳ ನಡುವಿನಿಂದ ಕುದುರೆಯನ್ನೇರಿದ ಬಸವಣ್ಣನವರ ಪ್ರತಿಮೆ ಸೂರ್ಯನ ಕಿರಣಗಳನ್ನು ಸ್ವಾಗತಿಸುತ್ತಿರುವ ದೃಶ್ಯ ಮನಮೋಹಕವಾಗಿತ್ತು.

# ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

ತುಮಕೂರು

ತುಮಕೂರು ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯಿಂದ ಪ್ರತಿಷ್ಠಿತ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶ ಕಲ್ಪಿಸಲು 5ನೇ ತರಗತಿಯಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿಗೆ ಸೇರಿದ ಪ್ರತಿಭಾವಂತ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಏಪ್ರಿಲ್ 15 ರಿಂದ ಮೇ 4ರೊಳಗಾಗಿ ಜಾಲತಾಣ www.sw.kar.nic.in ಮೂಲಕ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಿದ ನಂತರ ಕಡ್ಡಾಯವಾಗಿ ಆನ್‌ಲೈನ್ ಅರ್ಜಿ ಹಾಗೂ ವಿದ್ಯಾರ್ಥಿಯ ಆಧಾರ್ ನಂಬರ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, 5ನೇ ತರಗತಿ ಅಂಕಪಟ್ಟಿ, ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಜಂಟಿ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ತುಮಕೂರು ಇವರಿಗೆ ಸಲ್ಲಿಸಬೇಕು.

ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳನ್ನು ಅರ್ಹತಾ ಪರೀಕ್ಷೆಯ ಮೂಲಕ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಅರ್ಹತಾ ಪರೀಕ್ಷೆಯನ್ನು ಮೇ 12ರಂದು ನಗರದ ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆ(ಬ್ಯಾಂಕ್ ರಸ್ತೆ, ಡಿಸಿಸಿ ಬ್ಯಾಂಕ್ ಎದುರು)ಯಲ್ಲಿ ನಡೆಸಲಾಗುವುದು.


ಹೆಚ್ಚಿನ ಮಾಹಿತಿಗಾಗಿ ತುಮಕೂರು ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಕಚೇರಿಯನ್ನು ಸಂಪರ್ಕಿಸಬೇಕೆಂದು ಸಹಾಯಕ ನಿರ್ದೇಶಕ ಶಿವಣ್ಣ ವಿ.ಎಸ್. ತಿಳಿಸಿದ್ದಾರೆ.

# ರಾಜ್ಯದಲ್ಲಿ ಆಟೋ ಗ್ಯಾಸ್ ಕೊರತೆ – ವದಂತಿಗಳಿಗೆ ಕಿವಿಗೊಡಬೇಡಿ – ಸಾರ್ವಜನಿಕರಿಗೆ ಕರೆ

ಹಾಸನ

ರಾಜ್ಯದ ವಿವಿಧ ಆಟೋ ಗ್ಯಾಸ್ ಬಂಕ್‌ಗಳಲ್ಲಿ ಅನಿಲದ ದಾಸ್ತಾನು ಕೊರತೆಯಿದೆ ಎಂಬ ತಪ್ಪು ಮಾಹಿತಿಯ ಆಧಾರದ ಮೇಲೆ, ಕಳೆದ ಕೆಲವು ದಿನಗಳಿಂದ ಆಟೋ ಮಾಲೀಕರು ಮತ್ತು ಚಾಲಕರು ಬಂಕ್‌ಗಳ ಮುಂದೆ ಸುದೀರ್ಘ ಸರತಿ ಸಾಲಿನಲ್ಲಿ ನಿಲ್ಲುತ್ತಿರುವ ಅಂಶ ಸರ್ಕಾರದ ಗಮನಕ್ಕೆ ಬಂದಿದೆ. ಈ ಕುರಿತು ಕೆಲವು ಮಾಧ್ಯಮಗಳಲ್ಲಿ ಪ್ರಕಟವಾಗಿರುವ ವರದಿಗಳು ಕೇವಲ ವದಂತಿಗಳಾಗಿದ್ದು, ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯು ಸ್ಪಷ್ಟಪಡಿಸಿದೆ.

ಕೆಲವು ಖಾಸಗಿ ಆಟೋ ಗ್ಯಾಸ್ ಸರಬರಾಜು



ಸಂಸ್ಥೆಗಳಲ್ಲಿ ಮಾತ್ರ ಅಲ್ಪಮಟ್ಟಿನ ಕೊರತೆ ಕಂಡುಬಂದಿದ್ದು, ಇದನ್ನು ಸರಿಪಡಿಸಲು ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳಾದ ಐಔಅ (ಇಂಡಿಯನ್ ಆಯಿಲ್), BPC (ಭಾರತ್ ಪೆಟ್ರೋಲಿಯಂ) ಮತ್ತು HPC (ಹಿಂದೂಸ್ತಾನ್ ಪೆಟ್ರೋಲಿಯಂ) ಮೂಲಕ ಹೆಚ್ಚಿನ ಪ್ರಮಾಣದ ಅನಿಲವನ್ನು ಪೂರೈಕೆ ಮಾಡಲಾಗುತ್ತಿದೆ.

ಹಿಂದೆ ಈ ಮೂರು ಸಂಸ್ಥೆಗಳು ಸರಾಸರಿ 56.67 ಮೆಟ್ರಿಕ್ ಟನ್ ಆಟೋ ಗ್ಯಾಸ್ ಅನ್ನು ಸರಬರಾಜು ಮಾಡುತ್ತಿದ್ದವು. ಆದರೆ ಪ್ರಸ್ತುತ ಬೇಡಿಕೆಯನ್ನು ಪೂರೈಸಲು ಸರಬರಾಜು ಪ್ರಮಾಣವನ್ನು ಗಣನೀಯವಾಗಿ ಹೆಚ್ಚಿಸಲಾಗಿದ್ದು, ಸದ್ಯ ಪ್ರತಿದಿನ ಸರಾಸರಿ 83.58 ಮೆಟ್ರಿಕ್ ಟನ್ ಗ್ಯಾಸ್ ಅನ್ನು ಚಿಲ್ಲರೆ ಮಾರಾಟ ಮಳಿಗೆಗಳಿಗೆ ಪೂರೈಸಲಾಗುತ್ತಿದೆ.

ಕಳೆದ ಐದು ದಿನಗಳ ಪೂರೈಕೆ ವಿವರ:-ಕಳೆದ ಏ.2 ರಿಂದ ಏ. 6 ರವರೆಗಿನ ಅಂಕಿಅಂಶಗಳನ್ನು ಗಮನಿಸಿದರೆ, ಪೂರೈಕೆಯಲ್ಲಿ ಸ್ಥಿರತೆ ಇರುವುದು ಕಂಡುಬರುತ್ತದೆ. ಏ. 2 ರಂದು 87.78 ಮೆಟ್ರಿಕ್ ಟನ್, ಏ. 3ರಂದು 86.05 ಮೆಟ್ರಿಕ್ ಟನ್, ಏ. 4 ರಂದು 84.80 ಮೆಟ್ರಿಕ್ ಟನ್, ಏ. 5ರಂದು ಗರಿಷ್ಠ 94.11 ಮೆಟ್ರಿಕ್ ಟನ್ ಹಾಗೂ ಏ. 6 ರಂದು 83.58 ಮೆಟ್ರಿಕ್ ಟನ್ ಅನಿಲವನ್ನು ಈ ಮೂರು ಪ್ರಮುಖ ಸಂಸ್ಥೆಗಳು ಯಶಸ್ವಿಯಾಗಿ ಪೂರೈಕೆ ಮಾಡಿವೆ.

ಆದ್ದರಿಂದ, ರಾಜ್ಯದ ಆಟೋ ಮಾಲೀಕರು ಮತ್ತು ಚಾಲಕರು ಇಂತಹ ಯಾವುದೇ ಸುಳ್ಳು ವದಂತಿಗಳನ್ನು ನಂಬಬಾರದು ಮತ್ತು ಆತಂಕಕ್ಕೊಳಗಾಗಿ ಬಂಕ್‌ಗಳ ಮುಂದೆ ಸಾಲುಗಟ್ಟಿ ನಿಲ್ಲಬಾರದು ಎಂದು ಸರ್ಕಾರ ಮನವಿ ಮಾಡಿದೆ. ಅನಿಲ ಪೂರೈಕೆ ವ್ಯವಸ್ಥಿತವಾಗಿ ನಡೆಯುತ್ತಿದ್ದು, ಸಾರ್ವಜನಿಕರು ಇಲಾಖೆಯೊಂದಿಗೆ ಸಹಕರಿಸಬೇಕೆಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ತಿಳಿಸಿದೆ.

# ಯೂರಿಯ ರಸಗೊಬ್ಬರ ಖರೀದಿಸಲು ಎಫ್‌ಐಡಿ ಸಂಖ್ಯೆ ಕಡ್ಡಾಯ

ತುಮಕೂರು

ಅಧಿಕೃತ ರಸಗೊಬ್ಬರ ಮಾರಾಟಗಾರರು 2026–27ನೇ ಸಾಲಿನ ಮುಂಗಾರು ಹಂಗಾಮಿಗೆ ಯೂರಿಯ ರಸಗೊಬ್ಬರವನ್ನು POS machine ಮೂಲಕ ವಿತರಣೆ ಮಾಡುವುದರ ಜೊತೆಗೆ ಕೃಷಿ ಇಲಾಖೆಯ ಅಧಿಕೃತ ಜಾಲತಾಣದ ಮೂಲಕ (ಕೆ-ಕಿಸಾನ್ ವೆಬ್‌ಸೈಟ್) ರೈತರ FID ಸಂಖ್ಯೆಯನ್ನು ನೋಂದಣಿ ಮಾಡಿಕೊಂಡು ವಿತರಣೆ ಮಾಡಲು ಈಗಾಗಲೇ ಕೃಷಿ ಇಲಾಖೆ ವತಿಯಿಂದ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದೆ.

ರೈತರು ಅಗತ್ಯವಿರುವ ಯೂರಿಯ ರಸಗೊಬ್ಬರವನ್ನು ಜಮೀನಿಗೆ ಅನುಗುಣವಾಗಿ ಖರೀದಿ ಮಾಡಬೇಕಾದರೆ ಮೊದಲು ಈಖಆ ಹೊಂದುವುದು ಕಡ್ಡಾಯವಾಗಿದ್ದು, ಇದರ ಆಧಾರದ ಮೇಲೆ ರಸಗೊಬ್ಬರವನ್ನು ರೈತರಿಗೆ ಕೆ-ಕಿಸಾನ್ ತಂತ್ರಾಂಶದ ಮೂಲಕವೇ ವಿತರಣೆ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ರೈತರ ಹೆಸರಿನಲ್ಲಿ ರಸಗೊಬ್ಬರವನ್ನು ಖರೀದಿಸಿ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವುದಕ್ಕೆ ಕಡಿವಾಣ ಹಾಕುವುದು, ರೈತರು ಸಹ ಮಿತವ್ಯಯವಾಗಿ ರಸಗೊಬ್ಬರ ಬಳಕೆ ಮಾಡುವುದರ ಮೇಲೆಯೂ ನಿಯಂತ್ರಣ ಮಾಡುವ ಉದ್ದೇಶದಿಂದ ಕೆ-ಕಿಸಾನ್ ತಂತ್ರಾಂಶದ ಮೂಲಕ ರಸಗೊಬ್ಬರ ವಿತರಣೆ ಮಾಡಲು ಕ್ರಮ ವಹಿಸಿದೆ. ರೈತರು ಈಖಆ ಹೊಂದಿರದೆ ಇದ್ದಲ್ಲಿ ತಮ್ಮ ಜಮೀನಿನ ಎಲ್ಲಾ ಪಹಣಿ ಬ್ಯಾಂಕ್ ಖಾತೆ ಪುಸ್ತಕ ಹಾಗೂ ಆಧಾರ್ ಕಾರ್ಡ್‌ನೊಂದಿಗೆ ಸಮೀಪದ ರೈತ ಸಂಪರ್ಕ ಕೇಂದ್ರ, ತೋಟಗಾರಿಕೆ ಇಲಾಖೆ, ಕಂದಾಯ ಇಲಾಖೆಗಳಿಗೆ ಭೇಟಿ ನೀಡಿ ಹೊಸದಾಗಿ FID ಸೃಜಿಸಿಕೊಳ್ಳಬೇಕು.

# ಹುಚ್ಚು ದೊರೆ ಟ್ರಂಪ್ ಜಗತ್ತನ್ನೇ ಯುದ್ದದ ಬಾಗಿಲಿಗೆ ತಳ್ಳಿದ್ದಾನೆ: ಬಿ.ಪೀರ್ ಬಾಷ

ಹಗರಿಬೊಮ್ಮನಹಳ್ಳಿ

ಪ್ರಭುತ್ವವು ಸದಾಜನತೆಯ ನಾಡಿಮಿಡಿತವನ್ನುಅರಿಯುವ ಕೆಲಸ ಮಾಡಬೇಕೇ ಹೊರತು ಉಸಿರು ನಿಲ್ಲಿಸುವ ಕೆಲಸ ಮಾಡಿದಾಗ ಸಂಘರ್ಷ ಅನಿವಾರ್ಯ ಎಂದು ಪ್ರಗತಿಪರಚಿಂತಕ ಮತ್ತು ವಿಜಯನಗರ ಕೃಷ್ಣದೇವರಾಯ ವಿವಿ ಸಿಂಡಿಕೇಟ್ ಸದಸ್ಯ ಬಿ. ಪೀರ್ ಬಾಷ ಹೇಳಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಎದ್ದೇಳು ಕರ್ನಾಟಕ ವೇದಿಕೆ ಹಾಗೂ ಬಂಡಾಯ ಸಾಹಿತ್ಯ ಸಂಘಟನೆ ಇವರ ಸಂಯುಕ್ತ ಆಶ್ರಯದಲ್ಲಿ ಯುದ್ಧವಿರೋಧಿ ಕವಿಗೋಷ್ಠಿಯನ್ನು ಉದ್ಘಾಟಿಸಿ ಅವರು ಮಾತನಾಡಿ ಯುದ್ಧದ ಕೆನ್ನಾಲಿಗೆ ಜನರ ಬದುಕಿನಜೊತೆ ಆಟವಾಡುವಾಗ ಆಳುವವರು ತಮ್ಮದೇ ಆದ ಲೋಕದಲ್ಲಿ ಮುಳುಗಿ, ದೈನಂದಿನ ಜನಜೀವನ ಅಸ್ತವ್ಯಸ್ತವಾದಾಗ ,ಹಸಿದವರೆದುರು ಸಿದ್ಧಾಂತವನ್ನು ಬೋಧಿಸಲಾಗದು. ಹಸಿವನ್ನು ನೀಗಿಸುವ ಪ್ರಯತ್ನ ಮಾಡದೆ ಜಗತ್ತಿನ ದೊಡ್ಡಣ್ಣ ಟ್ರಂಪ್‌ಜಗತ್ತನ್ನೆ ಯುದ್ಧದ ಬಾಗಿಲಿಗೆ ತಂದು ನಿಲ್ಲಿಸಿದ್ದಾನೆ. ರಾಜಕೀಯ ಪ್ರಜ್ಞೆಇರುವ ಪ್ರತಿಯೊಬ್ಬರೂ ಜವಾಬ್ದಾರಿಯಿಂದ ದನಿಯೆತ್ತುವುದು ದೇಶ ಉಳಿಸುವಲ್ಲಿ ತುಂಬ ಮುಖ್ಯ ಎಂದರು.



ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿದ್ದ ಕವಯಿತ್ರಿ ಸುಧಾ ಚಿದಾನಂದಗೌಡ ಮಾತನಾಡಿ ಯುದ್ಧದ ನೇರ ಪರಿಣಾಮ ಕುಟುಂಬಗಳ ಮೇಲಾಗುತ್ತದೆ ತಾಯಿ, ಪತ್ನಿ, ಮುಗ್ಧಮಕ್ಕಳು ಯುದ್ಧದ ಬಲಿಪಶುಗಳು.ತಾಯಿ ಕರುಳು ಹೊಂದಿದ ಕವಿಗಳು ಯುದ್ಧವಿರೋಧಿ ಪ್ರತಿಕ್ರಿಯೆ ವ್ಯಕ್ತಿಪಡಿಸುವುದು, ಒಂಟಿಕೊರಳಲ್ಲಾದರೂ ಸಶಕ್ತವಾದ ಪ್ರತಿರೋಧವನ್ನು ದಾಖಲಿಸಿದಂತಾಗುತ್ತದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ನಿರ್ಮಲಾ ಶಿವನಗುತ್ತಿ ಯುದ್ಧದ ಪರಿಣಾಮಗಳನ್ನು ಕುರಿತು ವಿವರಿಸುತ್ತಾ ಯುದ್ಧ ಮನೆ ಬಾಗಿಲಿಗೇ ಬಂದುತಲುಪಿದೆ.ಇದನ್ನು ಎದುರಿಸುವಲ್ಲಿ ದೇಶವಾಸಿಗಳು ಹೈರಾಣಾಗುತ್ತಿದ್ದಾರೆ ಎಂದರು.

ಹೊಸಪೇಟೆಯ ಚಿಂತಕ ಕುಮಾರ್ ಸಮತಲ ಅವರು ಎಸ್.ಐ.ಅರ್ ಕುರಿತು ಮಾಹಿತಿ ನೀಡುತ್ತಾ ದೇಶದ ಜನತೆಯನ್ನು ನಾಗರಿಕ ಎಂದು ನಿರೂಪಿಸುವಲ್ಲಿ ಪ್ರಭುತ್ವವು ಕ್ರೂರ ನೀತಿಯನ್ನು ಅನುಸರಿಸುವುದು ಅನಾದಿ ಕಾಲದಿಂದ ನಡೆದು ಬಂದಿದೆ. ಈ ಕುರಿತು ಯುವಜನತೆ ಹೆಚ್ಚು ಯೋಚಿಸಬೇಕು ಎಂದರು.

ಹಿರಿಯ ಕವಿ ಹುರುಕಡ್ಲಿ ಶಿವಕುಮಾರ ಯುದ್ಧದ ದೂರಕಾಲಿಕ ಪರಿಣಾಮಗಳನ್ನು ಕುರಿತು ಕವನ ವಾಚಿಸಿದರೆ, ಉಪ್ಪಾರ ಬಸಪ್ಪ ಮಹಾಭಾರತ ಕುರುಕ್ಷೇತ್ರಯುದ್ಧದ ಕುರಿತ ಕವನ ಓದಿ ಯುದ್ಧವೊಂದು ಸಾರ್ವಕಾಲಿಕ ಘಟನೆ ಆಧುನಿಕ ಜಗತ್ತಾದರೂ ಈ ಕ್ರೌರ್ಯವನ್ನುಅರ್ಥ ಮಾಡಿಕೊಳ್ಳಬೇಕು ಎಂದರು.

ಇದೇ ವೇಳೆ ಕವಿಗಳಾದ ಮಂಜುನಾಥ ಗಡಿ, ಮೆಹಬೂಬ್.ಎಂ ಕೊಟ್ರೇಶ್ ನಾಯಕ ಲಮಾಣಿ, ಅರುಣಾ ಕೊಟ್ರೇಶ್, ಗಂಗಾ ಕೊಟ್ಟೂರು, ವಿಶಾಲ್ ಮ್ಯಾಸರ್, ವಿನೋದ ಸರ್ದಾರ್, ಮಂಜುನಾಥ ಕೊಟ್ಟೂರು, ಯುದ್ಧವನ್ನು ವಿರೋಧಿಸುವ ಕವನಗಳನ್ನು ವಾಚಿಸಿದರು.

ಈ ಸಂದರ್ಭದಲ್ಲಿ ರಂಗಪ್ಪ ದಾಸರ, ಜಯಮ್ಮ ಮತ್ತಿಹಳ್ಳಿ, ವಾಸಂತಿ ಸಾಲ್ಮನಿ ಇನ್ನೂ ಅನೇಕ ಸಾಹಿತ್ಯಾಸಕ್ತರು ಇದ್ದರು

ವಿಶಾಲ್ ಮ್ಯಾಸರ್ ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು. ವಿನೋದ ಸರ್ದಾರ್ ಕಾರ್ಯಕ್ರಮ ನಿರೂಪಿಸಿದರು.

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಭಾರತ ಸಾರಥಿ 09/04/2026


# ಎಲ್‌ಪಿಜಿಗಾಗಿ ಗ್ಯಾಸ್ ಇಲ್ಲದೆ ಕಂಗಾಲಾದ ಆಟೋ ಚಾಲಕರು



ದೊಡ್ಡಬಳ್ಳಾಪುರ

ನಗರದ ಡಿಕ್ರಾಸ್ ರಸ್ತೆಯ ಸೂಪರ್ ಗ್ಯಾಸ್ ಬಂಕ್ ಬಳಿ ಆಟೋ ಎಲ್‌ಪಿಜಿಗಾಗಿ ನೂರಾರು ಆಟೋಗಳು ಕಿಲೋಮೀಟರ್‌ಗಟ್ಟಲೆ ಸಾಲುಗಟ್ಟಿ ನಿಂತಿರುವ ದೃಶ್ಯ ಕಂಡುಬರುತ್ತಿದೆ. ಎಲ್‌ಪಿಜಿ ಅಭಾವದಿಂದಾಗಿ ಆಟೋ ಚಾಲಕರ ಜೀವನ ನಿರ್ವಹಣೆ ಅಸಾಧ್ಯವಾಗಿದ್ದು, ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ.

ನಗರದ ಏಕೈಕ ಎಲ್‌ಪಿಜಿ ಕೇಂದ್ರದಲ್ಲಿ ಗ್ಯಾಸ್ ಸಿಗುವ ಮಾಹಿತಿ ತಿಳಿಯುತ್ತಿದ್ದಂತೆಯೇ ಚಾಲಕರು ಮಧ್ಯಾಹ್ನದಿಂದಲೇ ಸರತಿ ಸಾಲಿನಲ್ಲಿ ನಿಂತಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಸ್ಥಳದಲ್ಲಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿದೆ.

ಸ್ಥಳೀಯ ದೊಡ್ಡಬಳ್ಳಾಪುರ ಮಾತ್ರವಲ್ಲದೆ, ಪಕ್ಕದ ಚಿಕ್ಕಬಳ್ಳಾಪುರ, ವಿಜಯಪುರ, ನೆಲಮಂಗಲ, ಗೌರಿಬಿದನೂರು, ಯಲಹಂಕ, ದೇವನಹಳ್ಳಿ ಹಾಗೂ ಕೆ.ಆರ್. ಪುರಂನಂತಹ ದೂರದ ಊರುಗಳಿಂದಲೂ ನೂರಾರು ಆಟೋ ಚಾಲಕರು ಗ್ಯಾಸ್‌ಗಾಗಿ ಇಲ್ಲಿಗೆ ಆಗಮಿಸಿ ಕಾಯುತ್ತಿದ್ದಾರೆ.

ಆಟೋ ಚಾಲಕ ಮಂಜುನಾಥ್ ಮಾತನಾಡಿ, ತಮ್ಮ ಅಳಲು ತೋಡಿಕೊಂಡಿದ್ದಾರೆ: "ನಮ್ಮದು ದಿನವಿಡೀ ದುಡಿದು ಸಂಜೆ ಬದುಕು ಸಾಗಿಸುವ ಜೀವನ. ಕಳೆದ 10 ದಿನಗಳಿಂದ ಗ್ಯಾಸ್ ಇಲ್ಲದೆ ಆಟೋಗಳು ನಿಂತಿವೆ. ಮನೆ ಬಾಗಿಲಿಗೆ ಸಾಲಗಾರರು ಬರುತ್ತಿದ್ದಾರೆ, ಸಾಲ ಕಟ್ಟಲಾಗದೆ ಪರಿತಪಿಸುವಂತಾಗಿದೆ. ಸರ್ಕಾರವು ಅಧಿಕೃತ ಆಟೋ ಚಾಲಕರನ್ನು ಗುರುತಿಸಿ ತಕ್ಷಣವೇ ಸಹಾಯಧನ (ಸಬ್ಸಿಡಿ) ನೀಡಬೇಕು," ಎಂದು ಅವರು ಮನವಿ ಮಾಡಿದರು.

ಗಂಟೆಗಟ್ಟಲೆ ಕಾಯುತ್ತಿದ್ದರೂ ಗ್ಯಾಸ್ ಸಿಗುತ್ತದೋ ಇಲ್ಲವೋ ಎಂಬ ಆತಂಕ ಚಾಲಕರಲ್ಲಿ ಮನೆ ಮಾಡಿದೆ. ಸಂಬಂಧಪಟ್ಟ ಅಧಿಕಾರಿಗಳು ಈ ಕೂಡಲೇ ಎಲ್‌ಪಿಜಿ ಪೂರೈಕೆಯನ್ನು ಸರಿಪಡಿಸಬೇಕೆಂದು ಚಾಲಕರು ಒತ್ತಾಯಿಸಿದ್ದಾರೆ.

# ವಿಶೇಷ ಚೇತನರ ಕಲ್ಯಾಣಕ್ಕೆ 24 ಲಕ್ಷ ಅನುದಾನ ಮೀಸಲು



ಶಿಡ್ಲಘಟ್ಟ

"ಡಾ. ಬಾಬು ಜಗಜೀವನರಾಂ ಅವರು ಸಮಾಜದಲ್ಲಿ ಜಾತಿ ಭೇದ ಮರೆತು ಸಮಾನತೆಗಾಗಿ ಶ್ರಮಿಸಿದ ಶ್ರೇಷ್ಠ ರಾಜಕೀಯ ಮುತ್ಸದ್ದಿ. ಅವರ ಆದರ್ಶದಂತೆ ನಾನು ಕೂಡ ತಾಲೂಕಿನ ಎಲ್ಲಾ ಪಂಚಾಯಿತಿಗಳನ್ನು ಸಮಾನತೆಯಿಂದ ಕಾಣುತ್ತಿದ್ದು, ಅನುದಾನ ಹಂಚಿಕೆಯಲ್ಲಿ ತಾರತಮ್ಯ ಮಾಡುವುದಿಲ್ಲ," ಎಂದು ಶಾಸಕ ಬಿ.ಎನ್. ರವಿಕುಮಾರ್ ತಿಳಿಸಿದರು.

ನಗರದ ತಾಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಆಯೋಜಿಸಿದ್ದ ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಂ ಅವರ 119ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದೇಶದ ಉಪಪ್ರಧಾನಿಯಾಗಿ ಶೋಷಿತರ ಪರ ಹೋರಾಡಿದ ಬಾಬೂಜಿ ಅವರನ್ನು ಪ್ರತಿಯೊಬ್ಬರೂ ಗೌರವಿಸಬೇಕು. ಸರ್ಕಾರಿ ನೌಕರರು ಮತ್ತು ರಾಜಕಾರಣಿಗಳು ಸಂವಿಧಾನದ ಚೌಕಟ್ಟಿನಲ್ಲಿ ಕೆಲಸ ಮಾಡಿದಾಗ ಮಾತ್ರ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರ ಆತ್ಮಕ್ಕೆ ಶಾಂತಿ ಸಿಗುತ್ತದೆ. ದೇಶಕ್ಕೆ ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಬಾಬು ಜಗಜೀವನರಾಂ ಅವರು ಎರಡು ಕಣ್ಣುಗಳಿದ್ದಂತೆ ಎಂದು ಶಾಸಕರು ಬಣ್ಣಿಸಿದರು.

ಜಯಂತಿಗಳು ಕೇವಲ ತೋರ್ಪಡಿಕೆಯಾಗದೆ ಅರ್ಥಪೂರ್ಣವಾಗಿ ನಡೆಯಬೇಕು. ಈ ನಿಟ್ಟಿನಲ್ಲಿ ತಾಲೂಕಿನ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳ ಪಟ್ಟಿ ಸಿದ್ಧಪಡಿಸಿ ಪ್ರತಿಭಾ ಪುರಸ್ಕಾರ ನೀಡಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಅಲ್ಲದೆ, ಶಾಸಕರ ಅನುದಾನದಲ್ಲಿ ಶೇ. 10ರಷ್ಟು ಮೀಸಲಿಟ್ಟು, ಸುಮಾರು 24 ಲಕ್ಷ ರೂ. ವೆಚ್ಚದಲ್ಲಿ ವಿಶೇಷ ಚೇತನರಿಗೆ ಅಗತ್ಯ ಸೌಲಭ್ಯ ಕಲ್ಪಿಸಲಾಗುವುದು ಎಂದು ಅವರು ಘೋಷಿಸಿದರು.

ಇದೇ ತಿಂಗಳು 14ರಂದು ನಡೆಯಲಿರುವ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿಯನ್ನು ದಲಿತ ಮುಖಂಡರು ಮತ್ತು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅತ್ಯಂತ ವೈಭವದಿಂದ ಆಚರಿಸಬೇಕು. ಈ ಕಾರ್ಯಕ್ರಮಕ್ಕೆ ನನ್ನ ಸಂಪೂರ್ಣ ಬೆಂಬಲವಿದೆ ಎಂದು ಭರವಸೆ ನೀಡಿದರು.

ತಹಶೀಲ್ದಾರ್ ಗಗನ ಸಿಂಧು ಮಾತನಾಡಿ, ಸಮಾಜದಲ್ಲಿ ಅಸ್ಪೃಶ್ಯತೆ, ಬಡತನ, ನಿರುದ್ಯೋಗ ಮತ್ತು ಆಹಾರದ ಕೊರತೆಯಂತಹ ಗಂಭೀರ ಸಮಸ್ಯೆಗಳನ್ನು ನಿವಾರಿಸುವಲ್ಲಿ ಬಾಬೂಜಿ ಅವರ ಕೊಡುಗೆ ಅಪಾರ ಎಂದು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಹಾಗೂ ಚಿಮುಲ್ ನಿರ್ದೇಶಕ ಬಂಕ್ ಮುನಿಯಪ್ಪ, ಉಜಗೂರು ರಾಮಣ್ಣ, ಮೇಲೂರು ಮಂಜುನಾಥ್, ಲಕ್ಷ್ಮಣರಾಜು ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಮುಖಂಡರು ಉಪಸ್ಥಿತರಿದ್ದರು.

# 12 ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಹಾಸಭಾ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ

ಕೋಲಾರ

ರಾಜ್ಯದ ವಿಜಯಪುರ ಜಿಲ್ಲೆಯ ಬಿಡಿಜಿ ಕಾಲೇಜಿನಲ್ಲಿ ಏ.12 ರಂದು ಮಧ್ಯಾಹ್ನ 3 ಗಂಟೆಗೆ ಹಮ್ಮಿಕೊಂಡಿರುವ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಹಾಸಭಾ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಪಂಡಿತ್ ನರಹರಿ ಆಚಾರ್ ಮುತ್ತಗಿರ ಅವರು ವಹಿಸುವರು.

ಇದೇ ಸಂದರ್ಭದಲ್ಲಿ ಮಹಾಸಭಾದ ಸಮ್ಮೇಳನದ ಕಾರ್ಯಕ್ರಮ, ವಿಜಯಪುರ ಜಿಲ್ಲಾ ಘಟಕ ಮತ್ತು ಯುವ ಘಟಕ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವೂ ನಡೆಯಲಿದ್ದು, ಶ್ರೀಗಳು ಸಾನಿಧ್ಯ ವಹಿಸಲಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು ಖ್ಯಾತ ಜ್ಯೋತಿಷಿಗಳು ಹಾಗೂ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಹಾಸಭಾದ ಅಧ್ಯಕ್ಷ ಮಂಜುನಾಥ್ ಭಟ್‌ನೆರವೇರಿಸುವರು.

ಕಾರ್ಯಕ್ರಮದಲ್ಲಿ ಹಿರಿಯ ಸಹಕಾರಿಗಳು ಮತ್ತು ಮಹಾಸಭಾದ ಗೌರವ ಅಧ್ಯಕ್ಷ ಮೋಹನ್ ಕೆ, ಸತೀಶ್, ಎಮ್ ಕೆ ಕುಲಕರ್ಣಿ ಮತ್ತು ಶ್ರೀಹರಿ ಗೊಳಸಂಗಿ, ಸಂಘದ ಹಿತೈಷಿಗಳಾದ ಮಹೇಶ್ ದೇಶಪಾಂಡೆ , ಮೋಹನ್ ದೇಸಾಯಿ ಮತ್ತು ವಿಜಯಪುರದ ಜಿಲ್ಲಾ ಅಧ್ಯಕ್ಷ ಕೃಷ್ಣ ಜಿ ಕುಲಕರ್ಣಿ ಹಾಗೂ ಇತರ ಗಣ್ಯ ವ್ಯಕ್ತಿಗಳು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು. ರಾಜ್ಯದ ಎಲ್ಲಾ ವಿಪ್ರರು, ವಿಜಯಪುರದ ಜನತೆ ಹಾಗೂ ಎಲ್ಲಾ ಪದಾಧಿಕಾರಿಗಳು ಇದರಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸಂಘಟನೆಯ ರಾಜ್ಯ ಗೌರವಾಧ್ಯಕ್ಷರು ಹಾಗೂ ಅಖಿಲ ಕರ್ನಾಟಕ ಮಾಧ್ವ ಬ್ರಾಹ್ಮಣ ಮಹಾಸಭಾ ಅಧ್ಯಕ್ಷರೂ ಆದ ಕೆ.ಮೋಹನ್

## ಅಂತರರಾಜ್ಯ ದರೋಡೆಕೋರರ

# ಗ್ಯಾಂಗ್ ಅರೆಸ್ಟ್



ಕೆಜಿಎಫ್

ಬಂಗಾರಪೇಟೆ ಮತ್ತು ಕಾಮಸಮುದ್ರಂ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದ ಸರಗಳ್ಳತನ ಹಾಗೂ ದೇವಸ್ಥಾನದ ಕಳವು ಪ್ರಕರಣಗಳಿಗೆ ಸಂಬಂಧಿಸಿದಂತೆ ಕಾರ್ಯಾಚರಣೆ ನಡೆಸಿದ ಪೊಲೀಸರು, ತಮಿಳುನಾಡು ಮೂಲದ ನಾಲ್ವರು ಅಂತರರಾಜ್ಯ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬಂಧಿತರಿಂದ ಸುಮಾರು ರೂ. 2,22,500 ಮೌಲ್ಯದ 18 ಗ್ರಾಂ ಚಿನ್ನದ ಆಭರಣಗಳು, ದೇವಸ್ಥಾನದ ಕಂಚಿನ ತಟ್ಟೆ, ಗಂಟೆ ಹಾಗೂ ಕೃತ್ಯಕ್ಕೆ ಬಳಸಿದ್ದ ಕಾರನ್ನು ವಶಪಡಿಸಿಕೊಳ್ಳಲಾಗಿದೆ.

ಪ್ರಕರಣದ ಹಿನ್ನೆಲೆ:

ಸರಗಳ್ಳತನ: ಮಾರ್ಚ್ 16ರಂದು ಬಂಗಾರಪೇಟೆ ತಾಲೂಕಿನ ದೇಶಿಹಳ್ಳಿ ಹೊರವಲಯದ ಚಿಲ್ಲರೆ ಅಂಗಡಿಯ ಮಹಿಳೆಯ ಕತ್ತಿನಲ್ಲಿದ್ದ ಮಾಂಗಲ್ಯ ಸರವನ್ನು ಕಿತ್ತುಕೊಂಡು ದುಷ್ಕರ್ಮಿಗಳು ಪರಾರಿಯಾಗಿದ್ದರು. ಈ ಕುರಿತು ಬಂಗಾರಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ದೇವಸ್ಥಾನ ಕಳವು: ಮಾರ್ಚ್ 22ರಂದು ಕಾಮಸಮುದ್ರಂ ವ್ಯಾಪ್ತಿಯ ಬಂದರ್ಲಹಳ್ಳಿ ಗ್ರಾಮದ ಲಂಬಾಡಿ ಕೆರೆ ಅಂಗಳದಲ್ಲಿರುವ ಶ್ರೀ ಕುಂಟಿಗಂಗಮ್ಮ ದೇವಸ್ಥಾನದಲ್ಲಿ ಕಳ್ಳತನ ನಡೆದಿತ್ತು.

ಪೊಲೀಸ್ ಕಾರ್ಯಾಚರಣೆ ಮತ್ತು ಬಂಧನ: ಈ ಗಂಭೀರ ಪ್ರಕರಣಗಳ ಪತ್ತೆಗಾಗಿ ಡಿವೈಎಸ್‌ಪಿ ವಿ. ಲಕ್ಷ್ಮಯ್ಯ ಅವರ ಮಾರ್ಗದರ್ಶನದಲ್ಲಿ ವಿಶೇಷ ತಂಡವನ್ನು ರಚಿಸಲಾಗಿತ್ತು. ತಮಿಳುನಾಡಿನ ಹೊಸೂರು ಮೂಲದ ಶಿವ (30), ಪ್ರಭಾಕರ್ (30), ಅನೀಲ್‌ಕುಮಾರ್ (30) ಮತ್ತು ರೂಪೇಶ್ (30) ಎಂಬುವವರನ್ನು ಬಂಧಿಸಿ ವಿಚಾರಣೆ ನಡೆಸಿದಾಗ ಇವರು ಹೊಸಕೋಟೆ ಹಾಗೂ ತಮಿಳುನಾಡಿನ ಕೆಳಮಂಗಲಂ ಪೊಲೀಸ್ ಠಾಣಾ ವ್ಯಾಪ್ತಿಯ ಕಳವು ಪ್ರಕರಣಗಳಲ್ಲೂ ಭಾಗಿಯಾಗಿರುವುದು ಬೆಳಕಿಗೆ ಬಂದಿದೆ.

ತಂಡಕ್ಕೆ ಶ್ಲಾಘನೆ: ಸಕಾಲಕ್ಕೆ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಿದ ಕಾಮಸಮುದ್ರಂ ಪಿಎಸ್‌ಐ ಬಿ.ವಿ. ಕಿರಣ್‌ಕುಮಾರ್, ಲಕ್ಷ್ಮೀನಾರಾಯಣ ಹಾಗೂ ವಿಶೇಷ ತಂಡದ ಸಿಬ್ಬಂದಿಗಳಾದ ಮಂಜುನಾಥರೆಡ್ಡಿ, ಮುನಾವರ್ ಪಾಷಾ ಸೇರಿದಂತೆ ಇಡೀ ತಂಡದ ಸಮಯೋಚಿತ ಕೆಲಸವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ಅವರು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ.

# ಪಾರ್ಕಿಂಗ್ ಶುಲ್ಕಕ್ಕೆ ಬ್ರೇಕ್ ಹಾಕಿ: ಕೆಆರ್‌ಎಸ್ ಪಕ್ಷದ ಆಗ್ರಹ




ಕನಕಪುರ

"ತಾಲ್ಲೂಕು ಕಚೇರಿಯ ಆವರಣದಲ್ಲಿ ಜಾರಿಗೆ ತಂದಿರುವ 24/7 ಪಾವತಿ ನಿಲುಗಡೆ ವ್ಯವಸ್ಥೆಯು ಸಾರ್ವಜನಿಕರಿಗೆ ದೊಡ್ಡ ಹೊರೆಯಾಗಿದ್ದು, ಇದು ಬಡ ರೈತರು ಮತ್ತು ಕಾರ್ಮಿಕರ ಮೇಲೆ ನಡೆಸುತ್ತಿರುವ ಹಗಲು ದರೋಡೆಯಾಗಿದೆ," ಎಂದು ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಪದಾಧಿಕಾರಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ವ್ಯವಸ್ಥೆಯನ್ನು ತಕ್ಷಣವೇ ರದ್ದುಗೊಳಿಸಬೇಕೆಂದು ಒತ್ತಾಯಿಸಿ ಪಕ್ಷದ ವತಿಯಿಂದ ತಾಲ್ಲೂಕು ಉಪ ತಹಶೀಲ್ದಾರ್ ಮನೋಹರ್ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಮನವಿ ಸಲ್ಲಿಸಿ ಮಾತನಾಡಿದ ಮುಖಂಡರು, "ತಾಲ್ಲೂಕು ಕಚೇರಿಗೆ ಪ್ರತಿದಿನ ನೂರಾರು ಹಳ್ಳಿಗಳಿಂದ ರೈತರು, ಕಾರ್ಮಿಕರು, ಅಂಗವಿಕಲರು ಮತ್ತು ಮಹಿಳೆಯರು ತಮ್ಮ ಕೆಲಸಗಳಿಗಾಗಿ ಆಗಮಿಸುತ್ತಾರೆ. ಈಗಾಗಲೇ ಆರ್ಥಿಕ ಸಂಕಷ್ಟದಲ್ಲಿರುವ ಜನರು ಸಾಲಸೋಲ ಮಾಡಿ ಕಚೇರಿಗೆ ಬಂದಾಗ, ಪಾರ್ಕಿಂಗ್ ಹೆಸರಿನಲ್ಲಿ ಹಣ ವಸೂಲಿ ಮಾಡುತ್ತಿರುವುದು ಗಾಯದ ಮೇಲೆ ಬರೆ ಎಳೆದಂತಾಗಿದೆ. ಸರ್ಕಾರ ಒಂದು ಕಡೆ ಗ್ಯಾರಂಟಿ ಯೋಜನೆಗಳನ್ನು ನೀಡುತ್ತಿದ್ದರೆ, ಸ್ಥಳೀಯ ಆಡಳಿತ ಇಂತಹ ಅವೈಜ್ಞಾನಿಕ ನೀತಿಗಳ ಮೂಲಕ ಜನರ ಹಣ ಲೂಟಿ ಮಾಡುತ್ತಿದೆ," ಎಂದು ಕಿಡಿಕಾರಿದರು. "ರಾಜ್ಯದ ಮತ್ಯಾವ ತಾಲ್ಲೂಕು ಕಚೇರಿಯಲ್ಲೂ ಇಲ್ಲದ ಪಾರ್ಕಿಂಗ್ ಶುಲ್ಕ ವ್ಯವಸ್ಥೆಯನ್ನು ಕನಕಪುರದಲ್ಲಿ ಮಾತ್ರ ಜಾರಿಗೆ ತರಲಾಗಿದೆ. ಕನಿಷ್ಠ ಸೌಲಭ್ಯಗಳನ್ನು ಒದಗಿಸದ ಆಡಳಿತ, ಹಣ ವಸೂಲಿಗೆ ಇಳಿದಿರುವುದು ಖಂಡನೀಯ. ಈ ಶುಲ್ಕ ವಸೂಲಿ ಹಿಂದೆ ದೊಡ್ಡ ಮಟ್ಟದ ಅವ್ಯವಹಾರ ನಡೆದಿದ್ದು, ಇದರಲ್ಲಿ ಅಧಿಕಾರಿಗಳ ಶಾಮೀಲಾತಿ ಇರುವ ಶಂಕೆಯಿದೆ," ಎಂದು ಕೆ.ಆರ್.ಎಸ್. ಮುಖಂಡರು ಗಂಭೀರ ಆರೋಪ ಮಾಡಿದರು. ಈ ವೇಳೆ ಕೆ.ಆರ್.ಎಸ್. ಪಕ್ಷದ ರಾಜ್ಯ ಜಂಟಿ ಕಾರ್ಯದರ್ಶಿ ಹಾಗೂ ಮಾಧ್ಯಮ ಸಂಯೋಜಕ ಎಲ್. ಜೀವನ್, ತಾಲ್ಲೂಕು ಸಂಚಾಲಕಿ ಶಿವಮ್ಮ ದುರ್ಗೇಶ್ ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# 189 ಪರೀಕ್ಷಾ ಕೇಂದ್ರಗಳಲ್ಲಿ ಯಶಸ್ವಿಯಾಗಿ ನಡೆದ ಸಾಕ್ಷರತಾ ಪರೀಕ್ಷೆ



ಕೋಲಾರ

2025–26ನೆ ಸಾಲಿಗೆ ಕೇಂದ್ರ ಪುರಸ್ಕೃತ ಉಲ್ಲಾಸ್ ನವಭಾರತ ಸಾಕ್ಷರತಾ ಕಾರ್ಯಕ್ರಮದ ಅಡಿಯಲ್ಲಿ ಜಿಲ್ಲಾದ್ಯಂತ ಒಟ್ಟು 32 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿನ 189 ಪರೀಕ್ಷಾ ಕೇಂದ್ರಗಳಲ್ಲಿ ನಡೆದ ಸಾಕ್ಷರತಾ ಪರೀಕ್ಷೆ ಯಾವುದೇ ಗೊಂದಲಕ್ಕೆಡೆಯಿಲ್ಲದೇ ಸಂಪನ್ನಗೊಂಡಿದೆ ಎಂದು ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಉಮಾ ತಿಳಿಸಿದ್ದಾರೆ.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರವೀಣ್ ಪಿ.ಬಾಗೇವಾಡಿ ಅವರ ಮಾರ್ಗದರ್ಶನದಲ್ಲಿ ಭಾನುವಾರ ಜಿಲ್ಲಾದ್ಯಂತ ಪರೀಕ್ಷೆ ನಡೆದಿದ್ದು, 2025–26 ನೇ ಸಾಲಿನಲ್ಲಿ ಜಿಲ್ಲೆಯ ಅತ್ಯಂತ ಕಡಿಮೆ ಸಾಕ್ಷರತೆ ಹೊಂದಿರುವ 32 ಗ್ರಾಮ ಪಂಚಾಯಿತಿಗಳನ್ನು ಆಯ್ಕೆ ಮಾಡಿಕೊಂಡು ಲಿಂಕ್ ಡಾಕ್ಯುಮೆಂಟ್ ಅನುದಾನದಡಿಯಲ್ಲಿ 6000 ಅನಕ್ಷರಸ್ಥರನ್ನು ಸಾಕ್ಷರರನ್ನಾಗಿಸುವ ಗುರಿಯೊಂದಿಗೆ ಮೂಲ ಸಾಕ್ಷರತಾ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.

ಭಾನುವಾರದ ಮೌಲ್ಯಮಾಪನ ಪರೀಕ್ಷೆಯಲ್ಲಿ 6000 ಕಲಿಕಾರ್ಥಿಗಳು ನವ ಸಾಕ್ಷರಾಗುತ್ತಾರೆ. ಎಂದ ಅವರು, 2025–26ನೇ ಸಾಲಿನ ಜಿಲ್ಲೆಯ ಲಿಂಕ್ ಡಾಕ್ಯೂಮೆಂಟ್ ಅನುದಾನದಡಿಯಲ್ಲಿ ಸಾಕ್ಷರತಾ ಕಾರ್ಯಕ್ರಮಕ್ಕೆ ಜಿಲ್ಲೆಯ 6 ತಾಲ್ಲೂಕುಗಳ ಆಯ್ದ 32 ಗ್ರಾಮ ಪಂಚಾಯತಿಗಳಲ್ಲಿ ಒಟ್ಟು 6000 ಅನಕ್ಷರಸ್ಥರಿಗೆ 189 ಪರೀಕ್ಷಾ ಕೇಂದ್ರಗಳುಲ್ಲಿ ಪರೀಕ್ಷೆ ಇಂದು ನಡೆಯಿತು ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳ ಮತ್ತು ಕ್ಷೇತ್ರ ಸಮನ್ವಯಾಧಿಕಾರಿಗಳು ಪರೀಕ್ಷೆ ಕಾರ್ಯದ ಉಸ್ತುವಾರಿ ವಹಿಸಿದ್ದು, 3 ಅವಧಿಗಳಲ್ಲಿ ಪರೀಕ್ಷೆ ನಡೆಯಿತು ಎಂದು ತಿಳಿಸಿದರು.

ತಾಲ್ಲೂಕುವಾರು ನೋಂದಣಿ ವಿವರ:

ಬಂಗಾರಪೇಟೆ ತಾಲ್ಲೂಕಿನ 4 ಗ್ರಾ.ಪಂಗಳ 26 ಪರೀಕ್ಷಾ ಕೇಂದ್ರಗಳಲ್ಲಿ 1 ಸಾವಿರ ಕಲಿಕಾರ್ಥಿಗಳು,ಕೆಜಿಎಫ್ ತಾಲ್ಲೂಕಿನಲ್ಲಿ 3 ಗ್ರಾ.ಪಂಗಳ 5 ಪರೀಕ್ಷಾ ಕೇಂದ್ರಗಳಲ್ಲಿ 250 ಕಲಿಕಾರ್ಥಿಗಳು, ಕೋಲಾರ ತಾಲ್ಲೂಕಿನ 13 ಗ್ರಾ.ಪಂಗಳಲ್ಲಿ 74 ಪರೀಕ್ಷಾ ಕೇಂದ್ರಗಳಲ್ಲಿ 1750 ಕಲಿಕಾರ್ಥಿಗಳು, ಮಾಲೂರು ತಾಲ್ಲೂಕಿನ 4 ಗ್ರಾ.ಪಂಗಳಿಂದ 35 ಕೇಂದ್ರಗಳಲ್ಲಿ 1ಸಾವಿರ ಮಂದಿ, ಮುಳಬಾಗಿಲು ತಾಲ್ಲೂಕಿನ 6 ಗ್ರಾ.ಪಂಗಳಲ್ಲಿ 46 ಪರೀಕ್ಷಾ ಕೇಂದ್ರಗಳಲ್ಲಿ 1750 ಮಂದಿ ಹಾಗೂ ಶ್ರೀನಿವಾಸಪುರ ತಾಲ್ಲೂಕಿನ 2 ಗ್ರಾ.ಪಂಗಳಿಂದ 3 ಪರೀಕ್ಷಾ ಕೇಂದ್ರಗಳಲ್ಲಿ 250 ಮಂದಿ ಪರೀಕ್ಷೆ ಬರೆದಿದ್ದಾರೆ ಎಂದರು.

# ವೆಂಕಟರಮಣ ಸ್ವಾಮಿ ದೇವಾಲಯ ಅಭಿವೃದ್ಧಿಗೆ 5 ಲಕ್ಷ ರೂ. ಮಂಜೂರು



ಬೂದಿಕೋಟೆ

"ಇಲ್ಲಿನ ಮುಜರಾಯಿ ಇಲಾಖೆಗೆ ಸೇರಿದ ಶ್ರೀ ವೆಂಕಟರಮಣ ಸ್ವಾಮಿ ದೇವಾಲಯದ ಜೀರ್ಣೋದ್ಧಾರಕ್ಕಾಗಿ 5 ಲಕ್ಷ ರೂ. ಅನುದಾನ ಮಂಜೂರು ಮಾಡಲಾಗಿದೆ. ಗ್ರಾಮಸ್ಥರ ಕೋರಿಕೆಯ ಮೇರೆಗೆ ದೇವಾಲಯದ ಅಭಿವೃದ್ಧಿಗಾಗಿ ಸಮಿತಿ ರಚಿಸಲಾಗಿದೆಯೇ ಹೊರತು ಇದರಲ್ಲಿ ಬೇರೆ ಯಾವುದೇ ರಾಜಕೀಯ ಉದ್ದೇಶವಿಲ್ಲ," ಎಂದು ಶಾಸಕ ಎಸ್.ಎನ್. ನಾರಾಯಣಸ್ವಾಮಿ ತಿಳಿಸಿದರು.

ಪಟ್ಟಣದ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಈ ವಿಷಯ ತಿಳಿಸಿದರು.

ಗ್ರಾಮಸ್ಥರ ದೂರಿನ ಮೇರೆಗೆ ಕ್ರಮ: "1935 ರಿಂದಲೂ ದೇವಾಲಯದ ಸಮಿತಿ ಅಸ್ತಿತ್ವದಲ್ಲಿದ್ದರೂ ಗೋಪುರ ನಿರ್ಮಾಣವಾಗಲಿ ಅಥವಾ ನಿರೀಕ್ಷಿತ ಅಭಿವೃದ್ಧಿಯಾಗಲಿ ನಡೆದಿಲ್ಲ ಎಂದು ಗ್ರಾಮಸ್ಥರು ದೂರಿದ್ದರು. ಅಲ್ಲದೆ, ಕಲ್ಯಾಣ ಮಂಟಪ ಮಾರಾಟ ಮಾಡಲಾಗಿದೆ ಹಾಗೂ ಕರಗ ಮತ್ತು ಪೂಜೆ ಬಿಟ್ಟರೆ ಬೇರೆ ಯಾವುದೇ ಸುಧಾರಣೆ ಕಾಣುತ್ತಿಲ್ಲ ಎಂಬ ದೂರುಗಳು ಬಂದಿದ್ದವು. ಈ ಹಿನ್ನೆಲೆಯಲ್ಲಿ ಗ್ರಾಮದ ಎಲ್ಲಾ ಸಮುದಾಯಗಳ ಪ್ರಮುಖರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೊಸ ಸಮಿತಿ ರಚಿಸಿ, ಎಸಿ (ಸಹಾಯಕ ಆಯುಕ್ತರು) ಅವರಿಗೆ ಶಿಫಾರಸು ಮಾಡಲಾಗಿತ್ತು. ಎಸಿ ಅವರು ಈ ಸಮಿತಿಯನ್ನು ಅನುಮೋದಿಸಿದ್ದಾರೆ," ಎಂದು ಶಾಸಕರು ವಿವರಿಸಿದರು.

ಜೀರ್ಣೋದ್ಧಾರಕ್ಕೆ 5 ಲಕ್ಷ ರೂ. ಅನುದಾನ: ಪುರಾತನ ಕಾಲದ ಈ ದೇವಾಲಯದ ಪುನರ್ ನಿರ್ಮಾಣ ಮತ್ತು ಜೀರ್ಣೋದ್ಧಾರಕ್ಕೆ ಮೊದಲ ಹಂತವಾಗಿ ಸರ್ಕಾರದಿಂದ 5 ಲಕ್ಷ ರೂ. ಮಂಜೂರು ಮಾಡಿಸಲಾಗಿದೆ. ದೇವಾಲಯದ ಆಸ್ತಿ ಪಾಸ್ತಿಗಳನ್ನು ಉಳಿಸಿ ಬೆಳೆಸುವುದು ಮತ್ತು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವುದು ನಮ್ಮ ಆಶಯವಾಗಿದೆ ಎಂದು ಅವರು ಹೇಳಿದರು.

ಗ್ರಾಮಸ್ಥರ ನಿರ್ಧಾರವೇ ಅಂತಿಮ: ಸಮಿತಿ ರಚನೆ ಕುರಿತ ಅಪಸ್ವರಗಳಿಗೆ ಪ್ರತಿಕ್ರಿಯಿಸಿದ ಶಾಸಕರು, "ಈ ವಿಷಯದಲ್ಲಿ ನಮಗೆ ಯಾವುದೇ ವೈಯಕ್ತಿಕ ಹಿತಾಸಕ್ತಿ ಇಲ್ಲ. ಗ್ರಾಮಸ್ಥರಿಗೆ ಈ ಸಮಿತಿ ಬೇಕೆಂದರೆ ಇಟ್ಟುಕೊಳ್ಳಲಿ, ಬೇಡವೆಂದರೆ ಬಿಡಲಿ. ಇದು ಸಂಪೂರ್ಣವಾಗಿ ಗ್ರಾಮಕ್ಕೆ ಸಂಬಂಧಿಸಿದ ವಿಷಯವಾಗಿದೆ. ಯಾರಾದರೂ ಸಂಬಂಧವಿಲ್ಲದಂತೆ ಮಾತನಾಡುತ್ತಿದ್ದರೆ ಅದಕ್ಕೆ ಗ್ರಾಮಸ್ಥರೇ ನಿರ್ಧಾರ ಕೈಗೊಳ್ಳಬೇಕು," ಎಂದು ನೇರ ಮಾತುಗಳಲ್ಲಿ ತಿಳಿಸಿದರು.

# ಶ್ರೀ ಸಿದ್ಧಲಿಂಗಾ ಮಹಾಸ್ವಾಮಿಗಳಿಂದ ಮಹಾದ್ವಾರ ನಿರ್ಮಾಣಕ್ಕೆ ಭೂಮಿಪೂಜೆ



> ತ್ರಿವಿಧ ದಾಸೋಹಿ, ನಡೆದಾಡುವ ದೇವರು ಪರಮಪೂಜ್ಯ ಡಾ.ಶಿವಕುಮಾರಸ್ವಾಮಿಗಳು ಕಾಯಕವೇ ಕೈಲಾಸ ಎಂಬ ಧ್ಯೇಯದೊಂದಿಗೆ ಕನ್ನಡನಾಡು ಮಾತ್ರವಲ್ಲದೆ ಇಡೀ ಜಗತ್ತು ಗುರುತಿಸುವಂತಹ ಸೇವಾ ಕಾರ್ಯಗಳನ್ನು ಮಾಡಿದ್ದಾರೆ. ಶ್ರೀಗಳ ಜಯಂತ್ಯುತ್ಸವ ಆಚರಣೆ ಮಾಡುವುದು ನಮ್ಮ ಸುದೈವವೆಂದು ಭಾವಿಸಿ ಪ್ರತಿವರ್ಷವೂ ಆಚರಿಸುತ್ತಿದ್ದೇವೆ. ಈ ಪುಣ್ಯ ಕಾರ್ಯಕ್ಕೆ ಸಮುದಾಯದ ಅನೇಕರು ಕೈಜೋಡಿಸುತ್ತಿದ್ದಾರೆ. ಮುಂದೆಯೂ ನಿರಂತರವಾಗಿ ನಡೆಯಲಿದೆ.
>
> - ಬಿ.ಜಿ.ಲೋಹಿತ್‌ಕುಮಾರ್, ಮಾಜಿ ಅಧ್ಯಕ್ಷರು ಪುರಸಭೆ ಸ್ಥಾಯಿ ಸಮಿತಿ.

ರಾಮನಗರ

ಪರಮಪೂಜ್ಯ ಡಾ. ಶಿವಕುಮಾರ ಮಹಾಶಿವಯೋಗಿಗಳ ಮಹಾದ್ವಾರದ ಶಂಕುಸ್ಥಾಪನೆ ಹಾಗೂ 119ನೇ ಜಯಂತೋತ್ಸವ ಕಾರ್ಯಕ್ರಮವು ಬಿಡದಿಯಲ್ಲಿ ಸಹಸ್ರಾರು ಭಕ್ತರು ಹಾಗೂ ಸಮುದಾಯದ ಮುಖಂಡರ ಸಮ್ಮುಖದಲ್ಲಿ ಭಾನುವಾರ ವಿಜೃಂಭಣೆಯಿಂದ ನೆರವೇರಿತು.

ಬಿಡದಿ ಪಟ್ಟಣದ ರೈಲ್ವೆ ನಿಲ್ದಾಣದ ಮುಖ್ಯರಸ್ತೆಯಲ್ಲಿರುವ ಅರಳಿಮರದ ಬಳಿ ತ್ರಿವಿಧ ದಾಸೋಹಿ ಡಾ. ಶಿವಕುಮಾರಸ್ವಾಮಿರವರ ಮಹಾದ್ವಾರ ನಿರ್ಮಾಣ (ಸ್ವಾಗತ ಕಮಾನು) ಕಾಮಗಾರಿಗೆ ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗಸ್ವಾಮೀಜಿ ಭೂಮಿ ಪೂಜೆ ನೆರವೇರಿಸಿದರು. ನಂತರ ಶ್ರೀಗಳ 119ನೇ ಜಯಂತೋತ್ಸವ ಕಾರ್ಯಕ್ರಮದ ಅಂಗವಾಗಿ ಪರಮಪೂಜ್ಯರ ಭಾವಚಿತ್ರವನ್ನು ಬೆಳ್ಳಿಯ ರಥದ ಪಲ್ಲಕ್ಕಿಯಲ್ಲಿರಿಸಿ ಮುಖ್ಯರಸ್ತೆಯಲ್ಲಿ ಜಾನಪದ ಕಲಾತಂಡಗಳೊಂದಿಗೆ ಭವ್ಯ ಮೆರವಣಿಗೆ ಮಾಡಲಾಯಿತು.

ಮೆರವಣಿಗೆಯಲ್ಲಿ ಕನಕಪುರ ತಾಲೂಕು ಮರಳೇಗವಿ ಮಠದ ಶ್ರೀಡಾ.ಮುಮ್ಮಡಿ ಶಿವರುದ್ರ ಮಹಾಸ್ವಾಮಿ ಹಾಗೂ ಬಿಡದಿ ಚೌಕಿಮಠದ ಶ್ರೀಹುಚ್ಚಪ್ಪ ಮಹಾಸ್ವಾಮಿಗಳೊಂದಿಗೆ ಶ್ರೀಸಿದ್ದಲಿಂಗ ಸ್ವಾಮೀಜಿರವರು ಕಾಲ್ನಡಿಗೆಯಲ್ಲಿ ಬಸವೇಶ್ವರಸ್ವಾಮಿ ದೇವಾಲಯ ಹಾಗೂ ಈಶ್ವರ ದೇವಾಲಯಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.

ಈ ವೇಳೆ ಸಿದ್ದಗಂಗಾ ಮಠದ ಶ್ರೀಸಿದ್ದಲಿಂಗ ಸ್ವಾಮೀಜಿರವರು ಮಾತನಾಡಿ, ಯಾವುದೇ ಸಮುದಾಯದಲ್ಲಿ ಒಗ್ಗಟ್ಟು ಮೂಡದ ಹೊರತು ಅಭಿವೃದ್ಧಿ ಅಥವಾ ಕಲ್ಯಾಣ ಕಾರ್ಯಕ್ರಮಗಳ ಸಕಾರಗೊಳ್ಳುವುದು ಕಷ್ಟಸಾಧ್ಯ. ಬಿಡದಿಯಲ್ಲಿ ಡಾ.ಶಿವಕುಮಾರ ಸ್ವಾಮೀಜಿರವರ ಮಹಾದ್ವಾರದ ಶಂಕುಸ್ಥಾಪನೆಗೆ ಶ್ರದ್ದೆ, ಉತ್ಸಾಹ, ಶ್ರಮ ಎಲ್ಲದಕ್ಕಿಂದ ಮುಖ್ಯವಾಗಿ ಐಕ್ಯತೆಯಿಂದ ಎಲ್ಲಾ ಯುವಕರು ಕೆಲಸ ಮಾಡುತ್ತಿರುವುದು ಸಂತಸ ತಂದಿದೆ. ಈ ಐಕ್ಯತೆಯನ್ನು ಅಳವಡಿಸಿಕೊಂಡು ಅನ್ಯೋನ್ಯವಾಗಿ ಜೀವನ ನಡೆಸಬೇಕು ಎಂದು ಕಿವಿಮಾತು ಹೇಳಿದರು.

ನಾಲ್ವಡಿ ಕೃಷ್ಣರಾಜರ ಸ್ಮರಣೆ:

ನಾಡಿನ ಅಭಿವೃದ್ಧಿ ವಿಚಾರದಲ್ಲಿ ದೂರದೃಷ್ಟಿ ಹೊಂದಿದ್ದ ಮೈಸೂರು ನಾಲ್ವಡಿ ಕೃಷ್ಣರಾಜ ಒಡೆಯರ್‌ರವರು ಬೆಂಗಳೂರು ಅರಮನೆಗೆ ಪ್ರಯಾಣ ಮಾಡುವಾಗ ಬಿಡದಿ ಗ್ರಾಮದಲ್ಲಿ ವಿಶ್ರಾಂತಿಯನ್ನು ಪಡೆದು ಹೋಗುತ್ತಿದ್ದರಂತೆ. ಬಿಡಾರ ಎಂದು ಕರೆಯಲಾಗುತ್ತಿದ್ದ ಗ್ರಾಮ ಕ್ರಮೇಣ ಬಿಡದಿಯಾಗಿದೆ. ಅಂತಹ ವಿಶೇಷ ಮಹತ್ವ ಪಡೆದ ಗ್ರಾಮ ಇದಾಗಿದೆ. ಮೈಸೂರು ಮಹಾರಾಜರು ಶಿಕ್ಷಣ, ಆರೋಗ್ಯ, ಕೃಷಿ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿನ ಸಮಾಜಪರ ಕಾರ್ಯಗಳನ್ನು ನಾವುಗಳು ಮರೆಯುವಂತಿಲ್ಲ ಎಂದು ಶ್ರೀಗಳು ಹೇಳಿದರು.

ಬಿಜಿಎಸ್ ವೃತ್ತದಲ್ಲಿ ಆದಿಚುಚನಗಿರಿ ಕ್ಷೇತ್ರದ ಜಗದ್ಗುರು ಶ್ರೀಬಾಲಗಂಗಾಧರನಾಥ ಸ್ವಾಮೀಜಿಗಳ ಮಹಾದ್ವಾರವಿದೆ. ಈಗ ಇದರ ಸಮೀಪದಲ್ಲಿಯೇ ಡಾ.ಶ್ರೀ ಶಿವಕುಮಾರ ಸ್ವಾಮೀಜಿರವರ ಮಹಾದ್ವಾರ ನಿರ್ಮಿಸುತ್ತಿರುವುದು ಸಂತಸ ಮೂಡಿಸಿದೆ. ಇನ್ನೊಂದು ವರ್ಷದಲ್ಲಿ ಈ ಮಹಾದ್ವಾರದ ಕೆಲಸ ಪೂರ್ಣಗೊಳ್ಳಬೇಕು. ಇದನ್ನು ಸವಾಲೆಂದು ಭಾವಿಸಿ ಎಲ್ಲರೂ ಕೆಲಸ ಮಾಡಬೇಕೆಂದು ತಿಳಿಸಿ ಶುಭ ಹಾರೈಸಿದರು.

ಮೂರು ತಿಂಗಳೊಳಗೆ ಮಹಾದ್ವಾರ ನಿರ್ಮಾಣ:

ಸಮುದಾಯದ ಮುಖಂಡರು ಬಿಡದಿ ಪುರಸಭೆ ಸದಸ್ಯರಾದ ಬಿ.ಜೆ.ಲೋಹಿತ್ ಕುಮಾರ್ ಮಾತನಾಡಿ, ಶ್ರೀ ಶಿವಕುಮಾರ ಸ್ವಾಮೀಜಿಗಳ ಮಹಾದ್ವಾರ ನಿರ್ಮಾಣ ಭೂಮಿಪೂಜೆ ಕಾರ್ಯಕ್ಕೆ ಜನರು ಪಕ್ಷಾತೀತ ಮತ್ತು ಜಾತ್ಯತೀತವಾಗಿ ಬೆಂಬಲ ನೀಡಿದ್ದಾರೆ.

ಮುಂದಿನ ಮೂರು ತಿಂಗಳೊಳಗೆ ಮಹಾದ್ವಾರದ ನಿರ್ಮಾಣ ಕಾರ್ಯ ಪೂರ್ಣಗೊಳಿಸಲು ಪ್ರಯತ್ನಿಸುವುದಾಗಿ ಹೇಳಿದರು.


ಬಿಡದಿಯ ಮುಖ್ಯರಸ್ತೆಗೆ ಈಗಾಗಲೇ ಶ್ರೀಶಿವಕುಮಾರಸ್ವಾಮೀಜಿರವರ ಹೆಸರನ್ನು ನಾಮಕರಣ ಮಾಡಲಾಗಿದೆ. ಮಹಾದ್ವಾರ ನಿರ್ಮಾಣಕ್ಕೆ 30 ಲಕ್ಷ ರೂ. ಅಂದಾಜಿಸಲಾಗಿದ್ದು ಪುರಸಭೆ ನಿಧಿಯಲ್ಲಿ 20 ಲಕ್ಷ ಅನುದಾನವನ್ನು ಮೀಸಲಿಡಲಾಗಿದೆ. ಮಹಾದ್ವಾರ ನಿರ್ಮಾಣದ ಖರ್ಚು ಅಧಿಕವಾದರೆ ಅಗತ್ಯವಾದ ಹಣವನ್ನು ಮುಖಂಡರೆಲ್ಲರು ಸೇರಿ ಭರಿಸುವುದಾಗಿ ತಿಳಿಸಿದರು.

ಮಹಾದ್ವಾರ ನಿರ್ಮಾಣದ ಭೂಮಿ ಪೂಜೆ:

ಹಾಗೂ ಶ್ರೀ ಶಿವಕುಮಾರ ಸ್ವಾಮೀಜಿಗಳ 119ನೇ ಜಯಂತೋತ್ಸವ ಪ್ರಯುಕ್ತ ಬಿಜಿಎಸ್ ವೃತ್ತದಲ್ಲಿ ಭಕ್ತರಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು. ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಹಾಗೂ ಸಾರ್ವಜನಿಕರು ಭಾಗವಹಿಸಿ ಪ್ರಸಾದ ಸವಿದರು.

ವೀರಶೈವ ಸಮುದಾಯದ ಪ್ರಮುಖ ಮುಖಂಡರು ಹೋಟೆಲ್ ಉದ್ಯಮಿಗಳಾದ ಶಶಿಕುಮಾರ್, ರೇಣುಕಪ್ಪ, ಲೋಕೇಶ್, ಪೊಲೀಸ್ ರೇವಣ್ಣ, ಪುರಸಭೆ ಮಾಜಿ ಅಧ್ಯಕ್ಷ ಹರಿಪ್ರಸಾದ್, ಸದಸ್ಯರಾದ ರಾಕೇಶ್, ಸೋಮಶೇಖರ್, ಬಿಡದಿ ರೋಟರಿ ಸೆಂಟ್ರಲ್ ಅಧ್ಯಕ್ಷ ಬಿ.ಎಂ. ರಮೇಶ್‌ಕುಮಾರ್, ಮುಖಂಡರಾದ ನರಸಿಂಹಯ್ಯ, ಖಲೀಲ್, ಕುಮಾರ್, ವಿನಾಯಕಸ್ವಾಮಿ, ನಂಜುಂಡಪ್ಪ, ಬಾಲಾಜಿ, ನಿತ್ಯಾನಂದ, ರಾಮು, ವಿಶಾಲ್ ಮತ್ತಿತರರು ಹಾಜರಿದ್ದರು.

# ಇಂದಿನಿಂದ ಕರಗ ಹಾಗೂ ಪಟಾಲಮ್ಮ-ಮುತ್ಯಾಲಮ್ಮ ಜಾತ್ರಾ ಮಹೋತ್ಸವ



ಮಾಲೂರು

"ನಗರದ ಮುಜರಾಯಿ ಇಲಾಖೆಗೆ ಸೇರಿದ ಪಟಾಲಮ್ಮ ದೇವಾಲಯದ ಆವರಣದಲ್ಲಿ ಈ ಬಾರಿ ಜಾತ್ರಾ ಆಟಿಕೆ ಹಾಗೂ ಮಳಿಗೆಗಳ ಬಹಿರಂಗ ಹರಾಜಿನಿಂದ ಒಟ್ಟು 20,30,000 ರೂ. ಸಂಗ್ರಹವಾಗಿದೆ. ಈ ಮೊತ್ತವನ್ನು ದೇವಾಲಯದ ಬ್ಯಾಂಕ್ ಖಾತೆಗೆ ಜಮೆ ಮಾಡಿ, ಜಾತ್ರೆಯ ಧಾರ್ಮಿಕ ಕಾರ್ಯಕ್ರಮ ಹಾಗೂ ದೇವಸ್ಥಾನದ ಅಭಿವೃದ್ಧಿಗೆ ಬಳಸಲಾಗುವುದು," ಎಂದು ತಹಶೀಲ್ದಾರ್ ಎಂ.ವಿ. ರೂಪ ತಿಳಿಸಿದರು.

ಪಟಾಲಮ್ಮ– ಮುತ್ಯಾಲಮ್ಮ ದೇವಾಲಯದ ಆವರಣದಲ್ಲಿ ನಡೆದ ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆ ಹಾಗೂ ಬಹಿರಂಗ ಹರಾಜು ಪ್ರಕ್ರಿಯೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇತಿಹಾಸ ಪ್ರಸಿದ್ಧ ಧರ್ಮರಾಯಸ್ವಾಮಿ ದ್ರೌಪತಂಬಾ ಕರಗ ಮಹೋತ್ಸವ ಹಾಗೂ ಪಟಾಲಮ್ಮ–ಮುತ್ಯಾಲಮ್ಮ ಜಾತ್ರಾ ಮಹೋತ್ಸವವು ಇದೇ 8 ರಿಂದ 12 ರವರೆಗೆ ಜರುಗಲಿದೆ. ಸಿಡಿ ಉತ್ಸವ ಸೇರಿದಂತೆ ಎಲ್ಲಾ ಧಾರ್ಮಿಕ ವಿಧಿವಿಧಾನಗಳಿಗೆ ಸಿದ್ಧತೆ ಮಾಡಿಕೊಳ್ಳಲಾಗಿದೆ. ಜಾತ್ರೆಗಾಗಿ ದೇವಾಲಯಕ್ಕೆ ಸೇರಿದ 4 ಎಕರೆ ಜಮೀನನ್ನು ನಗರಸಭೆ ವತಿಯಿಂದ ಈಗಾಗಲೇ ಸ್ವಚ್ಛಗೊಳಿಸಲಾಗಿದೆ. ಭಕ್ತರಿಗೆ ಕುಡಿಯುವ ನೀರು, ಬೀದಿ ದೀಪ, ವಿದ್ಯುತ್ ಅಲಂಕಾರ ಹಾಗೂ ಪ್ರಸಾದ ವಿನಿಯೋಗಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದು ತಹಶೀಲ್ದಾರ್ ವಿವರಿಸಿದರು.

ಪಾರದರ್ಶಕ ಹರಾಜು ಪ್ರಕ್ರಿಯೆ: ಇದೇ ಮೊದಲ ಬಾರಿಗೆ ಜಾತ್ರಾ ಆವರಣದ ಆಟಿಕೆ ಮತ್ತು ಮಳಿಗೆಗಳಿಗೆ ಬಹಿರಂಗ ಹರಾಜು ನಡೆಸಲಾಯಿತು.

ಮನರಂಜನಾ ಆಟಿಕೆಗಳು: ನಾಗೇಶ್ ಎಂಬುವವರು 19.50 ಲಕ್ಷ ರೂ.ಗಳಿಗೆ ಹರಾಜು ಪಡೆದರು.

ಅಂಗಡಿ ಮಳಿಗೆಗಳು: ಕುರಿ ಮಂಜು ಎಂಬುವವರು 80,000 ರೂ.ಗಳಿಗೆ ಹರಾಜಿನಲ್ಲಿ ಪಡೆದುಕೊಂಡರು.

ಒಟ್ಟು 15ಕ್ಕೂ ಹೆಚ್ಚು ಬಿಡ್‌ದಾರರು ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದರು.

ಸಮುದಾಯ ಭವನ ನಿರ್ಮಾಣದ ಗುರಿ: ಜಾತ್ರೆ ಮುಗಿದ ನಂತರ ದಾನಿಗಳ ನೆರವು ಹಾಗೂ ಮುಜರಾಯಿ ಇಲಾಖೆಯ ಅನುದಾನದೊಂದಿಗೆ ದೇವಾಲಯದ ಆವರಣದಲ್ಲಿ ಸುಸಜ್ಜಿತ ಸಮುದಾಯ ಭವನ ನಿರ್ಮಿಸುವ ಯೋಜನೆಯಿದೆ ಎಂದು ತಹಶೀಲ್ದಾರ್ ತಿಳಿಸಿದರು. ಹಿರಿಯ ದಾನಿಗಳು ಮತ್ತು ಸೇವಕರ್ತರು ಜಾತ್ರೆಯ ಯಶಸ್ಸಿಗೆ ಸಹಕರಿಸುವಂತೆ ಅವರು ಮನವಿ ಮಾಡಿದರು.

ಸಭೆಯಲ್ಲಿ ರಾಜಸ್ವ ನಿರೀಕ್ಷಕ ಅರುಣ್ ಕುಮಾರ್, ಇಓ ರಾಹುಲ್, ಗ್ರಾಮ ಆಡಳಿತ ಅಧಿಕಾರಿಗಳಾದ ಮಧುಸೂಧನ್, ಶಿವಕುಮಾರ್, ಅರ್ಚಕ ಗೋಪಾಲಕೃಷ್ಣ, ಮುಖಂಡ ಪೆರುಮಾಳಪ್ಪ, ಪಂಚೆ ನಂಜುಂಡಪ್ಪ ಉಪಸ್ಥಿತರಿದ್ದರು.

ಭಾರತ ಸಾರಥಿ
09/04/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಚೈತ್ರ ಹುಣ್ಣಿಮೆ ಹನುಮ ಜಯಂತಿ ಪ್ರಯುಕ್ತ ದೇವಾಲಯಗಳಲ್ಲಿ ವಿಶೇಷ ಪೂಜೆ

ರಾಮನಗರ

ಜಿಲ್ಲೆಯಲ್ಲಿ ಚೈತ್ರ ಹುಣ್ಣಿಮೆ ಹಾಗೂ ಹನುಮ ಜಯಂತಿಯನ್ನು ಭಕ್ತರು ಸಂಭ್ರಮ ಮತ್ತು ಸಡಗರದಿಂದ ಆಚರಿಸಿದರು. ಬಹುತೇಕ ದೇವಾಲಯಗಳಲ್ಲಿ ಪೂಜಾ ಕೈಂಕರ್ಯಗಳು ಜರುಗಿದವು.



ನಗರದ ಛತ್ರದ ಬೀದಿಯ ಶ್ರೀರಾಮದೇವರ ದೇವಸ್ಥಾನ, ಆಗ್ರಹಾರದ ಆಂಜನೇಯಸ್ವಾಮಿ ದೇವಾಲಯ, ಕೆಂಪೇಗೌಡ ಸರ್ಕಲ್‌ನಲ್ಲಿರುವ ಶ್ರೀ ಲಕ್ಷ್ಮೀವೆಂಕಟೇಶ್ವರ ದೇವಾಲಯ, ಕಾಯಿಸೊಪ್ಪಿನಬೀದಿಯ ಲಕ್ಷ್ಮೀನಾರಾಯಣಸ್ವಾಮಿ ದೇಗುಲ, ವಿಜಯನಗರದ ಅಭಯ ಆಂಜನೇಯಸ್ವಾಮಿ ದೇವಾಲಯ, ಕಾಳಿಕಾಂಬ ದೇವಾಲಯ ಸೇರಿದಂತೆ ಅನೇಕ ಪ್ರಮುಖ ದೇವಾಲಯಗಳಲ್ಲಿ ಭಕ್ತಿಪೂರ್ವಕವಾಗಿ ಪೂಜಾ ಕಾರ್ಯಗಳು ನೆರವೇರಿದವು.

ಬಿಡದಿಯ ಪ್ರಸಿದ್ಧ ಶ್ರೀಕೋತಿ ಆಂಜನೇಯಸ್ವಾಮಿ ದೇವಾಲಯದಲ್ಲಿ ಚೈತ್ರ ಹುಣ್ಣಿಮೆ ಹಾಗೂ ಹನುಮ ಜಯಂತಿಯ ವಿಶೇಷ ಪೂಜೆ ಹಾಗೂ ಅನ್ನಸಂತರ್ಪಣೆ ಯಶಸ್ವಿಯಾಗಿ ನೆರವೇರಿತು.

ಶ್ರೀಕೋತಿ ಆಂಜನೇಯಸ್ವಾಮಿ ದೇಗುಲದಲ್ಲಿ ಹನುಮ ಜಯಂತಿ ಅಂಗವಾಗಿ ನಾನಾ ಪೂಜಾ ಕೈಂಕರ್ಯಗಳು ಜರುಗಿದವು. ಮುಂಜಾನೆ ಹನುಮ ಮೂರ್ತಿಗೆ 108 ಎಳನೀರಿನ ಅಭಿಷೇಕ, ನವಗ್ರಹ ಆರಾಧನೆ, ನವಕಳಸ ಸ್ಥಾಪನೆ, ಪಂಚಾಮೃತ ಅಭಿಷೇಕ, ಪವಮಾನ ಹೋಮ ಹಾಗೂ ವಿಶೇಷ ಪೂಜೆ ನಡೆಯಿತು. ಹನುಮನ ಮೂರ್ತಿಯನ್ನು ಬೆಣ್ಣೆಯಿಂದ ಅಲಂಕರಿಸಲಾಗಿತ್ತು.

ಚೈತ್ರ ಹುಣ್ಣಿಮೆ ಮತ್ತು ಹನುಮ ಜಯಂತಿ ಪ್ರಯುಕ್ತ ಭಕ್ತಾಧಿಗಳು 2 ಸಾವಿರಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ದೇವಾಲಯಕ್ಕೆ ಆಗಮಿಸಿದ್ದರು.

ದೇವಾಲಯದ ವೀರಾಂಜನೇಯಸ್ವಾಮಿ ಟ್ರಸ್ಟ್ ವತಿಯಿಂದ ಭಕ್ತಾಧಿಗಳಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

# ಹುಲಿ ಸೆರೆಗೆ ಅಳವಡಿಸಿದ್ದ ಬೋನಲ್ಲಿ ಚಿರತೆ ಲಾಕ್

ಚಾಮರಾಜನಗರ

ಗಡಿ ಜಿಲ್ಲೆಯಲ್ಲಿ ಮಾನವ ಮತ್ತು ಪ್ರಾಣಿ ಸಂಘರ್ಷ ಮುಂದುವರೆದಿದ್ದು ಹುಲಿಗಾಗಿ ಇಟ್ಟಿದ್ದ ಬೋನಿಗೆ ಚಿರತೆ ಸೆರೆಯಾಗಿರುವ ಘಟನೆ ಗುಂಡ್ಲುಪೇಟೆ ತಾಲೂಕಿನ ಪಡಗೂರು ಗ್ರಾಮದಲ್ಲಿ ನಡೆದಿದೆ.

ಪಡಗೂರು ಗ್ರಾಮದ ರೈತ ಮಹಾದೇವಸ್ವಾಮಿ ಎಂಬುವರ ಜಮೀನಿನಲ್ಲಿ ಚಿರತೆ ಸೆರೆಯಾಗಿದ್ದು, ಸೆರೆಸಿಕ್ಕ ಚಿರತೆ ಅಂದಾಜು 4 ವರ್ಷ ಪ್ರಾಯದ ಹೆಣ್ಣು ಚಿರತೆಯಾಗಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಕಳೆದ ಹಲವು ದಿನಗಳಿಂದ ಪಡಗೂರು ಸುತ್ತಮುತ್ತ ಹುಲಿ ಓಡಾಟದ ಆತಂಕವನ್ನು ರೈತರು ಹೊರಹಾಕಿದ್ದರಿಂದ ತುಮಕೂರು ಮಾದರಿ ಬೋನಿಟ್ಟು ಕರುವೊಂದನ್ನು ಕಟ್ಟಲಾಗಿತ್ತು. ಆಹಾರ ಅರಸಿ ಬಂದ ಚಿರತೆ ಈ ಬೋನಿನಲ್ಲಿ ಸಿಲುಕಿದೆ.

ಹುಲಿ ಸೆರೆಗೆ ಕ್ರಮ ವಹಿಸಿ – ಪಡಗೂರು ಶಿವಕುಮಾರ್: ಸದ್ಯ, ಸೆರೆ ಸಿಕ್ಕ ಚಿರತೆಯನ್ನು ಸುರಕ್ಷಿತ ಪ್ರದೇಶಕ್ಕೆ ಅರಣ್ಯ ಇಲಾಖೆ ಬಿಟ್ಟಿದೆ. ಚಿರತೆ ಸೆರೆಯಾಗಿದೆ, ಆದರೆ ಹುಲಿ ಆತಂಕ ಇನ್ನೂ ಇದ್ದು, ಅರಣ್ಯ ಇಲಾಖೆಯು ಕೂಡಲೇ ಹುಲಿ ಸೆರೆಗೆ ಕ್ರಮ ವಹಿಸಬೇಕೆಂದು ರೈತ ಮುಖಂಡ ಪಡಗೂರು ಶಿವಕುಮಾರ್ ಒತ್ತಾಯಿಸಿದರು. ಆದರೆ ಹುಲಿ ಆತಂಕ ಇನ್ನೂ ಇದ್ದು, ಅರಣ್ಯ ಇಲಾಖೆಯು ಕೂಡಲೇ ಹುಲಿ ಸೆರೆಗೆ ಕ್ರಮ ವಹಿಸಬೇಕೆಂದು ರೈತ ಮುಖಂಡ ಪಡಗೂರು ಶಿವಕುಮಾರ್ ಒತ್ತಾಯಿಸಿದರು.

ಬಂಡೀಪುರ ಹುಲಿ ರಕ್ಷಿತಾರಣ್ಯದ ಗುಂಡ್ಲುಪೇಟೆ ಬಫರ್ ವಲಯ ವ್ಯಾಪ್ತಿಗೆ ಪಡಗೂರು ಗ್ರಾಮ ಒಳಪಡಲಿದ್ದು, ಈ ಹಿಂದೆಯೂ ಕೂಡ ಚಿರತೆಗಳು ಈ ಭಾಗದಲ್ಲಿ ಸೆರೆ ಸಿಕ್ಕಿದ್ದವು.

# ಕಸಾಪ ಪರಿಷತ್ತಿನ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಡಾ. ಸಿ. ಸೋಮಶೇಖರ್‌ಗೆ ಬೆಂಬಲ

ದೇವನಹಳ್ಳಿ

"ಮುಂಬರುವ ಕನ್ನಡ ಸಾಹಿತ್ಯ ಪರಿಷತ್ತಿನ (ಕಸಾಪ) ರಾಜ್ಯಾಧ್ಯಕ್ಷ ಸ್ಥಾನದ ಚುನಾವಣೆಯಲ್ಲಿ ಸ್ಪರ್ಧಿಸಲಿರುವ ಸಚ್ಚಾರಿತ್ರ್ಯದ ವ್ಯಕ್ತಿತ್ವದ ಡಾ. ಸಿ. ಸೋಮಶೇಖರ್ ಅವರಿಗೆ ನಮ್ಮ ಜಿಲ್ಲಾ ಘಟಕದ ಸಂಪೂರ್ಣ ಬೆಂಬಲವಿದ್ದು, ಅವರ ಗೆಲುವು ಖಚಿತ," ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಸಾಪ ಅಧ್ಯಕ್ಷ ಬಿ.ಎನ್. ಕೃಷ್ಣಪ್ಪ ಘೋಷಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಡಾ. ಸಿ. ಸೋಮಶೇಖರ್ ಅವರ ಚುನಾವಣಾ ಪ್ರಣಾಳಿಕೆ ಹಾಗೂ ಕರಪತ್ರವನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು.

"ಡಾ. ಸಿ. ಸೋಮಶೇಖರ್ ಅವರು ನಾಡು, ನುಡಿ, ನೆಲ ಮತ್ತು ಜಲದ ಬಗ್ಗೆ ಅಪಾರ ಕಾಳಜಿ ಹೊಂದಿದ್ದಾರೆ. ಅವರ ಸೇವಾ ಮನೋಭಾವವನ್ನು ಗುರುತಿಸಿ ನಾವು ಅವರಿಗೆ ಬೆಂಬಲ ನೀಡುತ್ತಿದ್ದೇವೆ. ಕನ್ನಡದ ಕಟ್ಟಾಳು ನಬಿಸಾಬ್ ಅವರು ರಾಜ್ಯಾದ್ಯಂತ ಸಂಚರಿಸಿ ಪದಾಧಿಕಾರಿಗಳ ಅಭಿಪ್ರಾಯ ಸಂಗ್ರಹಿಸುತ್ತಿದ್ದು, ಜಿಲ್ಲೆಯ ಎಲ್ಲಾ ಪದಾಧಿಕಾರಿಗಳ ಒಮ್ಮತದ ತೀರ್ಮಾನದಂತೆ ನಾವು ಸೋಮಶೇಖರ್ ಅವರ ಬೆಂಬಲಕ್ಕೆ ನಿಂತಿದ್ದೇವೆ," ಎಂದು ಕೃಷ್ಣಪ್ಪ ತಿಳಿಸಿದರು.

ತಾಲೂಕು ಕಸಾಪ ಅಧ್ಯಕ್ಷ ಆರ್.ಕೆ. ನಂಜೇಗೌಡ ಮಾತನಾಡಿ, "ಸಿ. ಸೋಮಶೇಖರ್ ಅವರು ಪರಿಷತ್ತಿಗೆ ಹೊಸಬರಲ್ಲ, ದಶಕಗಳಿಂದ ಕನ್ನಡಕ್ಕಾಗಿ ಪ್ರಾಮಾಣಿಕವಾಗಿ ದುಡಿಯುತ್ತಾ ಬಂದಿದ್ದಾರೆ. ನಿವೃತ್ತಿಯ ನಂತರವೂ ವಿಶ್ರಾಂತಿ ಬಯಸದೆ ಕನ್ನಡ ಸೇವೆಯಲ್ಲಿ ತೊಡಗಿರುವ ಇಂತಹ ವಿದ್ವಾಂಸರ ಮಾರ್ಗದರ್ಶನ ಯುವ ಪೀಳಿಗೆಗೆ ಅಗತ್ಯವಿದೆ. ಇವರನ್ನು ಗೆಲ್ಲಿಸಲು ತಾಲೂಕು ಮತ್ತು ಜಿಲ್ಲಾ ಸಮಿತಿ ಕಟಿಬದ್ಧವಾಗಿದೆ," ಎಂದರು.

ಇದೇ ಸಂದರ್ಭದಲ್ಲಿ ನಬಿಸಾಬ್ ಮತ್ತು ಅಬ್ದುಲ್ ಕಲಾಂ ಅವರ ಸಮ್ಮುಖದಲ್ಲಿ ಜಿಲ್ಲೆಯ ಪದಾಧಿಕಾರಿಗಳ ಅಭಿಪ್ರಾಯಗಳನ್ನು ಕಲೆಹಾಕಲಾಯಿತು. ಕನ್ನಡದ ಉಳಿವಿಗಾಗಿ ನಿರಂತರವಾಗಿ ಶ್ರಮಿಸುವ ನಬಿಸಾಬ್ ಅವರ ಕುಟುಂಬದ ಸೇವೆಯನ್ನು ಸಭೆಯಲ್ಲಿ ಶ್ಲಾಘಿಸಲಾಯಿತು.

ಗೋಷ್ಠಿಯಲ್ಲಿ ಜಿಲ್ಲಾ ಕೋಶಾಧ್ಯಕ್ಷ ಡಾ. ಎಂ. ಮುನಿರಾಜು (ಅಪ್ಪಯ್ಯಣ್ಣ), ಜಿಲ್ಲಾ ಸಹ ಕಾರ್ಯದರ್ಶಿ ಎಸ್. ರಮೇಶ್ ಕುಮಾರ್, ವಿನೋದ್ ಕುಮಾರ್ ಗೌಡ, ಪ್ರಾಧ್ಯಾಪಕ ಶರಣಯ್ಯ, ರಬ್ಬನಹಳ್ಳಿ ಕೆಂಪಣ್ಣ, ದೇವನಹಳ್ಳಿ ದೇವರಾಜ್, ರಾಮಾಂಜಿನಪ್ಪ, ಸಿ.ಪಿ.ಎನ್. ರೆಡ್ಡಿ, ಪುನೀತ್, ಬಿ.ಕೆ. ಸಂಪತ್ ಕುಮಾರ್, ಶಿವಕುಮಾರ್, ಮಧುಸೂದನ್ ಮತ್ತಿತರರು ಭಾಗವಹಿಸಿದ್ದರು.

# 12 ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಹಾಸಭಾ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ

ಕೋಲಾರ

ರಾಜ್ಯದ ವಿಜಯಪುರ ಜಿಲ್ಲೆಯ ಬಿಡಿಜಿ ಕಾಲೇಜಿನಲ್ಲಿ ಏ.12 ರಂದು ಮಧ್ಯಾಹ್ನ 3 ಗಂಟೆಗೆ ಹಮ್ಮಿಕೊಂಡಿರುವ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಹಾಸಭಾ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಪಂಡಿತ್ ನರಹರಿ ಆಚಾರ್ ಮುತ್ತಗಿರ ಅವರು ವಹಿಸುವರು.

ಇದೇ ಸಂದರ್ಭದಲ್ಲಿ ಮಹಾಸಭಾದ ಸಮ್ಮೇಳನದ ಕಾರ್ಯಕ್ರಮ, ವಿಜಯಪುರ ಜಿಲ್ಲಾ ಘಟಕ ಮತ್ತು ಯುವ ಘಟಕ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವೂ ನಡೆಯಲಿದ್ದು, ಶ್ರೀಗಳು ಸಾನಿಧ್ಯ ವಹಿಸಲಿದ್ದಾರೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಖ್ಯಾತ ಜ್ಯೋತಿಷಿಗಳು ಹಾಗೂ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಹಾಸಭಾದ ಅಧ್ಯಕ್ಷ ಮಂಜುನಾಥ್ ಭಟ್‌ನೆರವೇರಿಸುವರು.

# ಪಾಲನಜೋಗಿಹಳ್ಳಿ ರಸ್ತೆಯಲ್ಲಿ ನಿಲ್ಲದ ಅಪಘಾತಗಳ ಸರಣಿ!

ದೊಡ್ಡಬಳ್ಳಾಪುರ

ತಾಲೂಕಿನ ಪಾಲನಜೋಗಿಹಳ್ಳಿ ರಸ್ತೆಯಲ್ಲಿ ಅಪಘಾತಗಳು ಸರ್ವೇ ಸಾಮಾನ್ಯ ಎಂಬಂತಾಗಿದ್ದು, ಸೋಮವಾರದಂದು ಕೆಎಸ್‌ಆರ್‌ಟಿಸಿ ಬಸ್ ಹರಿದು ಯುವಕನೊಬ್ಬ ಮೃತಪಟ್ಟ ಬೆನ್ನಲ್ಲೇ, ಮಂಗಳವಾರವು ಸಹ ಬೈಕ್ ಮಹಿಳೆಯೊಬ್ಬರಿಗೆ ಡಿಕ್ಕಿ ಹೊಡೆದ ಘಟನೆ ಸಂಭವಿಸಿದೆ.

ಯಲಹಂಕ–ಹಿಂದೂಪುರ ರಸ್ತೆಯ ಪಾಲನಜೋಗಿಹಳ್ಳಿಯ ಗಣೇಶ್ ದೇವಸ್ಥಾನದ ಮುಂಭಾಗ ಈ ಅಪಘಾತ ನಡೆದಿದೆ. ಮಜಾನ್ ಬಿ (55) ಗಾಯಗೊಂಡ ಮಹಿಳೆ. ಮಜಾನ್ ಬಿ ಅವರು ರಸ್ತೆ ಬದಿಯಲ್ಲಿ ಆಟೋಗಾಗಿ ಕಾಯುತ್ತಿದ್ದ ವೇಳೆ, ಅತೀ ವೇಗವಾಗಿ ಬಂದ ಬೈಕ್



ಮೊದಲು ಆಟೋಗೆ ಗುದ್ದಿ ನಂತರ ಮಹಿಳೆಗೆ ಡಿಕ್ಕಿ ಹೊಡೆದಿದೆ. ಅಪಘಾತದ ತೀವ್ರತೆಗೆ ಮಹಿಳೆಯ ಕಾಲು ಮುರಿದಿದ್ದು, ಸದ್ಯ ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಹಿಂದೂಪುರ–ಯಲಹಂಕ ರಸ್ತೆಯು ಟೋಲ್ ರಸ್ತೆಯಾಗಿದ್ದು, ಇದರ ನಿರ್ವಹಣೆಯ ಜವಾಬ್ದಾರಿ ಟೋಲ್ ಸಂಸ್ಥೆಯ ಮೇಲಿದೆ ಆದರೆ, ರಸ್ತೆಯಲ್ಲಿ ಕನಿಷ್ಠ ಸೂಚನಾ ಫಲಕಗಳು ಜೀಬ್ರಾ ಕ್ರಾಸಿಂಗ್ ಅಥವಾ ವೇಗ ನಿಯಂತ್ರಕಗಳನ್ನು ಅಳವಡಿಸಿಲ್ಲ. ಈ ನಿರ್ಲಕ್ಷ್ಯವೇ ಅಪಘಾತಗಳಿಗೆ ಕಾರಣವಾಗುತ್ತಿದೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೂಡಲೇ ಅಪಘಾತ ವಲಯಗಳಲ್ಲಿ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

# ಪ್ರಸನ್ನ ಗಂಗಾಧರೇಶ್ವರ ಸ್ವಾಮಿ ರಥೋತ್ಸವ ಸಂಪನ್ನ



ಶಿಡ್ಲಘಟ್ಟ

ತಾಲೂಕಿನ ಐತಿಹಾಸಿಕ ಪ್ರಸಿದ್ಧ ಜಂಗಮಕೋಟೆ ಗ್ರಾಮದಲ್ಲಿ ಶ್ರೀ ಪ್ರಸನ್ನ ಗಂಗಾಧರೇಶ್ವರ ಸ್ವಾಮಿಯ ಬ್ರಹ್ಮ ರಥೋತ್ಸವವು ಸಾವಿರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ಶ್ರದ್ಧಾಭಕ್ತಿ ಹಾಗೂ ಸಡಗರ ಸಂಭ್ರಮದಿಂದ ನೆರವೇರಿತು.

ರಥೋತ್ಸವದ ಅಂಗವಾಗಿ ಬೆಳಗಿನ ಜಾವದಿಂದಲೇ ದೇವಾಲಯದಲ್ಲಿ ಧಾರ್ಮಿಕ ವಿಧಿವಿಧಾನಗಳು ಆರಂಭವಾದವು. ದೇವಸ್ಥಾನವನ್ನು ಮಾವಿನ ತಳಿರು ತೋರಣ, ಬಾಳೆ ದಿಂಡು ಹಾಗೂ ವರ್ಣರಂಜಿತ ವಿದ್ಯುತ್ ದೀಪಗಳಿಂದ ಶೃಂಗರಿಸಲಾಗಿತ್ತು. ಸ್ವಾಮಿಗೆ ವಿಶೇಷ ಅಭಿಷೇಕ ಮತ್ತು ಪೂಜೆಗಳನ್ನು ಸಲ್ಲಿಸಿ, ಮಹಾ ಮಂಗಳಾರತಿಯ ನಂತರ ಭಕ್ತರಿಗೆ ತೀರ್ಥ ಪ್ರಸಾದ ವಿನಿಯೋಗಿಸಲಾಯಿತು.

ನಂತರ ಅಲಂಕೃತ ರಥದಲ್ಲಿ ಶ್ರೀ ಪ್ರಸನ್ನ ಗಂಗಾಧರೇಶ್ವರ ಸ್ವಾಮಿಯ ಉತ್ಸವ ಮೂರ್ತಿಯನ್ನು ಪ್ರತಿಷ್ಠಾಪಿಸಲಾಯಿತು. ನೆರೆದಿದ್ದ ಸಾವಿರಾರು ಭಕ್ತರು 'ಹರ ಹರ ಮಹಾದೇವ' ಎಂಬ ಜಯಘೋಷಗಳೊಂದಿಗೆ ರಥದ ಹಗ್ಗ ಎಳೆಯುವ ಮೂಲಕ ಚಾಲನೆ ನೀಡಿದರು. ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ತೇರಿಗೆ ಭಕ್ತಾಧಿಗಳು ಹಣ್ಣು–ಜವನ ಎಸೆದು ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥಿಸಿದರು.

ರಥೋತ್ಸವಕ್ಕೆ ಮೆರುಗು ನೀಡುವಂತೆ ಕೀಲುಕುದುರೆ, ಡೊಳ್ಳು ಕುಣಿತ, ವೀರಗಾಸೆ ಹಾಗೂ ಹಲಗೆ ಬಾರಿಸುವ ಕಲಾತಂಡಗಳು ಮೆರವಣಿಗೆಯುದ್ದಕ್ಕೂ ಪ್ರದರ್ಶನ ನೀಡಿದವು.

ದಾಸೋಹ: ಶ್ರೀರಾಮಮಂದಿರ ಪದ್ಮಶಾಲಿ ಸೇವಾಭಿವೃದ್ಧಿ ಟ್ರಸ್ಟ್ ವತಿಯಿಂದ ಭಕ್ತರಿಗೆ ಪಾನಕ, ಮಜ್ಜಿಗೆ ಹಾಗೂ ಕೋಸಂಬರಿ ವಿತರಿಸಲಾಯಿತು.

ಗ್ರಾಮೀಣ ಸೊಗಡು: ಸುತ್ತಮುತ್ತಲಿನ ಹಳ್ಳಿಗಳಿಂದ ಎತ್ತಿನಗಾಡಿಗಳಲ್ಲಿ ಪಾನಕ–ಮಜ್ಜಿಗೆಯನ್ನು ತಂದು ವಿತರಿಸಿದ್ದು ವಿಶೇಷವಾಗಿತ್ತು.

ಈ ಬಾರಿಯ ರಥೋತ್ಸವವು ಭಾವೈಕ್ಯತೆಗೆ ಸಾಕ್ಷಿಯಾಯಿತು. ಸ್ಥಳೀಯ ಜಾಮಿಯ ಮಸೀದಿ ವತಿಯಿಂದ ರಥೋತ್ಸವಕ್ಕೆ ಆಗಮಿಸಿದ ಭಕ್ತರಿಗೆ ಕುಡಿಯುವ ನೀರಿನ ಬಾಟಲಿಗಳನ್ನು ವಿತರಿಸುವ ಮೂಲಕ ಮುಸ್ಲಿಂ ಬಾಂಧವರು ಸೌಹಾರ್ದತೆ ಮೆರೆದರು. ಇದು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಯಿತು.

# ಕನ್ನಡ ಅಸ್ಮಿತೆಗಾಗಿ ಭಾಷಾ ಅನುಷ್ಠಾನ ಅನಿವಾರ್ಯ: ಡಾ. ಸಂತೋಷ ಹಾನಗಲ್ಲ

ದೊಡ್ಡಬಳ್ಳಾಪುರ

"ಕನ್ನಡ ಭಾಷೆಯ ಅಸ್ಮಿತೆಗಾಗಿ ಸರ್ಕಾರ ಕನ್ನಡ ಅನುಷ್ಠಾನ ಮಾಡುತ್ತಿದೆ. ಇದರೊಂದಿಗೆ ರಾಜ್ಯದ ಪ್ರತಿಯೊಬ್ಬರೂ ಕನ್ನಡ ಮಾತನಾಡುವ ವಾತಾವರಣ ನಿರ್ಮಾಣವಾಗಬೇಕು" ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ. ಸಂತೋಷ ಹಾನಗಲ್ಲ ಕರೆ ನೀಡಿದರು.



ನಗರದ ಕನ್ನಡ ಜಾಗೃತ ಭವನದಲ್ಲಿ ಜಿಲ್ಲಾ ಕನ್ನಡ ಜಾಗೃತಿ ಸಮಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕಸಾಪ ಹಾಗೂ ಕನ್ನಡ ಜಾಗೃತ ಪರಿಷತ್ತು ವತಿಯಿಂದ ಆಯೋಜಿಸಿದ್ದ 'ಕನ್ನಡ ಜಾಗೃತಿ ಕಾರ್ಯಕ್ರಮ' ಉದ್ಘಾಟಿಸಿ ಅವರು ಮಾತನಾಡಿದರು.

ದೈನಂದಿನ ವ್ಯವಹಾರದಲ್ಲಿ ಕನ್ನಡ ಬಳಸಿ: ಕನ್ನಡಿಗರು ಮೊದಲು ದಿನನಿತ್ಯದ ಮತ್ತು ಸಾರ್ವಜನಿಕ ಪತ್ರ ವ್ಯವಹಾರಗಳನ್ನು ಕನ್ನಡದಲ್ಲೇ ಮಾಡಬೇಕು. ರಾಜ್ಯ ಸರ್ಕಾರಕ್ಕಷ್ಟೇ ಅಲ್ಲದೆ, ಕೇಂದ್ರ ಸರ್ಕಾರಕ್ಕೂ ಕನ್ನಡದಲ್ಲೇ ಪತ್ರ ಬರೆಯುವ ಹವ್ಯಾಸ ಬೆಳೆಸಿಕೊಳ್ಳಬೇಕು. ಬೆಂಗಳೂರಿನಂತಹ ಬಹುಭಾಷಾ ನಗರಗಳಲ್ಲಿ ಕನ್ನಡವನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಕನ್ನಡಿಗರ ಮೇಲಿದೆ. ಪ್ರಾಧಿಕಾರವು ಕನ್ನಡೇತರರಿಗೆ ಕನ್ನಡ ಕಲಿಸುವ ಯೋಜನೆಯನ್ನು ನಿರಂತರವಾಗಿ ನಡೆಸುತ್ತಿದೆ ಎಂದು ಅವರು ತಿಳಿಸಿದರು.

ಪ್ರಾಧಿಕಾರದ ಸದಸ್ಯ ಟಿ. ತಿಮ್ಮೇಶ್ ಮಾತನಾಡಿ, "ಕರ್ನಾಟಕದಲ್ಲಿ ಕನ್ನಡವೇ ಸಾರ್ವಭೌಮ ಭಾಷೆ. ಬೆಂಗಳೂರಿನಲ್ಲಿ ಕನ್ನಡಿಗರ ಸಂಖ್ಯೆ ಶೇ. 40ಕ್ಕೆ ಇಳಿದಿರುವುದು ಆತಂಕಕಾರಿ. ಕನ್ನಡ ವಿರೋಧಿಗಳ ಬಗ್ಗೆ ಎಚ್ಚರವಹಿಸಿ, ರಾಜ್ಯದಲ್ಲಿ ಶೇ. 100 ರಷ್ಟು ಕನ್ನಡ ಜಾರಿಗೆ ತರಬೇಕು. ಕನ್ನಡಿಗರು ಶಿಕ್ಷಣ ಮತ್ತು ಉದ್ಯೋಗದಿಂದ ವಂಚಿತರಾಗಬಾರದು" ಎಂದರು.

ಜಿಲ್ಲಾ ಕಸಾಪ ಅಧ್ಯಕ್ಷ ಪ್ರೊ. ಬಿ.ಎನ್. ಕೃಷ್ಣಪ್ಪ ಮಾತನಾಡಿ, ಬಹುರಾಷ್ಟ್ರೀಯ ಕಂಪನಿಗಳು, ರಾಷ್ಟ್ರೀಕೃತ ಬ್ಯಾಂಕುಗಳು ಮತ್ತು ಸ್ವಾಯತ್ತ ವಿಶ್ವವಿದ್ಯಾಲಯಗಳಲ್ಲಿ ಕನ್ನಡ ಭಾಷೆ ನಿರ್ಲಕ್ಷ್ಯಕ್ಕೊಳಗಾಗುತ್ತಿದೆ. ಪ್ರಾಧಿಕಾರ ಈ ಬಗ್ಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಶಿಕ್ಷಣದಲ್ಲಿ ದ್ವಿಭಾಷಾ ನೀತಿಯನ್ನು ಶಾಸನವಾಗಿ ರೂಪಿಸಿ ಜಾರಿಗೊಳಿಸಬೇಕೆಂದು ಒತ್ತಾಯಿಸಿ ವಿವಿಧ ಕನ್ನಡಪರ ಸಂಘಟನೆಗಳ ಮುಖಂಡರು ಮುಖ್ಯಮಂತ್ರಿಗಳಿಗೆ ಬರೆದ ಮನವಿಯನ್ನು ಡಾ. ಸಂತೋಷ ಹಾನಗಲ್ಲ ಅವರಿಗೆ ಸಲ್ಲಿಸಿದರು. ಈ ನೀತಿ ಜಾರಿಯಾದಲ್ಲಿ ಪ್ರತಿಯೊಬ್ಬರೂ ಕಡ್ಡಾಯವಾಗಿ ಕನ್ನಡ ಕಲಿಯಲು ಪೂರಕವಾಗಲಿದೆ ಎಂದು ಮುಖಂಡರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಡಾ. ಮಲ್ಲಪ್ಪ ಕೆ. ಯರಗೋಳ, ಬಿಇಒ ಟಿ.ಎಸ್. ಶಂಕರಯ್ಯ, ತಾಲ್ಲೂಕು ಕಸಾಪ ಅಧ್ಯಕ್ಷ ಪಿ. ಗೋವಿಂದರಾಜು, ಕೆ. ಹನುಮಂತಯ್ಯ, ಡಿ.ಪಿ. ಆಂಜನೇಯ, ಜಿಲ್ಲಾ ಜಾಗೃತಿ ಸಮಿತಿ ಸದಸ್ಯರಾದ ಕೆ. ಮಹಾಲಿಂಗಯ್ಯ, ನಾಗರತ್ನಮ್ಮ ಸೇರಿದಂತೆ ಹಲವು ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಹೆಚ್.ಬೈರಾಪುರ ಜಾತ್ರೆಗೆ ಅದ್ದೂರಿ ತೆರೆ

ತಿಪಟೂರು

ತಾಲೂಕಿನ ಹೊನ್ನವಳ್ಳಿ ಹೋಬಳಿಯ ಶ್ರೀ ಕ್ಷೇತ್ರ ಹೆಚ್.ಬೈರಾಪುರ ಗ್ರಾಮ ದೇವತೆ ಶ್ರೀ ಕರಿಯಮ್ಮ ದೇವಿ ಮತ್ತು ಶ್ರೀ ಪ್ಲೇಗಿನಮ್ಮ ದೇವಿಯವರ ಜಾತ್ರಾ ಮಹೋತ್ಸವದ ಅಂಗವಾಗಿ ಸಾವಿರಾರು ಭಕ್ತರ ಮತ್ತು ಸಾರ್ವಜನಿಕರ ಹರ್ಷೋದ್ಗಾರ ಮತ್ತು ಇಷ್ಟಾರ್ಥ ಸಿದ್ಧಿಸಲೆಂದು ಭಕ್ತಾದಿಗಳು ಪುಷ್ಪಾಲಂಕೃತದೊಂದಿಗೆ ಶ್ರೀ ದೇವರುಗಳನ್ನು ರಥದಲ್ಲಿ ಕುಳ್ಳಿರಿಸಿದ ರಥಕ್ಕೆ, ಬಾಳೆಹಣ್ಣು ಎಸೆಯುವುದರ ಮೂಲಕ ಮತ್ತು ರಥದ ಗಾಲಿಗೆ (ಚಕ್ರಕ್ಕೆ) ಶ್ರೀ ಧೂತರಾಯ ಸ್ವಾಮಿ ತೆಂಗಿನ ಕಾಯಿ ಇಡುಗಾಯಿ ಹಾಕುವುದರ ಮೂಲಕ ರಥೋತ್ಸವ ವಿಜೃಂಭಣೆಯಿಂದ ವೈಭಯುತವಾಗಿ ಜರುಗಿತು.

ಶ್ರೀ ಅಮ್ಮನವರ ಮೂಲಸ್ಥಾನದ ಆವರಣದಲ್ಲಿ ಉಯ್ಯಾಲೋತ್ಸವ, ಸಂಜೆ ಸಿಡಿ ಉತ್ಸವ ನಂತರ ದೇವರುಗಳಿಗೆ ಮಣೆವು ಕಾರ್ಯಕ್ರಮದೊಂದಿಗೆ, ಸುಮಾರು ಐದು ದಿನಗಳಿಂದ ನಡೆಯುತ್ತಿದ್ದ ಅದ್ದೂರಿ ಜಾತ್ರೆಗೆ ತೆರೆ ಬಿದ್ದಿತ್ತು.

ರಥೋತ್ಸವದ ಅಂಗವಾಗಿ ಬೆಳಿಗ್ಗೆ ರಥಕ್ಕೆ ವಿಶೇಷ ಪೂಜೆ ನೆರವೇರಿಸಿ, ರಥವನ್ನು ವಿವಿಧ ಹೂವು, ಹಾರ ಮತ್ತು ಬಣ್ಣ ಬಣ್ಣದ ಬಾವುಟದಿಂದ ಅಲಂಕರಿಸಲಾಗಿತ್ತು. ದೇವಾಲಯದಲ್ಲಿ ದೇವರುಗಳಿಗೆ ವಿಶೇಷ ಪೂಜೆ ನೆರವೇರಿಸಿದ ನಂತರ ಮಧ್ಯಾಹ್ನದ ವೇಳೆಗೆ ಶ್ರೀ ಕರಿಯಮ್ಮ ಮತ್ತು ಶ್ರೀ ಪ್ಲೇಗಿನಮ್ಮ ದೇವಿಯನ್ನು ಜಾನಪದ ಕಲಾತಂಡಗಳ ಮೆರವಣಿಗೆ ಮೂಲಕ ರಥೋತ್ಸವದ ತೇರನ್ನು ಭಕ್ತಾದಿಗಳು ಎಳೆದರು.

ರಥೋತ್ಸವದಲ್ಲಿ ಭಾಗಿಯಾಗಿದ್ದ ಭಕ್ತಾದಿಗಳಿಗೆ ಮತ್ತು ಸಾರ್ವಜನಿಕರಿಗೆ ಅನ್ನ ಸಂತರ್ಪಣೆ ಕಾರ್ಯ ಹಮ್ಮಿಕೊಳ್ಳಲಾಗಿತ್ತು.

ಸುಮಾರು ಐದು ದಿನಗಳ ಕಾಲ ಶ್ರೀ ದೇವರುಗಳಿಗೆ ವಿಶೇಷ ಹೂವಿನ ಅಲಂಕಾರದೊಂದಿಗೆ,ಮದವಣಗಿತ್ತಿ ಕಾರ್ಯಕ್ರಮ, ಮದ್ದಿನ ಪ್ರದರ್ಶನ, ಶ್ರೀ ದೇವರುಗಳ ಉತ್ಸವ ಮತ್ತು ರಸಮಂಜರಿ (ಆರ್ಕೆಸ್ಟ್ರಾ) ಕಾರ್ಯಕ್ರಮಕ್ಕೆ ಭಕ್ತಾದಿಗಳು, ಗ್ರಾಮಸ್ಥರು ಹಾಗೂ ಸುತ್ತಮುತ್ತಲ ಸಾರ್ವಜನಿಕರು ಸಾಕ್ಷಿಯಾದರು.

ವೈಜ್ಞಾನಿಕತೆ ಎಷ್ಟೇ ಪ್ರಗತಿ ಹೊಂದಿದರೂ, ಸಹ ಸಾಂಸ್ಕೃತಿಕ ಹಾಗೂ ಆಧ್ಯಾತ್ಮಿಕ ವಿಚಾರಗಳು ಪ್ರತಿಯೊಬ್ಬರ ಮನಸ್ಸಿನ ನೆಮ್ಮದಿಯನ್ನು ಹೆಚ್ಚಿಸುತ್ತವೆ. ಈ ನಿಟ್ಟಿನಲ್ಲಿ ಇಂತಹ ರಥೋತ್ಸವ, ಜಾತ್ರೆಯಂತಹ ಕಾರ್ಯಕ್ರಮಗಳು ಮೈಲುಗಲ್ಲುಗಳಾಗಿ ಉಳಿಯುತ್ತವೆ.

ಸುಮಾರು ಐದು ದಿನಗಳ ಕಾಲ ಶ್ರೀ ದೇವರುಗಳಿಗೆ ವಿಶೇಷ ಹೂವಿನ ಅಲಂಕಾರದೊಂದಿಗೆ,ಮದವಣಗಿತ್ತಿ ಕಾರ್ಯಕ್ರಮ, ಮದ್ದಿನ ಪ್ರದರ್ಶನ, ಶ್ರೀ ದೇವರುಗಳ ಉತ್ಸವ ಮತ್ತು ರಸಮಂಜರಿ (ಆರ್ಕೆಸ್ಟ್ರಾ) ಕಾರ್ಯಕ್ರಮಕ್ಕೆ ಭಕ್ತಾದಿಗಳು, ಗ್ರಾಮಸ್ಥರು ಹಾಗೂ ಸುತ್ತಮುತ್ತಲ ಸಾರ್ವಜನಿಕರು ಸಾಕ್ಷಿಯಾದರು.

ವೈಜ್ಞಾನಿಕತೆ ಎಷ್ಟೇ ಪ್ರಗತಿ ಹೊಂದಿದರೂ, ಸಹ ಸಾಂಸ್ಕೃತಿಕ ಹಾಗೂ ಆಧ್ಯಾತ್ಮಿಕ ವಿಚಾರಗಳು ಪ್ರತಿಯೊಬ್ಬರ ಮನಸ್ಸಿನ ನೆಮ್ಮದಿಯನ್ನು ಹೆಚ್ಚಿಸುತ್ತವೆ.

# ಸರ್ಕಾರಿ ಆಸ್ಪತ್ರೆ ರೋಗಿಗಳಿಗೆ ಹಣ್ಣು– ಹಂಪಲು ವಿತರಣೆ

ದೇವನಹಳ್ಳಿ

"ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಸಮಗ್ರ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರದಿಂದ ಶೀಘ್ರದಲ್ಲೇ ಅನುದಾನ ಬಿಡುಗಡೆಯಾಗಲಿದೆ," ಎಂದು ಬಯಪ ಅಧ್ಯಕ್ಷ ದ್ಯಾವರಹಳ್ಳಿ ವಿ. ಶಾಂತಕುಮಾರ್ ತಿಳಿಸಿದರು.



ಪಟ್ಟಣದ ವಿಜಯಪುರ ರಸ್ತೆಯಲ್ಲಿರುವ ತಾಲೂಕು ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ರೋಗಿಗಳಿಗೆ ಹಣ್ಣು–ಹಂಪಲು ವಿತರಿಸಿ ಅವರು ಮಾತನಾಡಿದರು.

ಬಯಪ ಕಾಯಕಲ್ಪದ ಕುರಿತು ಮಾಹಿತಿ ನೀಡಿದ ಅವರು, "ಪ್ರಾಧಿಕಾರಕ್ಕೆ ಈವರೆಗೆ ಸ್ವಂತ ಕಟ್ಟಡವಿರಲಿಲ್ಲ. ಸದಸ್ಯರು ಹಾಗೂ ಅಧಿಕಾರಿಗಳ ಸಹಕಾರದಿಂದ ಸುಸಜ್ಜಿತ ಕಟ್ಟಡ ನಿರ್ಮಿಸಲಾಗಿದೆ. ಅಭಿವೃದ್ಧಿ ಕಾರ್ಯಗಳಿಗಾಗಿ ಸರ್ಕಾರಕ್ಕೆ ಮನವರಿಕೆ ಮಾಡಿಕೊಟ್ಟಿದ್ದು, ಅತಿ ಶೀಘ್ರದಲ್ಲಿ ಅನುದಾನ ಹರಿಯಲಿದೆ. ಇದರಲ್ಲಿ 85 ಕೋಟಿ ರೂ. ಮೊತ್ತವನ್ನು ರಸ್ತೆ ಕಾಮಗಾರಿಗಳಿಗೆ ಹಾಗೂ ಅಂತರ್ಜಲ ವೃದ್ಧಿಗಾಗಿ ಕೆರೆಗಳ ಅಭಿವೃದ್ಧಿಗೆ 105 ಕೋಟಿ ರೂ. ಮೀಸಲಿಡಲಾಗಿದೆ. ದೇವನಹಳ್ಳಿ ಕ್ರೀಡಾಂಗಣಕ್ಕೆ 7 ಕೋಟಿ ರೂ. ನೀಡಲಾಗುವುದು," ಎಂದರು.

ಆಸ್ಪತ್ರೆಯ ವೈದ್ಯರನ್ನುದ್ದೇಶಿಸಿ ಮಾತನಾಡಿದ ಅವರು, "ರೋಗಿಗಳು ವೈದ್ಯರನ್ನು ದೇವರಂತೆ ಕಾಣುತ್ತಾರೆ. ವೈದ್ಯರು ರೋಗಿಗಳನ್ನು ನಿರ್ಲಕ್ಷಿಸದೆ ಕಾಯಾ ವಾಚಾ ಮನಸಾ ಸೇವೆ ಸಲ್ಲಿಸಬೇಕು. ಆಗಲೇ ಹಿರಿಯರು ಹೇಳಿದ 'ವೈದ್ಯೋ ನಾರಾಯಣ' ಎಂಬ ಮಾತಿಗೆ ಅರ್ಥ ಸಿಗುತ್ತದೆ," ಎಂದು ಕಿವಿಮಾತು ಹೇಳಿದರು.

ಬಯಪ ನಿರ್ದೇಶಕ ಸಿ. ಪ್ರಸನ್ನಕುಮಾರ್ ಮಾತನಾಡಿ, "ಶಾಂತಕುಮಾರ್ ಅವರು ಅಧಿಕಾರಕ್ಕೆ ಬರುವ ಮೊದಲಿನಿಂದಲೂ ತಮ್ಮ ಸ್ವಂತ ಗಳಿಕೆಯಲ್ಲಿ ಸಮಾಜ ಸೇವೆ ಮಾಡುತ್ತಾ ಬಂದಿದ್ದಾರೆ. ಕೋವಿಡ್ ಸಮಯದಲ್ಲಿ ರೈತರಿಂದ ತರಕಾರಿ ಖರೀದಿಸಿ ಬಡವರಿಗೆ ಹಂಚಿದವರು. ಅಧಿಕಾರವಿರಲಿ ಇಲ್ಲದಿರಲಿ ಜನರೊಂದಿಗೆ ಬೆರೆಯುವ ಸರಳ ವ್ಯಕ್ತಿತ್ವ ಅವರದು," ಎಂದು ಪ್ರಶಂಸಿಸಿದರು.

ದೇವನಹಳ್ಳಿ ಪುರಸಭೆ ವ್ಯಾಪ್ತಿಯಲ್ಲಿ ಅಭಿವೃದ್ಧಿ ಯೋಜನೆಗಳನ್ನು ರೂಪಿಸಲು ಸ್ಥಳೀಯ ಮುಖಂಡರಿಗೆ ಈಗಾಗಲೇ ಸೂಚನೆ ನೀಡಲಾಗಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ತಾಲೂಕು ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಸಿ. ಜಗನಾಥ್, ಬಯಪ ನಿರ್ದೇಶಕ ನಾಗೇಗೌಡ, ಪ್ರಮುಖರಾದ ರವಿಚಂದ್ರ ಸೇರಿದಂತೆ ಹಲವಾರು ಮುಖಂಡರು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು.

# ಶಾಸಕರ ವಿರುದ್ಧದ ಪ್ರತಿಭಟನೆಗೆ ರಾಜಕೀಯ ಪ್ರೇರಣೆ: ಶ್ರೀನಿವಾಸ್

ಕೋಲಾರ



"ಬಾಬು ಜಗಜೀವನ ರಾಮ್ ಅವರ 119ನೇ ಜಯಂತಿ ಕಾರ್ಯಕ್ರಮದ ವೇಳೆ ಶಾಸಕ ಕೊತ್ತೂರು ಮಂಜುನಾಥ್ ವಿರುದ್ಧ ಮಾದಿಗ ಸಮಾಜದ ಕೆಲವು ಮುಖಂಡರು ನಡೆಸಿರುವ ಪ್ರತಿಭಟನೆ ವಿನಾಕಾರಣವಾದುದು. ಶಾಸಕರ ಅಭಿವೃದ್ಧಿ ಕೆಲಸಗಳನ್ನು ಸಹಿಸದವರು ಉದ್ದೇಶಪೂರ್ವಕವಾಗಿ ಈ ಗಲಾಟೆ ಮಾಡಿದ್ದಾರೆ" ಎಂದು ಕಾಂಗ್ರೆಸ್ ಹಾಗೂ ಮಾದಿಗ ಸಮಾಜದ ಯುವ ಮುಖಂಡ ರಾಜಕಲ್ಲಹಳ್ಳಿ ಶ್ರೀನಿವಾಸ್ ಕಿಡಿಕಾರಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಘಟನೆಯ ಕುರಿತು ತಮ್ಮ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲಾಡಳಿತದ ವತಿಯಿಂದ ಬೆಳಿಗ್ಗೆ 10 ಗಂಟೆಗೆ ನಗರದ ಬಂಗಾರಪೇಟೆ ವೃತ್ತದಲ್ಲಿ ಸ್ತಬ್ಧಚಿತ್ರ ಹಾಗೂ ಪಲ್ಲಕ್ಕಿ ಮೆರವಣಿಗೆಗೆ ಚಾಲನೆ ನೀಡುವ ಕಾರ್ಯಕ್ರಮ ನಿಗದಿಯಾಗಿತ್ತು. ಅದರಂತೆ ಶಾಸಕ ಕೊತ್ತೂರು ಮಂಜುನಾಥ್, ವಿಧಾನ ಪರಿಷತ್ ಸದಸ್ಯ ಅನಿಲ್ ಕುಮಾರ್, ಜಿಲ್ಲಾಧಿಕಾರಿ ಎಂ.ಆರ್. ರವಿ ಹಾಗೂ ಜಿಪಂ ಸಿಇಒ ಪ್ರವೀಣ್ ಬಾಗೇವಾಡಿ ಸೇರಿದಂತೆ ಅಧಿಕಾರಿಗಳು ಸಕಾಲಕ್ಕೆ ಭಾಗವಹಿಸಿದ್ದರು. ಹೀಗಿದ್ದರೂ ಯಾವ ನೈತಿಕತೆ ಇಟ್ಟುಕೊಂಡು ಶಾಸಕರ ವಿರುದ್ಧ ಘೋಷಣೆ ಕೂಗಿದ್ದಾರೆ ಎಂದು ಅವರು ಪ್ರಶ್ನಿಸಿದರು.

"ಮಾದಿಗ ಸಮಾಜದ ಅನೇಕರಿಗೆ ಕಾಂಗ್ರೆಸ್ ಪಕ್ಷದಲ್ಲಿ ಸೂಕ್ತ ಹುದ್ದೆಗಳನ್ನು ನೀಡಲಾಗಿದೆ. ಇದನ್ನು ಸಹಿಸದ ಕೆಲವು ಮುಖಂಡರು ರಾಜಕೀಯ ಕಾರಣಗಳಿಗಾಗಿ ಶಾಸಕರ ವಿರುದ್ಧ ಸುಳ್ಳು ಆರೋಪ ಮಾಡುತ್ತಿದ್ದಾರೆ. ಜೆಡಿಎಸ್ ಹಾಗೂ ಬಿಜೆಪಿಯ ಯಾವೊಬ್ಬ ಜನಪ್ರತಿನಿಧಿಯೂ ಮೆರವಣಿಗೆಯಲ್ಲಾಗಲಿ ಅಥವಾ ವೇದಿಕೆ ಕಾರ್ಯಕ್ರಮದಲ್ಲಾಗಲಿ ಭಾಗವಹಿಸಿಲ್ಲ. ಈ ಬಗ್ಗೆ ಪ್ರಶ್ನಿಸದ ಮುಖಂಡರು, ಕೇವಲ ಶಾಸಕರನ್ನು ಗುರಿ ಮಾಡುತ್ತಿರುವುದು ಸರಿಯಲ್ಲ," ಎಂದು ಶ್ರೀನಿವಾಸ್ ಆಕ್ಷೇಪ ವ್ಯಕ್ತಪಡಿಸಿದರು.

ಯಾರನ್ನೋ ಮೆಚ್ಚಿಸಲು ಅಥವಾ ಬಿಟ್ಟಿ ಪ್ರಚಾರ ಪಡೆಯಲು ಶಾಸಕರ ವಿರುದ್ಧ ದಿಕ್ಕಾರ ಕೂಗುವ ಸಂಸ್ಕೃತಿ ಬಿಡಬೇಕು. ಸಾಧ್ಯವಾದರೆ ಶಾಸಕರ ಅಭಿವೃದ್ಧಿ ಕೆಲಸಗಳಿಗೆ ಕೈಜೋಡಿಸಬೇಕು ಎಂದು ಎಚ್ಚರಿಕೆ ನೀಡಿದ ಅವರು, ಸಮುದಾಯದ ಹೆಸರಿನಲ್ಲಿ ರಾಜಕೀಯ ಮಾಡುವುದನ್ನು ನಿಲ್ಲಿಸಬೇಕೆಂದು ಮನವಿ ಮಾಡಿದರು.

# ಸುವರ್ಣ ಕರಗ ಮಹೋತ್ಸವದ ಸಂಭ್ರಮದಲ್ಲಿ 'ಕೆಂಗೇರಿ' ಇತಿಹಾಸದ ಕೃತಿ ಬಿಡುಗಡೆ

ಕೆಂಗೇರಿ

"ಕೆಂಗೇರಿಯ ಸಾಂಸ್ಕೃತಿಕ ವೈಭವವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವಲ್ಲಿ ಸಂಶೋಧನಾತ್ಮಕ ಕೃತಿಗಳು ಮಹತ್ವದ ಪಾತ್ರವಹಿಸುತ್ತವೆ" ಎಂದು ಸುತ್ತೂರು ಶ್ರೀಕ್ಷೇತ್ರದ ಶ್ರೀ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.



ಹಿರಿಯ ಇತಿಹಾಸ ಸಂಶೋಧಕ ಹಾಗೂ ಲೇಖಕ ಕೆಂಗೇರಿ ಚಕ್ರಪಾಣಿ ಅವರು ರಚಿಸಿರುವ 'ಕೆಂಗೇರಿ ಸಂಪ್ರದಾಯ ಸಂಸ್ಕೃತಿ ಸಾಧನೆಗಳ ಸಂಗಮ' ಎಂಬ ಕೃತಿಯನ್ನು ಕೆಂಗೇರಿಯ ಎಲ್ಲಮ್ಮ ದೇವಿಯ ಕರಗ ಮಹೋತ್ಸವದ ಸುವರ್ಣ ಸಂಭ್ರಮದ ಆರಂಭೋತ್ಸವದ ಸಂದರ್ಭದಲ್ಲಿ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಕೆಂಗೇರಿಯ ಸಾಂಸ್ಕೃತಿಕ ಪರಂಪರೆ, ಇತಿಹಾಸ ಮತ್ತು ಸಾಧನೆಗಳನ್ನು ಈ ಕೃತಿಯು ಒಳಗೊಂಡಿದೆ. ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಕಾಗಿನೆಲೆ ಸಂಸ್ಥಾನದ ಪೂಜ್ಯ ನಿರಂಜನಾನಂದ ಮಹಾಸ್ವಾಮಿಜಿ ಸೇರಿದಂತೆ ಹಲವು ಗಣ್ಯರು ಹಾಗೂ ಭಕ್ತಾಧಿಗಳು ಕೃತಿಯ ಆಳ ಮತ್ತು ಇತಿಹಾಸದ ದಾಖಲೀಕರಣದ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿದರು. ಈ ಮಹತ್ವದ ಕೃತಿಯನ್ನು ಶ್ರೀ ಕೆಂಗೇರಿ ಯಲ್ಲಮ್ಮ ದೇವಿ ಭಕ್ತ ಮಂಡಳಿಯವರು ಪ್ರಕಟಿಸಿದ್ದಾರೆ. ಪುಸ್ತಕದ ಪ್ರಕಟಣೆಗೆ ಬೆನ್ನೆಲುಬಾಗಿ ನಿಂತ ಕೆ.ಆರ್. ಸತ್ಯನಾರಾಯಣ ಮತ್ತು ಮುನಿಆಂಜಿನಪ್ಪ ಹಾಗೂ ಬರವಣಿಗೆಗೆ ಮಾರ್ಗದರ್ಶನ ನೀಡಿದ ಟಿ.ಎಸ್. ಗೋಪಾಲ್ ಅವರಿಗೆ ಲೇಖಕ ಕೆಂಗೇರಿ ಚಕ್ರಪಾಣಿ ಅವರು ಕೃತಜ್ಞತೆಗಳನ್ನು ಸಲ್ಲಿಸಿದರು.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

09/04/2026

ಭಾರತ ಸಾರಥಿ
BHARATHA SARATHI



# ಸಮಾಜ ಸುಧಾರಣೆಯ ಹರಿಕಾರ ಬಾಬು ಜಗಜೀವನರಾಂ: ಮುಂಡ್ರಿಗಿ ನಾಗರಾಜ್

ಬಳ್ಳಾರಿ

ಬಾಬು ಜಗಜೀವನರಾಂ ಅವರು ಬುದ್ಧ, ಬಸವ, ಅಂಬೇಡ್ಕರರಂತೆ ಸಮಾಜ ಸುಧಾರಣೆಯ ಧೋರಣೆಗಳನ್ನು ಹೊಂದಿದ್ದರು ಎಂದು ಡಾ ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ (ಲಿಡ್ಕರ್)ದ ಅಧ್ಯಕ್ಷರಾದ ಮುಂಡ್ರಿಗಿ ನಾಗರಾಜ್ ಹೇಳಿದರು.

ಇಲ್ಲಿನ ಡಾ. ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಸೋಮವಾರ ವಿವಿಯ ಬಾಬು ಜಗಜೀವನರಾಂ ಸಂಶೋಧನಾ ಮತ್ತು ಅಧ್ಯಯನ ಕೇಂದ್ರ ಹಾಗೂ ಬೆಂಗಳೂರು ಸಮಾಜ ಕಲ್ಯಾಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಪ.ಜಾ/ ಪ.ಪಂ ಪಿಎಚ್.ಡಿ ವಿದ್ಯಾರ್ಥಿಗಳಿಗೆ ಮೂರು ದಿನಗಳ ಸಂಶೋಧನಾ ವಿಧಾನ ಕಾರ್ಯಾಗಾರವನ್ನು ಗಣ್ಯರು ಜ್ಯೋತಿ ಬೆಳಗಿಸಿ ಉದ್ಘಾಟಿಸಿದ ಬಳಿಕ ಮಾತನಾಡಿ, ಬಳ್ಳಾರಿ ಸುತ್ತಮುತ್ತಲಿನ ಪ್ರದೇಶಗಳಲ್ಲಿರುವ ಮೌಢ್ಯ ಆಚರಣೆಯ ಪದ್ಧತಿಗಳಾದ ದೇವದಾಸಿ, ಜಾತಿ ಪದ್ಧತಿ, ದಲಿತರಿಗೆ ದೇಗುಲ ಪ್ರವೇಶ ನಿರಾಕರಣೆಯಂತಹ ಹಲವಾರು ಅನಿಷ್ಟ ಪದ್ಧತಿಗಳ ವಿರುದ್ಧ ಹೋರಾಟ ನಡೆಸಿ ಅವುಗಳ ನಿರ್ಮೂಲನೆಗೆ ನಿರಂತರ ಹೋರಾಟ ಮಾಡಿದ್ದನ್ನು ಸ್ಮರಿಸಿದರು. ಸಂಶೋಧನಾ ವಿದ್ಯಾರ್ಥಿಗಳು ಬಾಬು ಜಗಜೀವನರಾಂ ಅವರ ಜೀವನ ಸಾಧನೆಯನ್ನು ಅಧ್ಯಯನ ಮಾಡಿ, ಅವರಲ್ಲಿದ್ದ ನಾಯಕತ್ವದ ಗುಣವನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಲಿಡ್ಕರ್ ಅಭಿವೃದ್ಧಿ ನಿಗಮವು ತನ್ನ ಅಧೀನಕ್ಕೆ ಒಳಪಡುವ ಉಪಜಾತಿಗಳ ಫಲಾನುಭವಿಗಳಿಗೆ, ಮಹಿಳೆಯರಿಗೆ ವಿಶೇಷ ತರಬೇತಿ ನೀಡುವುದು, ವಿವಿಧ ಕೌಶಲ್ಯಗಳ ತರಬೇತಿಗೆ ಬೆಂಗಳೂರು, ತಮಿಳುನಾಡು ಹಾಗೂ ಇಂಡೋನೇಷ್ಯಾ ದೇಶಕ್ಕೆ ಕಳಿಸಿ ಕೈಗಾರಿಕಾ ತರಬೇತಿ ಒದಗಿಸುತ್ತದೆ ಈ ಯೋಜನೆಗಳ ಪ್ರಯೋಜನ ಪಡೆದುಕೊಳ್ಳಿರಿ ಎಂದು ಸಲಹೆ ನೀಡಿದರು.

ರಾಜ್ಯ ಉನ್ನತ ಶಿಕ್ಷಣ ಇಲಾಖೆಯ ನಿವೃತ್ತ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯಾದ ಬಿ.ಎಚ್. ಅನಿಲಕುಮಾರ್ ದಿಕ್ಸೂಚಿ ಭಾಷಣದಲ್ಲಿ ಮಾತನಾಡಿ, ಸಂಶೋಧನೆಗೆ ಎಐ ಮತ್ತು ಮಷಿನ್ ಲರ್ನಿಂಗ್‌ನಂತಹ ಸಾಧನಗಳನ್ನು ಬಳಸುವ ಮೂಲಕ ಒಳ್ಳೆಯ ಫಲಿತಾಂಶವನ್ನು ಪಡೆಯಬಹುದು. ಯಾವುದೇ ಮಾದರಿಯ ಸಂಶೋಧನೆಗೆ ವಸ್ತುನಿಷ್ಠತೆ, ನಿರ್ದಿಷ್ಟ ಉದ್ದೇಶಗಳು ಹಾಗೂ ನೀತಿ ಸಂಹಿತೆ ಪಾಲಿಸಬೇಕು. ಸಂಶೋಧನೆಯಲ್ಲಿ ನೈಜವಾದ ದತ್ತಾಂಶಗಳು ಸಂಶೋಧನೆಯ ವಿಶ್ವಾಸಾರ್ಹತೆಯನ್ನು ಹೆಚ್ಚಿಸುತ್ತದೆ ಎಂದರು. ವಿವಿಯ ಕುಲಪತಿ ಪ್ರೊ ಎಂ ಮುನಿರಾಜು ಮಾತನಾಡಿ, ರಾಜ್ಯದ ಬಹುತೇಕ ವಿವಿಗಳಲ್ಲಿರುವ ಅಧ್ಯಯನ ಪೀಠಗಳು ಹೆಸರಿಗಷ್ಟೇ ಸೀಮಿತವಾಗಿವೆ. ಪೀಠಗಳು ಆಳವಾದ ಮತ್ತು ಸ್ಥೂಲವಾದ ಉತ್ಕೃಷ್ಟ ಸಂಶೋಧನೆಯನ್ನು ಹೊರ ತರಲು ಮುಂದಾಗಬೇಕು ಎಂದು ತಿಳಿಸಿದರು. ಬಾಬು ಜಗಜೀವನರಾಂ ಅವರ ಕುರಿತು ಅತ್ಯುತ್ತಮ ಸಂಶೋಧನಾ ಲೇಖನ ಮಂಡಿಸುವ ಸಂಶೋಧನಾ ವಿದ್ಯಾರ್ಥಿಗೆ ಪೀಠದ ವತಿಯಿಂದ 10 ಸಾವಿರ ರೂ ನಗದು ಬಹುಮಾನ ನೀಡುವುದಾಗಿ ಘೋಷಿಸಿದರು. ವಿವಿಯ ವ್ಯಾಪ್ತಿಗೆ ಒಳಪಡುವ ಗ್ರಾಮೀಣ ಶಾಲೆಗಳಿಗೆ ಮೂಲಭೂತ ಸೌಕರ್ಯವನ್ನು ಒದಗಿಸಲು ವರ್ಷಕ್ಕೆ ಒಂದು ಲಕ್ಷ ರೂ ವ್ಯಯಿಸಲು ಕಾರ್ಯಯೋಜನೆ ಸಿದ್ಧಪಡಿಸುವಂತೆ ಪೀಠದ ಸಂಯೋಜಕರಿಗೆ ಈ ಸಂದರ್ಭದಲ್ಲಿ ಸೂಚನೆ ನೀಡಿದರು.

ಕಾರ್ಯಾಗಾರದ ಸಂಯೋಜಕರಾದ ಡಾ. ತಿಪ್ಪೇಸ್ವಾಮಿ ಎಚ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮವನ್ನು ಡಾ ಸುಷ್ಮಾ ಜೋಗನ್ ನಿರೂಪಿಸಿದರು. ಡಾ ಸಂತೋಷ ಅತಿಥಿಗಳನ್ನು ಸ್ವಾಗತಿಸಿದರು. ಸಂಶೋಧನಾರ್ಥಿ ನರಸಿಂಹ ವಂದಿಸಿದರು.

ಪ.ಜಾ/ಪ.ಪಂ ಪಿಹೆಚ್‌ಡಿ ವಿದ್ಯಾರ್ಥಿಗಳಿಗೆ 3 ದಿನಗಳ ಸಂಶೋಧನಾ ವಿಧಾನ ಕಾರ್ಯಾಗಾರದಲ್ಲಿ 200ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗಿಯಾಗಲಿದ್ದಾರೆ. ಮೂರು ದಿನಗಳ ಕಾಲ ವಿವಿಧ ತಾಂತ್ರಿಕ ಗೋಷ್ಠಿಗಳು ನಡೆಯಲಿದ್ದು, ಸಂಶೋಧನಾ ಕ್ಷೇತ್ರದ ಪರಿಣಿತರು ಉಪನ್ಯಾಸ ನೀಡಲಿದ್ದಾರೆ. ವಿವಿಯ ಎಲ್ಲ ನಿಕಾಯದ ಡೀನರು, ಎಲ್ಲ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಬೋಧಕ ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಜರಿದ್ದರು.




# ಬಿಸಿಲ ಧಗೆ; ತಿರುಪತಿಗೆ ಭಕ್ತರ ಸಂಖ್ಯೆ ಕ್ಷೀಣ



ತಿರುಪತಿ

ವಿಶ್ವವಿಖ್ಯಾತ ತಿರುಪತಿ ತಿರುಮಲದಲ್ಲಿ ಭಕ್ತರ ಆಗಮನದ ಸಂಖ್ಯೆಯಲ್ಲಿ ಕ್ಷೀಣವಾಗಿದೆ ಎಂದು ಟಿಟಿಡಿ ಮೂಲಗಳು ತಿಳಿಸಿವೆ. ಬಿಸಿಲ ಧಗೆ ಮತ್ತು ಝಳ ಇರುವುದರಿಂದ ದೂರದೂರಿನಿಂದ ಬರುವ ಭಕ್ತರ ಸಂಖ್ಯೆಯಲ್ಲಿ ಕ್ಷೀಣತೆ ಉಂಟಾಗಿರಬಹುದು ಎಂದು ಹೇಳಲಾಗುತ್ತಿದೆ.

ಆದರೂ ತಿರುಪತಿ ತಿಮ್ಮಪ್ಪನ ಉಚಿತ ದರ್ಶನಕ್ಕಾಗಿ 07 ವಿಭಾಗಗಳಲ್ಲಿ ಭಕ್ತರು ಕಾಯುತ್ತಿದ್ದಾರೆ. ಸರ್ವದರ್ಶನಕ್ಕೆ 06 ಗಂಟೆಗಳ ಸಮಯ ಬೇಕಾಗುತ್ತದೆ. ರೂ. 300 ನ ಶೀಘ್ರದರ್ಶನಕ್ಕೆ 2–3 ಗಂಟೆಗಳ ಸಮಯ ಬೇಕಾಗುತ್ತದೆ. ಸರ್ವದರ್ಶನ ಟೋಕನ್ ಪಡೆದವರಿಗೆ 3– 4ಗಂಟೆಗಳ ಸಮಯ ಬೇಕಾಗುತ್ತದೆ. ನಿನ್ನೆ ದರ್ಶನ ಪಡೆದ ಭಕ್ತರ ಸಂಖ್ಯೆ 77,294 ಆಗಿದ್ದು, ನಿನ್ನೆ ತಲೆಯ ತೋಲೆ ಅರ್ಪಿಸಿದ ಭಕ್ತರ ಸಂಖ್ಯೆ 26,796 ಇದ್ದು ಹುಂಡಿಯಲ್ಲಿ ಬಂದ ಆದಾಯ ರೂ. 4.75 ಕೋಟಿ ಸಂಗ್ರಹವಾಗಿದೆ ಎಂದು ಟಿಟಿಡಿ ಮೂಲಗಳು ತಿಳಿಸಿವೆ.

# ಬಾಬು ಜಗಜೀವನರಾಂ ಆದರ್ಶ ಎಲ್ಲರಿಗೂ ಮಾದರಿ



ಕನಕಪುರ

ಭಾರತ ದೇಶದ ಸ್ವಾತಂತ್ರ್ಯ ಪೂರ್ವ ಮತ್ತು ಸ್ವಾತಂತ್ರ್ಯಾನಂತರದ ರಾಜಕಾರಣದಲ್ಲಿ ಡಾ. ಬಾಬು ಜಗಜೀವನರಾಮ್ ರವರು ಪ್ರಮುಖವಾದ ಪಾತ್ರವನ್ನು ವಹಿಸಿದ್ದರು ಎಂದು ತಹಶೀಲ್ದಾರ್ ಸಂಜಯ್ ತಿಳಿಸಿದರು,

ತಾಲೂಕು ಆಡಳಿತದ ವತಿಯಿಂದ ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಡಾ. ಬಾಬು ಜಗಜೀವನ್ ರಾಮ್ ಅವರ 119 ನೇ ಜನ್ಮ ದಿನೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಜಗಜೀವನ್ ರಾಮ್ ಪ್ರತಿಭೆಯ ಜೊತೆಗೆ ಸ್ಪಷ್ಟ ಗ್ರಹಿಕೆ, ಒಳನೋಟ, ತತ್ವಬದ್ಧತೆ, ನಿಷ್ಠೆಗಳನ್ನು ಉಳ್ಳವರಾಗಿದ್ದ ಬಾಬು ಜಗಜೀವನ ರಾಂ ತನ್ನ ಜನರ ಅಪಮಾನವನ್ನು ಕಾಲಾಂತರದಲ್ಲಿ ಶಾಶ್ವತವಾಗಿ ಪರಿಹರಿಸುವುದು ಹೇಗೆ ಎಂಬ ದಿಕ್ಕಿನಲ್ಲಿ ಚಿಂತಿಸಿ ಕ್ರಿಯಾಶೀಲರಾಗಿ ಅದನ್ನು ವೈಯಕ್ತಿಕ ಹೋರಾಟವನ್ನಾಗಿ ಮಾಡಿಕೊಳ್ಳದೆ, ತುಳಿತ ಕ್ಕೊಳಗಾದ ಸಮುದಾಯದ ಹೋರಾಟವನ್ನಾಗಿ ರೂಪಿಸಿದರು, ಬಾಬುಜೀ ರವರ ಜೀವನ ಶೈಲಿಯನ್ನು ಇಂದು ಪ್ರತಿಯೊಬ್ಬ ನಾಗರಿಕನೂ ಅಳವಡಿಸಿಕೊಂಡಾಗ ಮಾತ್ರ ಸಮಾಜದಲ್ಲಿ ತಾರತಮ್ಯ ನಿವಾರಣೆಯಾಗುತ್ತದೆ ಎಂದರು.

ತಾಲ್ಲೂಕು ಪಂಚಾಯಿತಿ ವ್ಯವಸ್ಥಾಪಕ ಮೋಹನ್ ಬಾಬು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಜಯಪ್ರಕಾಶ್, ಕಸಾಪ ಅಧ್ಯಕ್ಷ ಶಿವಲಿಂಗಯ್ಯ, ದಲಿತ ಸಂಘಟನೆಗಳ ಮುಖಂಡರು, ಸಾರ್ವಜನಿಕರು ಈ ವೇಳೆ ಉಪಸ್ಥಿತರಿದ್ದರು.

# ಜಿಲ್ಲಾ ಮಟ್ಟದ ಬೃಹತ್ ಜನತಾ ದರ್ಶನ



ತುಮಕೂರು

ಜಿಲ್ಲೆಯ ನಾಗರಿಕರಿಂದ ಅಹವಾಲುಗಳನ್ನು ಸ್ವೀಕರಿಸಿ, ಸಮಸ್ಯೆಗಳನ್ನು ಆಲಿಸಿ ಸಮಸ್ಯೆಗಳಿಗೆ ಪರಿಹಾರೋಪಾಯವನ್ನು ಒದಗಿಸಲು ಏಪ್ರಿಲ್ 8ರಂದು ಬೆಳಿಗ್ಗೆ 11 ಗಂಟೆಗೆ ತುಮಕೂರಿನ ನಗರ ಕೇಂದ್ರ ಗ್ರಂಥಾಲಯ ಸಭಾಂಗಣದಲ್ಲಿ ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ್ ಅವರ ಅಧ್ಯಕ್ಷತೆಯಲ್ಲಿ "ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮ"ವನ್ನು ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮಕ್ಕೆ ಸಕಲ ಸಿದ್ಧತೆಯನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಇದೇ 8ರಂದು ಬೆಳಿಗ್ಗೆ 11 ಗಂಟೆಗೆ ನಗರ ಕೇಂದ್ರ ಗ್ರಂಥಾಲಯ ಸಭಾಂಗಣದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಈ ಜಾಗದಲ್ಲಿ 10 ವಿವಿಧ ಪ್ರಮುಖ ಇಲಾಖೆಗಳ ಮಳಿಗೆಗಳನ್ನು ತೆರೆಯಲಾಗಿದ್ದು, ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಲಾಗುವುದು. ಅಲ್ಲದೆ, ಸಂಬಂಧಿಸಿದ ಇಲಾಖೆಯ ಮುಖ್ಯಸ್ಥರು ಸ್ಥಳದಲ್ಲಿ ಹಾಜರಿದ್ದು, ಸಾರ್ವಜನಿಕರ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ಕಾರ್ಯಕ್ರಮ ಇದಾಗಿದೆ ಎಂದು ತಿಳಿಸಿದ್ದಾರೆ.

ಕಾರ್ಯಕ್ರಮ ಸ್ಥಳದಲ್ಲಿ ನಿರ್ಮಿಸಲಾಗುವ ತಾತ್ಕಾಲಿಕ ಮಳಿಗೆಗಳಲ್ಲಿ ಐಪಿಜಿಆರ್‌ಎಸ್ ತಂತ್ರಾಂಶ ಒಳಗೊಂಡ ಡಾಟಾ ಎಂಟ್ರಿ, ಕಂಪ್ಯೂಟರ್ ವ್ಯವಸ್ಥೆ, ಇತ್ಯಾದಿ ಸೌಲಭ್ಯಗಳನ್ನು ಒದಗಿಸಲಾಗಿದ್ದು, ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಸಾರ್ವಜನಿಕರ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುವುದು. ಈ ಸಂಬಂಧ ಈಗಾಗಲೇ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಕಾರ್ಯಕ್ರಮ ರೂಪಿಸುವ ಸಂಬಂಧ ಆದೇಶವನ್ನು ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಈಗಾಗಲೇ ತುಮಕೂರು ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ತಾಲ್ಲೂಕು ಮಟ್ಟದ ಜನತಾ ದರ್ಶನ ಕಾರ್ಯಕ್ರಮವನ್ನು ಆಯೋಜಿಸಿ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರಗಳನ್ನು ನೀಡಲಾಗಿದೆ. ಅಲ್ಲದೆ, ಹಲವಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಜಟಿಲ ಸಮಸ್ಯೆಗಳಿಗೆ ಪರಿಹಾರಗಳನ್ನು ಕಂಡುಕೊಳ್ಳುವ ನಿಟ್ಟಿನಲ್ಲಿ ಸಾರ್ವಜನಿಕರ ಅಹವಾಲುಗಳಿಗೆ ಪರಿಹಾರವನ್ನು ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಜಿಲ್ಲಾದ್ಯಂತ ಆಗಮಿಸುವ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಎಲ್ಲಾ ಸೌಲಭ್ಯಗಳನ್ನು ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಒದಗಿಸಲು ಕ್ರಮವಹಿಸಲಾಗಿದೆ. ಸಾರ್ವಜನಿಕರಿಗೆ ಮಧ್ಯಾಹ್ನ ಊಟದ ವ್ಯವಸ್ಥೆ ಮಾಡಲಾಗಿದ್ದು, ಸಾರ್ವಜನಿಕರು ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮಕ್ಕೆ ಆಗಮಿಸುವಂತೆ ಅವರು ಮನವಿ ಮಾಡಿದ್ದಾರೆ.

ಜನಸ್ಪಂದನದಲ್ಲಿ ಅಹವಾಲುಗಳಿಗೆ ತಾರ್ಕಿಕ ಅಂತ್ಯ; ಅಧಿಕಾರಿಗಳಿಗೆ ಡಿ.ಸಿ. ಸೂಚನೆ :

ಕಾರ್ಯಕ್ರಮದ ದಿನದಂದು ಮೊದಲು ಎಲ್ಲಾ ಇಲಾಖೆಗಳ ಮುಖ್ಯಸ್ಥರು ಹಾಜರಿದ್ದು, ಎಲ್ಲಾ ಇಲಾಖೆಗಳ ಮುಖ್ಯಸ್ಥರು ಪರಸ್ಪರ ಸಹಕಾರದೊಂದಿಗೆ ಸಾರ್ವಜನಿಕರಿಂದ ಬಂದಂತಹ ಅಹವಾಲುಗಳಿಗೆ ತಾರ್ಕಿಕ ಅಂತ್ಯ ಸಿಗುವಂತೆ ಕೆಲಸ ನಿರ್ವಹಿಸಬೇಕು ಎಂದು ಸೂಚನೆ ನೀಡಿದ್ದಾರೆ.

ಎಲ್ಲಾ ತಾಲ್ಲೂಕುಗಳಿಂದ ಸುಮಾರು 2500 ಅರ್ಜಿಗಳು ಬಂದಿದ್ದು, ತಮ್ಮ ತಮ್ಮ ಇಲಾಖೆಗಳಿಗೆ ಸಂಬಂಧಿಸಿದ ಅರ್ಜಿಗಳನ್ನು ಪರಿಶೀಲಿಸಿ, ಸಮಸ್ಯೆಗಳಿಗೆ ಪರಿಹಾರ ಒದಗಿಸಬೇಕು. ಅಧಿಕಾರಿಗಳಿಗೆ ವಹಿಸಿದ ಜವಾಬ್ದಾರಿಯನ್ನು ಲೋಪವಿಲ್ಲದೆ ನಿರ್ವಹಿಸಬೇಕೆಂದು ಅವರು ಸೂಚಿಸಿದ್ದಾರೆ.

# ಜಿಬಿಎ ವ್ಯಾಪ್ತಿಯಲ್ಲಿ ಹೆಚ್‌ಪಿವಿ ಲಸಿಕಾ ಅಭಿಯಾನಕ್ಕೆ ಚಾಲನೆ



ಬೆಂಗಳೂರು

ಮಹಿಳೆಯರನ್ನು ಕಾಡುವ ಗರ್ಭಕಂಠ ಕ್ಯಾನ್ಸರ್ ತಡೆಗಟ್ಟುವ ನಿಟ್ಟಿನಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರವು ಮಹತ್ವದ ಹೆಜ್ಜೆ ಇಟ್ಟಿದ್ದು, ಅಭಿಯಾನದ ಆರಂಭಿಕ ಹಂತದಲ್ಲಿ ಇದುವರೆಗೆ 2,562 ಹೆಣ್ಣು ಮಕ್ಕಳಿಗೆ ಯಶಸ್ವಿಯಾಗಿ ಲಸಿಕೆ ನೀಡಲಾಗಿದೆ.

ಕ್ಯಾನ್ಸರ್ ತಡೆಗೆ ಲಸಿಕೆಯೇ ಮದ್ದು:

ವಿಶ್ವದಲ್ಲಿ ಮಹಿಳೆಯರಲ್ಲಿ ಕಾಣಿಸಿಕೊಳ್ಳುವ ಕ್ಯಾನ್ಸರ್‌ಗಳಲ್ಲಿ ಗರ್ಭಕಂಠ ಕ್ಯಾನ್ಸರ್ ಪ್ರಮುಖವಾಗಿದ್ದು, ಭಾರತವು ಈ ಪಟ್ಟಿಯಲ್ಲಿ ಎರಡನೇ ಸ್ಥಾನದಲ್ಲಿದೆ. 2022ರ ಅಂಕಿ–ಅಂಶಗಳ ಪ್ರಕಾರ ದೇಶದಲ್ಲಿ ಸುಮಾರು 79,103 ಪ್ರಕರಣಗಳು ವರದಿಯಾಗಿದ್ದು, 34,805 ಮಹಿಳೆಯರು ಬಲಿಯಾಗಿದ್ದಾರೆ. ಹ್ಯೂಮನ್ ಪ್ಯಾಪಿಲೋಮಾ ವೈರಸ್ ಸೋಂಕು ಈ ಕ್ಯಾನ್ಸರ್‌ಗೆ ಮುಖ್ಯ ಕಾರಣವಾಗಿದ್ದು, ವೈಯಕ್ತಿಕ ಸ್ವಚ್ಛತೆಯ ಕೊರತೆ ಮತ್ತು ಅಸುರಕ್ಷಿತ ಲೈಂಗಿಕ ಸಂಪರ್ಕದಿಂದ ಈ ವೈರಸ್ ಹರಡುತ್ತದೆ.

ಜಿಬಿಎ ವ್ಯಾಪ್ತಿಯಲ್ಲಿ ಬೃಹತ್ ಗುರಿ: ವಿಶ್ವ ಆರೋಗ್ಯ ಸಂಸ್ಥೆಯ 2030ರ ಗುರಿಯಂತೆ 14 ವರ್ಷದ ಒಳಗಿನ ಶೇ. 90ರಷ್ಟು ಹೆಣ್ಣು ಮಕ್ಕಳಿಗೆ ಲಸಿಕೆ ನೀಡಲು ನಿರ್ಧರಿಸಲಾಗಿದೆ. ಈ ಹಿನ್ನೆಲೆಯಲ್ಲಿ ಭಾರತ ಸರ್ಕಾರವು ಮಾರ್ಚ್ 26ರಿಂದ ಉಚಿತ ಲಸಿಕಾ ಅಭಿಯಾನ ಆರಂಭಿಸಿದೆ.

ಗುರಿ: ಜಿಬಿಎ ವ್ಯಾಪ್ತಿಯ 365 ವಾರ್ಡ್‌ಗಳಲ್ಲಿ ಸುಮಾರು 1,18,339 ಹೆಣ್ಣು ಮಕ್ಕಳಿಗೆ ಲಸಿಕೆ ನೀಡುವ ಗುರಿ ಇದೆ.

ಕೇಂದ್ರಗಳು: ಬೆಂಗಳೂರಿನ 145 ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ಲಸಿಕೆ ನೀಡಲಾಗುತ್ತಿದೆ. 14 ರಿಂದ 15 ವರ್ಷದ ಹೆಣ್ಣು ಮಕ್ಕಳಿಗೆ ಈ ಲಸಿಕಾಕರಣ ಅನ್ವಯಿಸುತ್ತದೆ.

ನೋಂದಣಿ ಹೇಗೆ? ಪೋಷಕರು U-WIN (https://uwin.mohfw.gov.in) ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಂಡು ಲಸಿಕಾ ಕೇಂದ್ರಗಳಿಗೆ ಭೇಟಿ ನೀಡಬಹುದು. ಲಸಿಕೆ ಪಡೆದ ನಂತರ ಡಿಜಿಟಲ್ ಇ–ಪ್ರಮಾಣಪತ್ರವನ್ನು ನೀಡಲಾಗುತ್ತದೆ. ಈಗಾಗಲೇ ಖಾಸಗಿ ಆಸ್ಪತ್ರೆಗಳಲ್ಲಿ ಲಸಿಕೆ ಪಡೆದಿರುವ ಮಕ್ಕಳಿಗೆ ಮರು ಲಸಿಕೆ ಅಗತ್ಯವಿರುವುದಿಲ್ಲ.

"ಭವಿಷ್ಯದ ಸದೃಢ ಸಮಾಜಕ್ಕಾಗಿ ಹೆಣ್ಣು ಮಕ್ಕಳಿಗೆ ಹೆಚ್.ಪಿ.ವಿ ಲಸಿಕೆ ಕೊಡಿಸಿ, ಕ್ಯಾನ್ಸರ್ ಮುಕ್ತ ಜೀವನಕ್ಕೆ ಸಹಕರಿಸಿ" ಎಂಬ ಸಂದೇಶದೊಂದಿಗೆ ಜಿಬಿಎ ಈ ಅಭಿಯಾನವನ್ನು ತೀವ್ರಗೊಳಿಸಿದೆ.

# 'ಮಳೆಗಾಲಕ್ಕೆ ಬೆಂಗಳೂರು ಪಶ್ಚಿಮ ಪಾಲಿಕೆ ಸನ್ನದ್ಧ'



ಬೆಂಗಳೂರು

"ಮುಂಬರುವ ಮಳೆಗಾಲದಲ್ಲಿ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ವಿಭಾಗ ಮಟ್ಟದಲ್ಲಿ ಎಲ್ಲಾ ಅಭಿಯಂತರರು ಸಮರ್ಪಕ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು," ಎಂದು ಬೆಂಗಳೂರು ಪಶ್ಚಿಮ ನಗರ ಪಾಲಿಕೆಯ ಆಯುಕ್ತರಾದ ಡಾ. ರಾಜೇಂದ್ರ ಕೆ.ವಿ. ಅಧಿಕಾರಿಗಳಿಗೆ ಸೂಚಿಸಿದರು.

ಮಂಗಳವಾರ ಪಾಲಿಕೆ ವ್ಯಾಪ್ತಿಯಲ್ಲಿ ಮಳೆಗಾಲದ ಸಿದ್ಧತೆಗಳು ಹಾಗೂ ವಿವಿಧ ಕಾಮಗಾರಿಗಳ ಪ್ರಗತಿ ಕುರಿತು ಕಾಮಗಾರಿ ಇಲಾಖೆಯ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಅವರು ಮಾತನಾಡಿದರು.

ಪಾಲಿಕೆ ವ್ಯಾಪ್ತಿಯಲ್ಲಿ ಮಳೆ ನೀರು ನಿಲ್ಲುವ ಸಂಭಾವ್ಯ ಸ್ಥಳಗಳನ್ನು ಮುಂಚಿತವಾಗಿ ಗುರುತಿಸಿ, ಅಲ್ಲಿ ತಕ್ಷಣದ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಆಯುಕ್ತರು ತಿಳಿಸಿದರು. ರಾಜಕಾಲುವೆ ಹಾಗೂ ಶೋಲ್ಡರ್ ಡ್ರೇನ್‌ಗಳ ಹೂಳೆತ್ತುವ ಕಾರ್ಯ ಮತ್ತು ಕಸ (ಡೆಬ್ರೀಸ್) ತೆರವುಗೊಳಿಸುವ ಕೆಲಸವನ್ನು ಸಮರೋಪಾದಿಯಲ್ಲಿ ನಡೆಸಲು ನಿರ್ದೇಶನ ನೀಡಿದರು.

ತುರ್ತು ಸಂದರ್ಭಗಳಲ್ಲಿ ಸಾರ್ವಜನಿಕರ ದೂರುಗಳಿಗೆ ಸ್ಪಂದಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರ ಮಟ್ಟದಲ್ಲಿ ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಲು ಸೂಚಿಸಲಾಯಿತು. ಅಧಿಕಾರಿಗಳ ನಡುವೆ ತ್ವರಿತ ಸಂವಹನಕ್ಕಾಗಿ ವಾಟ್ಸಾಪ್ ಗುಂಪುಗಳನ್ನು ರಚಿಸಿ, ಮಾಹಿತಿ ವಿನಿಮಯಕ್ಕೆ ವೇಗ ನೀಡಲು ತಿಳಿಸಿದರು.

ವಾಹನ ಸವಾರರ ಸುರಕ್ಷತೆಯ ದೃಷ್ಟಿಯಿಂದ ರಸ್ತೆಗಳಲ್ಲಿರುವ ಗುಂಡಿಗಳನ್ನು ತಕ್ಷಣವೇ ಮುಚ್ಚಲು ಕ್ರಮ ಕೈಗೊಳ್ಳಬೇಕು. ಇದರೊಂದಿಗೆ, ಅಪಾಯದ ಸಂದರ್ಭದಲ್ಲಿ ಜನರಿಗೆ ನೆರವಾಗಲು ಅಗತ್ಯವಿರುವ ಕಡೆ 'ಕಾಳಜಿ ಕೇಂದ್ರ'ಗಳನ್ನು ಸ್ಥಾಪಿಸಲು ಈಗಿನಿಂದಲೇ ಸ್ಥಳ ಗುರುತಿಸಿ ಸಿದ್ಧವಾಗಿರಲು ಅಧಿಕಾರಿಗಳಿಗೆ ಆದೇಶಿಸಿದರು.

ಪಾಲಿಕೆ ವ್ಯಾಪ್ತಿಯಲ್ಲಿ ನಗರದ ಸೌಂದರ್ಯಕ್ಕೆ ಧಕ್ಕೆ ತರುತ್ತಿರುವ ಅನಧಿಕೃತ ಫ್ಲೆಕ್ಸ್ ಬ್ಯಾನರ್‌ಗಳನ್ನು ತಕ್ಷಣವೇ ತೆರವುಗೊಳಿಸಲು ಕಾರ್ಯಪಾಲಕ ಅಭಿಯಂತರರಿಗೆ (ಇಇ) ಸೂಚಿಸಿದರು. ಅಲ್ಲದೆ, ಮಳೆಗಾಲದಲ್ಲಿ ಕತ್ತಲೆಯಿಂದ ಅಪಘಾತಗಳು ಸಂಭವಿಸದಂತೆ ಅಗತ್ಯವಿರುವ ಕಡೆ ಬೀದಿ ದೀಪಗಳನ್ನು ಸರಿಪಡಿಸಲು ವಿದ್ಯುತ್ ವಿಭಾಗಕ್ಕೆ ಸೂಚನೆ ನೀಡಿದರು.

ಸಭೆಯಲ್ಲಿ ಮುಖ್ಯ ಅಭಿಯಂತರರಾದ ಸ್ವಯಂಪ್ರಭ, ಬಸವರಾಜ್ ಕಬಾಡೆ, ಅಧೀಕ್ಷಕ ಅಭಿಯಂತರರು ಹಾಗೂ ವಿವಿಧ ವಿಭಾಗಗಳ ಕಾರ್ಯಪಾಲಕ ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು ಭಾಗವಹಿಸಿದ್ದರು.

# ನೈಋತ್ಯ ರೈಲ್ವೆ ರಕ್ಷಣಾ ಪಡೆಯಿಂದ ಭರ್ಜರಿ ಕಾರ್ಯಾಚರಣೆ



ಹುಬ್ಬಳ್ಳಿ

ಪ್ರಯಾಣಿಕರ ಸುರಕ್ಷತೆ ಮತ್ತು ರೈಲ್ವೆ ಆಸ್ತಿಯ ರಕ್ಷಣೆಯಲ್ಲಿ ದೃಢ ಬದ್ಧತೆ ಹೊಂದಿರುವ ನೈಋತ್ಯ ರೈಲ್ವೆ ರಕ್ಷಣಾ ಪಡೆಯು ಮಾರ್ಚ್ 2026ರ ತಿಂಗಳಿನಲ್ಲಿ ಹಲವಾರು ಶ್ಲಾಘನೀಯ ಸಾಧನೆಗಳನ್ನು ಮಾಡಿದೆ. ಕಳೆದುಹೋದ ಮಕ್ಕಳ ರಕ್ಷಣೆಯಿಂದ ಹಿಡಿದು ಮಾದಕ ವಸ್ತುಗಳ ಪತ್ತೆಯವರೆಗೆ ವಿವಿಧ ಕಾರ್ಯಾಚರಣೆಗಳ ಮೂಲಕ ಆರ್‌ಪಿಎಫ್ ಗಮನ ಸೆಳೆದಿದೆ.

ಈ ಕುರಿತು ಮಾಹಿತಿ ನೀಡಿರುವ ನೈಋತ್ಯ ರೈಲ್ವೆಯ ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಡಾ. ಮಂಜುನಾಥ್ ಕನಮಡಿ, ಮಾರ್ಚ್ ತಿಂಗಳ ಪ್ರಮುಖ ಕಾರ್ಯಾಚರಣೆಗಳ ವಿವರಗಳನ್ನು ನೀಡಿದ್ದಾರೆ.

ರೈಲ್ವೆ ನಿಲ್ದಾಣ ಅಥವಾ ರೈಲುಗಳಲ್ಲಿ ಕುಟುಂಬದಿಂದ ಬೇರ್ಪಟ್ಟಿದ್ದ ಹಾಗೂ ರಕ್ಷಣೆಯ ಅಗತ್ಯವಿದ್ದ 37 ಮಕ್ಕಳನ್ನು (22 ಹುಡುಗರು ಮತ್ತು 15 ಹುಡುಗಿಯರು) 'ನನ್ಹೆ ಫರಿಸ್ತೇ' ಕಾರ್ಯಾಚರಣೆಯಡಿ ರಕ್ಷಿಸಲಾಗಿದೆ. ರಕ್ಷಿಸಲ್ಪಟ್ಟ ಮಕ್ಕಳನ್ನು ಸುರಕ್ಷಿತವಾಗಿ ಅವರ ಪೋಷಕರಿಗೆ ಅಥವಾ ಎನ್‌ಜಿಒಗಳಿಗೆ ಹಸ್ತಾಂತರಿಸಲಾಗಿದೆ. ಇದಲ್ಲದೆ 'ಆಪರೇಷನ್ ಡಿಗ್ನಿಟಿ' ಅಡಿಯಲ್ಲಿ ಇಬ್ಬರು ವೃದ್ಧ ಮಹಿಳೆಯರನ್ನು ರಕ್ಷಿಸಿ ಸಾಂತ್ವನ ನೀಡಲಾಗಿದೆ.

ಮಾದಕ ವಸ್ತು ಹಾಗೂ ಮದ್ಯ ಪತ್ತೆ:

ಆಪರೇಷನ್ ನಾರ್ಕೋ: 21 ಪ್ರಕರಣಗಳನ್ನು ಪತ್ತೆಹಚ್ಚಿ 66.86 ಲಕ್ಷ ರೂ. ಮೌಲ್ಯದ 106.66 ಕೆಜಿ ಗಾಂಜಾವನ್ನು ವಶಪಡಿಸಿಕೊಳ್ಳಲಾಗಿದೆ. ಈ ಸಂಬಂಧ 11 ಮಂದಿಯನ್ನು ಬಂಧಿಸಲಾಗಿದೆ.

ಆಪರೇಷನ್ ಸತ್ರಾಕ್: ಅಕ್ರಮವಾಗಿ ಸಾಗಿಸುತ್ತಿದ್ದ ರೂ. 66,800 ಮೌಲ್ಯದ 163 ಮದ್ಯದ ಬಾಟಲಿಗಳನ್ನು ವಶಪಡಿಸಿಕೊಂಡು ಅಬಕಾರಿ ಇಲಾಖೆಗೆ ಒಪ್ಪಿಸಲಾಗಿದೆ.

ಟಿಕೆಟ್ ದಂಧೆಕೋರರ ವಿರುದ್ಧ 'ಉಪಲಬ್ದ್': ರೈಲು ಟಿಕೆಟ್‌ಗಳ ಕಪ್ಪು ಮಾರುಕಟ್ಟೆ ತಡೆಯಲು ಕರ್ನಾಟಕ ಮತ್ತು ಗೋವಾದಾದ್ಯಂತ ದಾಳಿ ನಡೆಸಿದ ಆರ್‌ಪಿಎಫ್, 28 ಟೌಟ್‌ಗಳನ್ನು (ದಲ್ಲಾಳಿಗಳನ್ನು) ಬಂಧಿಸಿದೆ. ಇವರಿಂದ ಒಟ್ಟು ರೂ. 17.95 ಲಕ್ಷ ಮೌಲ್ಯದ (ಬಳಸಿದ ಮತ್ತು ಲೈವ್) ಟಿಕೆಟ್‌ಗಳನ್ನು ಜಪ್ತಿ ಮಾಡಲಾಗಿದೆ.

ಪ್ರಯಾಣಿಕರ ವಸ್ತುಗಳ ಹಸ್ತಾಂತರ: ಪ್ರಯಾಣದ ವೇಳೆ ಪ್ರಯಾಣಿಕರು ಮರೆತು ಬಿಟ್ಟಿದ್ದ ಅಥವಾ ಕಳೆದುಕೊಂಡಿದ್ದ ಲ್ಯಾಪ್‌ಟಾಪ್, ಮೊಬೈಲ್ ಹಾಗೂ ಚಿನ್ನಾಭರಣ ಸೇರಿದಂತೆ ಒಟ್ಟು 50.42 ಲಕ್ಷ ಮೌಲ್ಯದ ವೈಯಕ್ತಿಕ ವಸ್ತುಗಳನ್ನು ವಶಪಡಿಸಿಕೊಂಡು ವಾರಸುದಾರರಿಗೆ ಹಿಂದಿರುಗಿಸುವ ಮೂಲಕ ಪ್ರಾಮಾಣಿಕತೆ ಮೆರೆದಿದ್ದಾರೆ.

ಮಹಿಳಾ ಸುರಕ್ಷತೆಗೆ 'ಮೇರಿ ಸಹೇಲಿ': ಒಂಟಿಯಾಗಿ ಪ್ರಯಾಣಿಸುವ ಮಹಿಳೆಯರ ಸುರಕ್ಷತೆಗಾಗಿ ಜಾರಿಯಲ್ಲಿರುವ 'ಮೇರಿ ಸಹೇಲಿ' ಉಪಕ್ರಮದಡಿ 32 ರೈಲುಗಳಲ್ಲಿ ವಿಶೇಷ ನಿಗಾ ವಹಿಸಲಾಗಿದೆ. ಮಹಿಳಾ ಪ್ರಯಾಣಿಕರ ಸೀಟು ಸಂಖ್ಯೆಗಳನ್ನು ನಿಲ್ದಾಣದ ತಂಡಗಳೊಂದಿಗೆ ಹಂಚಿಕೊಂಡು ಅವರ ನಿರಂತರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲಾಗುತ್ತಿದೆ.

ರೈಲ್ವೆ ರಕ್ಷಣಾ ಪಡೆಯ ಈ ದಣಿವರಿಯದ ಸೇವೆಯನ್ನು ನೈಋತ್ಯ ರೈಲ್ವೆಯ ಹೆಚ್ಚುವರಿ ಜನರಲ್ ಮ್ಯಾನೇಜರ್ ಪಿ. ಅನಂತ್ ಅವರು ಶ್ಲಾಘಿಸಿದ್ದಾರೆ. ರೈಲ್ವೆ ಆಸ್ತಿ ಕಳ್ಳತನಕ್ಕೆ ಸಂಬಂಧಿಸಿದಂತೆ 14 ಪ್ರಕರಣಗಳನ್ನು ದಾಖಲಿಸಿ 18 ಆರೋಪಿಗಳನ್ನು ಬಂಧಿಸಿರುವುದು ಪಡೆಯ ಜಾಗರೂಕತೆಗೆ ಸಾಕ್ಷಿಯಾಗಿದೆ.

# ಜನಗಣತಿ ತರಬೇತಿ ಶಿಬಿರಕ್ಕೆ ಆಯುಕ್ತ ಕೆ.ಎನ್. ರಮೇಶ್ ಭೇಟಿ



ಬೆಂಗಳೂರು

"ದೇಶದ ಭವಿಷ್ಯದ ಯೋಜನೆಗಳ ರೂಪಿಸುವಿಕೆಗೆ ಜನಗಣತಿಯು ಬುನಾದಿಯಾಗಿದೆ. ನಿಖರ ಮಾಹಿತಿ ಸಂಗ್ರಹಣೆಗಾಗಿ ಸಾರ್ವಜನಿಕರು ಆನ್‌ಲೈನ್ ಮೂಲಕ ಸ್ವಯಂ ಗಣತಿ ಮಾಡಿಕೊಳ್ಳುವುದನ್ನು ಉತ್ತೇಜಿಸಬೇಕು," ಎಂದು ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ಆಯುಕ್ತ ಹಾಗೂ ಪ್ರಧಾನ ಜನಗಣತಿ ಅಧಿಕಾರಿ ಕೆ.ಎನ್. ರಮೇಶ್ ತಿಳಿಸಿದರು.

ನಗರದ ಜೆ.ಪಿ. ನಗರದಲ್ಲಿರುವ ಆರ್.ವಿ. ಡೆಂಟಲ್ ಕಾಲೇಜಿನಲ್ಲಿ ನಡೆಯುತ್ತಿರುವ ಜನಗಣತಿ ತರಬೇತಿ ಶಿಬಿರಕ್ಕೆ ಮಂಗಳವಾರ ಭೇಟಿ ನೀಡಿದ ಅವರು, ಪ್ರಕ್ರಿಯೆಗಳನ್ನು ಪರಿಶೀಲಿಸಿದರು.

ತರಬೇತಿ ಕೇಂದ್ರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಆಯುಕ್ತರು ತಾವೇ ಸ್ವತಃ ಆನ್‌ಲೈನ್ ಪೋರ್ಟಲ್ ಮೂಲಕ 'ಸ್ವಯಂ ಜನಗಣತಿ' ಪ್ರಕ್ರಿಯೆಯಲ್ಲಿ ಪಾಲ್ಗೊಂಡು ತಮ್ಮ ವಿವರಗಳನ್ನು ನೋಂದಾಯಿಸಿಕೊಂಡರು. ಆಯುಕ್ತರ ಈ ನಡೆಯಿಂದ ಸ್ಫೂರ್ತಿ ಪಡೆದ ಅಲ್ಲಿ ನೆರೆದಿದ್ದ ಸುಮಾರು 100ಕ್ಕೂ ಹೆಚ್ಚು ಗಣತಿದಾರರು ಮತ್ತು ಮೇಲ್ವಿಚಾರಕರು ಏಕಕಾಲದಲ್ಲಿ ತಮ್ಮ ವಿವರಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಿದ್ದು ವಿಶೇಷವಾಗಿತ್ತು.

ವೇದಿಕೆಯ ಭಾಷಣಕ್ಕೆ ಸೀಮಿತವಾಗದ ಆಯುಕ್ತರು, ಪ್ರತಿಯೊಬ್ಬ ಗಣತಿದಾರರ ಬಳಿ ತೆರಳಿ ಅವರೊಂದಿಗೆ ಸಂವಾದ ನಡೆಸಿದರು. ಕ್ಷೇತ್ರಕಾರ್ಯದ ವೇಳೆ ಎದುರಾಗಬಹುದಾದ ತಾಂತ್ರಿಕ ಸವಾಲುಗಳು, ಮೊಬೈಲ್ ಆಪ್ ಬಳಕೆ, ದತ್ತಾಂಶದ ಸುರಕ್ಷತೆ ಹಾಗೂ ಮನೆಗಳ ಗುರುತಿಸುವಿಕೆಯಲ್ಲಿರುವ ಗೊಂದಲಗಳಿಗೆ ಸ್ಥಳದಲ್ಲೇ ಮಾರ್ಗದರ್ಶನ ನೀಡಿದರು.

"ಬೆಂಗಳೂರಿನಂತಹ ಮಹಾನಗರದಲ್ಲಿ ಪ್ರತಿ ಮನೆಯನ್ನು ತಲುಪುವುದು ಸವಾಲಿನ ಕೆಲಸ. ಆದರೆ ಪ್ರತಿಯೊಬ್ಬ ನಾಗರಿಕನ ಮಾಹಿತಿ ಸರಿಯಾಗಿ ದಾಖಲಾಗುವುದನ್ನು ಖಚಿತಪಡಿಸಿಕೊಳ್ಳುವುದು ನಿಮ್ಮ ಕರ್ತವ್ಯ. ಅಧಿಕಾರಿಗಳೇ ಮೊದಲು ಸ್ವಯಂ ಗಣತಿಯಲ್ಲಿ ಭಾಗವಹಿಸುವ ಮೂಲಕ ಸಾರ್ವಜನಿಕರಿಗೆ ಮಾದರಿಯಾಗಬೇಕು," ಎಂದು ಅವರು ಅಧಿಕಾರಿಗಳಿಗೆ ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ತರಬೇತಿ ಚಾರ್ಜ್ ಅಧಿಕಾರಿಯಾದ ಮನು ಗೌಡ ಸೇರಿದಂತೆ ಪಾಲಿಕೆಯ ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಡಿಜಿಟಲ್ ಜನಗಣತಿ: ಕೋಲಾರದಲ್ಲಿ ಎರಡನೇ ಹಂತದ ತರಬೇತಿಗೆ ಚಾಲನೆ

ಕೋಲಾರ

ಭಾರತ ಸರ್ಕಾರದ ಮಹತ್ವಾಕಾಂಕ್ಷೆಯ 2027ರ ಡಿಜಿಟಲ್ ಜನಗಣತಿಯನ್ನು ಜಿಲ್ಲೆಯಲ್ಲಿ ಯಶಸ್ವಿಗೊಳಿಸಲು ಜಿಲ್ಲಾಡಳಿತವು ಸನ್ನದ್ಧವಾಗಿದ್ದು, ಗಣತಿದಾರರಿಗೆ ಎರಡನೇ ಹಂತದ ತರಬೇತಿ ಕಾರ್ಯಕ್ರಮವನ್ನು ಏಪ್ರಿಲ್ 7ರಿಂದ ಆರಂಭಿಸಿದೆ.

ಈ ಕುರಿತು ಮಾಹಿತಿ ನೀಡಿದ ಅಪರ ಜಿಲ್ಲಾಧಿಕಾರಿ ಎಸ್.ಎಂ. ಮಂಗಳ ಅವರು, ಜಿಲ್ಲೆಯಲ್ಲಿ ಈಗಾಗಲೇ ಏಪ್ರಿಲ್ 1ರಿಂದ ಮನೆಗಣತಿ ಪ್ರಕ್ರಿಯೆ ಚಾಲನೆಯಲ್ಲಿದೆ. ಡಿಜಿಟಲ್ ರೂಪದಲ್ಲಿ ಮಾಹಿತಿ ಸಂಗ್ರಹಿಸುವ ಸಲುವಾಗಿ ಶಿಕ್ಷಕರು ಹಾಗೂ ಅಂಗನವಾಡಿ ಕಾರ್ಯಕರ್ತೆಯರ ನ್ನೊಳಗೊಂಡ ತಂಡಕ್ಕೆ ಆ್ಯಪ್ ಬಳಕೆ ಮತ್ತು ದತ್ತಾಂಶ ನಮೂದಿಸುವ ಬಗ್ಗೆ ತಾಂತ್ರಿಕ ತರಬೇತಿ ನೀಡಲಾಗುತ್ತಿದೆ ಎಂದು




ತಿಳಿಸಿದರು.

ತರಬೇತಿಯ ಪ್ರಮುಖಾಂಶಗಳು:

ಅವಧಿ: ಏಪ್ರಿಲ್ 7 ರಿಂದ ಏಪ್ರಿಲ್ 12 ರವರೆಗೆ ತರಬೇತಿ ನಡೆಯಲಿದೆ.

ಸಿಬ್ಬಂದಿ: ಜಿಲ್ಲೆಯಲ್ಲಿ ಒಟ್ಟು 2,861 ಗಣತಿದಾರರು ಹಾಗೂ 474 ಮೇಲ್ವಿಚಾರಕರನ್ನು ಈ ಕಾರ್ಯಕ್ಕೆ ನಿಯೋಜಿಸಲಾಗಿದೆ.

ವಿಷಯ: ಮನೆಗಳ ಪಟ್ಟಿ ಮಾಡುವುದು, 34–35 ಪ್ರಶ್ನೆಗಳಿಗೆ ಡಿಜಿಟಲ್ ಉತ್ತರ ದಾಖಲಿಸುವುದು ಮತ್ತು ಸಾರ್ವಜನಿಕರು ನೀಡುವ 'ಸೆನ್ಸಸ್ ಐಡಿ' ದೃಢೀಕರಿಸುವ ಬಗ್ಗೆ ತರಬೇತಿ ನೀಡಲಾಗುತ್ತಿದೆ.

ಸ್ವಯಂ ಗಣತಿಗೆ ಅವಕಾಶ: ಸಾರ್ವಜನಿಕರು www.selfcensus.gov.in ಪೋರ್ಟಲ್ ಮೂಲಕ ಏಪ್ರಿಲ್ 15ರವರೆಗೆ ಸ್ವಯಂ ಗಣತಿ ಮಾಡಿಕೊಳ್ಳಲು ಅವಕಾಶವಿದೆ. ಹೀಗೆ ಸ್ವಯಂ ಗಣತಿ ಪೂರೈಸಿದವರು ಪಡೆಯುವ 'ಸೆನ್ಸಸ್ ಐಡಿ'ಯನ್ನು ಏಪ್ರಿಲ್ 16ರ ನಂತರ ಮನೆಗೆ ಭೇಟಿ ನೀಡುವ ಗಣತಿದಾರರಿಗೆ ನೀಡಬಹುದು. ಇದರಿಂದ ಸಾರ್ವಜನಿಕರ ಸಮಯ ಉಳಿತಾಯವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಜಿಲ್ಲೆಯ ಬ್ಲಾಕ್‌ಗಳ ವಿವರ:

ಜಿಲ್ಲೆಯನ್ನು ಒಟ್ಟು 3,385 ಬ್ಲಾಕ್‌ಗಳಾಗಿ ವಿಂಗಡಿಸಲಾಗಿದೆ.

ಗ್ರಾಮೀಣ ಭಾಗ: 2,540 ಬ್ಲಾಕ್‌ಗಳು.

ನಗರ ಪ್ರದೇಶ: 808 ಬ್ಲಾಕ್‌ಗಳು.

ಪಟ್ಟಣ ಪಂಚಾಯಿತಿ: 37 ಬ್ಲಾಕ್‌ಗಳು.

ಪ್ರತಿ ಬ್ಲಾಕ್ ಅಂದಾಜು 180 ರಿಂದ 200 ಮನೆಗಳನ್ನು ಒಳಗೊಂಡಿರಲಿದ್ದು, ನಿಖರ ಮಾಹಿತಿ ಸಂಗ್ರಹಕ್ಕೆ ಹೆಚ್ಚಿನ ಒತ್ತು ನೀಡಲಾಗಿದೆ.

ಮಾಹಿತಿಯ ಗೌಪ್ಯತೆ: ಡಿಜಿಟಲ್ ಗಣತಿಯಲ್ಲಿ ದಾಖಲಾಗುವ ಪ್ರತಿಯೊಂದು ಮಾಹಿತಿಯೂ ಎನ್‌ಕ್ರಿಪ್ಟ್ ಮಾದರಿಯಲ್ಲಿದ್ದು, ಸಾರ್ವಜನಿಕರ ಖಾಸಗಿತನಕ್ಕೆ ಯಾವುದೇ ಧಕ್ಕೆ ಇರುವುದಿಲ್ಲ. ದೇಶದ ಅಭಿವೃದ್ಧಿ ಯೋಜನೆಗಳ ರೂಪಿಸುವಿಕೆಗೆ ಈ ಅಂಕಿ–ಅಂಶಗಳು ಅತ್ಯಗತ್ಯವಾಗಿದ್ದು, ಸಾರ್ವಜನಿಕರು ಗಣತಿದಾರರಿಗೆ ಸೂಕ್ತ ಮಾಹಿತಿ ನೀಡಿ ಸಹಕರಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಎಸ್.ಎಂ. ಮಂಗಳ ಮನವಿ ಮಾಡಿದ್ದಾರೆ.

ಭಾರತ ಸಾರಥಿ
BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಎತ್ತಿನಹೊಳೆ ಯೋಜನೆಗೆ ವೇಗ: ಭೂಸ್ವಾಧೀನ ಪರಿಹಾರ ತ್ವರಿತಗೊಳಿಸಲು ಡಿಸಿ ಸೂಚನೆ

ಚಿಕ್ಕಬಳ್ಳಾಪುರ

ಎತ್ತಿನಹೊಳೆ ಯೋಜನೆಯಡಿ ಜಿಲ್ಲೆಯಲ್ಲಿ ಭೂಸ್ವಾಧೀನ ಆಗಿರುವ ರೈತರಿಗೆ ಪರಿಹಾರ ಧನ ವಿತರಣೆ ಪ್ರಕ್ರಿಯೆಯು ತ್ವರಿತಗತಿಯಲ್ಲಿ ಆಗಬೇಕು. ಈ ಕಾರ್ಯವನ್ನು ಆದ್ಯತೆಯಾಗಿ ಪರಿಗಣಿಸಬೇಕು ಎಂದು ಜಿಲ್ಲಾಧಿಕಾರಿ ಜಿ.ಪ್ರಭು ಅವರು ತಿಳಿಸಿದರು.



ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಎತ್ತಿನಹೊಳೆ ಕುಡಿಯುವ ನೀರಿನ ಯೋಜನೆಯ ಭೂಸ್ವಾಧೀನ ಪ್ರಕ್ರಿಯೆಯ ಕಾರ್ಯಗಳ ಪ್ರಗತಿ ಪರಿಶೀಲನೆ ನಡೆಸಿ ಅವರು ಮಾತನಾಡಿ,

ಜಿಲ್ಲೆಗೆ ಶಾಶ್ವತ ಕುಡಿಯುವ ನೀರಿನ ಪೂರೈಕೆಗಾಗಿ ಸರ್ಕಾರ ಕೈಗೊಂಡಿರುವ ಎತ್ತಿನಹೊಳೆ ಮಹತ್ವಾಕಾಂಕ್ಷಿ ಯೋಜನೆಯ ಕಾಮಗಾರಿಗಳು ಜಿಲ್ಲೆಯಲ್ಲಿ ಭರದಿಂದ ಸಾಗುತ್ತಿವೆ. ಗೌರಿಬಿದನೂರು ಗುರುತ್ವ ಫೀಡರ್ ಪೈಪ್ ಲೈನ್ ಕಾಮಗಾರಿಯ ಎತ್ತಿನಹೊಳೆ ಮುಖ್ಯ ಗುರುತ್ವ ಕಾಲುವೆಯ ಸರಪಳಿ 257.57 ಕಿ.ಮೀ ನಲ್ಲಿ ಕವಲೊಡೆದು ಸು. 81.6 ಕಿ.ಮೀ ಉದ್ದದ ಪೈಪ್ ಲೈನ್ ಕಾಮಗಾರಿಗಳು ಭೌತಿಕವಾಗಿ ಪೂರ್ಣಗೊಂಡಿವೆ. ಈ ಕಾಮಗಾರಿಗಳು ಗೌರಿಬಿದನೂರು ತಾಲ್ಲೂಕಿನ 86 ಕೆರೆಗಳನ್ನು ತುಂಬಿಸಲು ಸಿದ್ಧವಿವೆ, ಮುಖ್ಯವಾಗಿ ಈ ಯೋಜನೆಯಡಿ ಗೌರಿಬಿದನೂರು ಫೀಡರ್ ನ 10 ಗ್ರಾಮಗಳ ವ್ಯಾಪ್ತಿಯಲ್ಲಿ ಪರಿಹಾರಕ್ಕೆ ಈಗಾಗಲೇ ಅವಾರ್ಡ್ ಆಗಿದ್ದು, ಹಣ ಪಾವತಿಸುವ ಹಂತದಲ್ಲಿದೆ. ಇನ್ನುಳಿದ 25 ಗ್ರಾಮಗಳ ವ್ಯಾಪ್ತಿಯಲ್ಲಿ ಅವಾರ್ಡ್ ನಿರ್ಧಾರದ ಪ್ರಕ್ರಿಯೆಯು ವೇಗವನ್ನು ಪಡೆಯಲು ಸಂಬಂಧಪಟ್ಟ ಯೋಜನಾ ಅಭಿಯಂತರರು ತುರ್ತು ಕ್ರಮ ಕೈಗೊಳ್ಳಬೇಕು. ಮುಂದುವರೆದು ಸದರಿ ಯೋಜನೆಯಡಿ ಶ್ರೀನಿವಾಸಪುರ ಗುರುತ್ವ ಪೈಪ್ ಲೈನ್ ಕಾಮಗಾರಿಯ ಸಂಬಂಧ ಭೂ ಸ್ವಾಧೀನ ಪ್ರಕ್ರಿಯೆಯ ಕಾರ್ಯಗಳನ್ನು ಚುರುಕುಗೊಳಿಸುವಂತೆ ಸೂಚನೆ ನೀಡಿದರು.

ಒಂದು ವರ್ಷದ ಒಳಗಡೆ ಎತ್ತಿನಹೊಳೆ ಯೋಜನೆಯಡಿ ಜಿಲ್ಲೆಗೆ ನೀರು ಲಭ್ಯವಾಗುವ ಸಾಧ್ಯತೆ ಇದೆ. ನೀರು ಲಭ್ಯವಾಗುವ ವೇಳೆಗೆ ಜಿಲ್ಲೆಯಲ್ಲಿ ಎತ್ತಿನಹೊಳೆ ಯೋಜನೆಯಡಿ ಪೂರ್ವಸಿದ್ದತಾ ಕಾಮಗಾರಿಗಳು ಪೂರ್ಣಗೊಂಡಿರಬೇಕು.ಈ ನಿಟ್ಟಿನಲ್ಲಿ ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರು ಹೆಚ್ಚಿನ ನಿಗಾವಹಿಸಿ ಕೆಲಸ ಮಾಡಬೇಕು. ಯಾವುದೇ ಹಂತದಲ್ಲೂ ಯೋಜನೆಯ ಅನುಷ್ಠಾನಕ್ಕೆ ವಿಳಂಬವಾಗದಂತೆ ಕ್ರಮ ವಹಿಸಬೇಕು. ಲಭ್ಯವಾಗಲಿರುವ ಕುಡಿಯುವ ನೀರನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳಲು ಸಕಲ ರೀತಿಯಲ್ಲಿ ಸನ್ನದ್ಧರಾಗಬೇಕು ಎಂದು ವಿಶ್ವೇಶ್ವರಯ್ಯ ಜಲ ನಿಗಮದ ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಪುರಸಭೆ ಆಡಳಿತ ವ್ಯವಸ್ಥೆ ಹಳಿತಪ್ಪಿದ್ದು, ಸರಿಪಡಿಸಿಕೊಳ್ಳುವಂತೆ ಆಗ್ರಹ

ವಿಜಯಪುರ



ಪಟ್ಟಣದ ಪುರಸಭೆಯಲ್ಲಿ, ಆಡಳಿತ ವ್ಯವಸ್ಥೆ ಹಳಿತಪ್ಪಿದ್ದು, ಸುಗಮ ಮಾರ್ಗಕ್ಕೆ ತರುವಲ್ಲಿ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ವಿಫಲರಾಗಿದ್ದಾರೆ ಎಂದು ಅಖಿಲ ಭಾರತ ಬಹುಜನ ಸಮಾಜಪಾರ್ಟಿ ರಾಜ್ಯ ಕಾರ್ಯದರ್ಶಿ ಎಂ.ನಾಗರಾಜ್ ಆರೋಪಿಸಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾರ್ಚ್ ತಿಂಗಳು ಕಳೆದು, ಹೊಸ ಆರ್ಥಿಕ ವರ್ಷ ಏಪ್ರಿಲ್ ತಿಂಗಳಲ್ಲಿ ಒಂದು ವಾರ ಕಳೆದರೂ, ಇದುವರೆಗೂ ಬಜೆಟ್ ಮಂಡನೆ ಮಾಡಿಲ್ಲ. 7 ಮಂದಿ ಜೆಡಿಎಸ್ ಸದಸ್ಯರು ಅನರ್ಹರಾಗಿದ್ದು, ಇವರ ಅನರ್ಹತೆಯನ್ನು ಪ್ರಶ್ನೆ ಮಾಡಿ, ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದಾರೆ. ಅವರಿಗೆ ನ್ಯಾಯಾಲಯದಿಂದ ತಡೆಯಾಜ್ಞೆ ಸಿಗಬೇಕು ನಂತರ ಬಜೆಟ್ ಮಂಡನೆ ಮಾಡೋಣವೆಂದು ಕಾಯುತ್ತಿದ್ದಾರೆ. ಅಧ್ಯಕ್ಷರು ಸಭೆ ಕರೆದರೂ ಸದಸ್ಯರು ಬಾರದ ಕಾರಣ, ಸಭಾಂಗಣಕ್ಕೂ ಹೋಗುತ್ತಿಲ್ಲ.

ಪುರಸಭೆಗೆ ಆದಾಯ ತರಬೇಕಾಗಿರುವ ಅಂಗಡಿ ಮಳಿಗೆಗಳನ್ನು ಮೂರು ಬಾರಿ ಹರಾಜು ಮಾಡಿದ್ದಾರೆ. ಪುರಸಭೆಯ ಇತಿಹಾಸದಲ್ಲಿ ಮೂರು ಬಾರಿ ಹರಾಜು ಪ್ರಕ್ರಿಯೆ ನಡೆಸಿರುವ ಇತಿಹಾಸವಿಲ್ಲ. ಹರಾಜಿನಲ್ಲಿ ಭಾಗವಹಿಸಿ ಬಿಡ್ ಮಾಡಿದರೂ, ನಮ್ಮ ಗುರಿಗೆ ತಕ್ಕಷ್ಟು ಬೆಲೆ ಸಿಗುತ್ತಿಲ್ಲವೆಂದು ಪುನಃ ಮರು ಹರಾಜಿಗೆ ಹವಣಿಸುತ್ತಿದ್ದಾರೆ. ಯಾರು ಹೆಚ್ಚು ಬಿಡ್ ಮಾಡಿದ್ದಾರೆ ಎಂದು ನೋಟೀಸ್ ಬೋರ್ಡ್ ನಲ್ಲಿ ಪ್ರದರ್ಶನ ಮಾಡುತ್ತಿಲ್ಲ. ಹೀಗೆ ಮುಂದುವರೆದರೆ, ಪುರಸಭೆಗೆ ಬರಬೇಕಾಗಿರುವ ಆದಾಯ ಕುಂಠಿತವಾಗಿ, ಅಭಿವೃದ್ಧಿಗೂ ತೊಡಕಾಗಲಿದೆ.

ಕಟ್ಟಿರುವ ಟ್ಯಾಕ್ಸ್ ಅಪ್ಡೇಟ್ ಮಾಡ್ತಿಲ್ಲ: ಸಾರ್ವಜನಿಕರು ತಮ್ಮ ಆಸ್ತಿಗಳಿಗೆ ಸಂಬಂಧಿಸಿದಂತೆ ಪುರಸಭೆಗೆ ಕಟ್ಟಿರುವ ತೆರಿಗೆಯನ್ನು ಅಪ್ಡೇಟ್ ಮಾಡಿಕೊಡದ ಕಾರಣ, ವಿನಾಕಾರಣ ಸುತ್ತಾಡಿಸುತ್ತಿದ್ದಾರೆ. ತೆರಿಗೆ ಕಟ್ಟಿರುವವರು, ರಸೀದಿಗಳನ್ನು ಇಟ್ಟುಕೊಳ್ಳದೇ ಹೋದರೆ, ಪುನಃ ಎರಡು ಪಟ್ಟು ತೆರಿಗೆ ಕಟ್ಟಬೇಕಾಗುತ್ತದೆ. ಆದ್ದರಿಂದ ಗ್ರಾಹಕರು, ತೆರಿಗೆ ಕಟ್ಟಿದ ಕೂಡಲೇ ಅಪ್ಡೇಟ್ ಮಾಡುವಂತಹ ವ್ಯವಸ್ಥೆ ಜಾರಿಯಾಗಬೇಕು.

ಬಾಬು ಜಗಜೀವನರಾಂ ಜಯಂತಿ ಕಡೆಗಣನೆಗೆ ಆಕ್ರೋಶ: ಪುರಸಭೆಯಲ್ಲಿ ಏ.5 ರಂದು ನಡೆದಿರುವ ಮಾಜಿ ಉಪಪ್ರಧಾನಿ ಡಾ.ಬಾಬು ಜಗಜೀವನ್ ರಾಮ್ ಅವರ 119 ನೇ ಜಯಂತಿ ಕಾರ್ಯಕ್ರಮಕ್ಕೆ ಪುರಸಭೆ ಅಧ್ಯಕ್ಷೆ ಸೇರಿದಂತೆ ಸದಸ್ಯರುಗಳು, ಹಾಜರಾಗದೇ ಅಪಮಾನವೆಸಗಿದ್ದಾರೆ. ಇಲ್ಲೂ ಜಾತಿ ತಾರತಮ್ಯವನ್ನು ತಂದಿದ್ದಾರೆ. ಎಲ್ಲಾ ಜಯಂತಿಯನ್ನು ಮುಂದೆ ನಿಂತು ಆಚರಣೆ ಮಾಡುವ ಅಧ್ಯಕ್ಷೆ ಹಾಗೂ ಸದಸ್ಯರುಗಳು, ಬಾಬೂಜಿ ಅವರ ಜಯಂತಿಯನ್ನು ಕಡೆಗಣಿಸಿದ್ದಾರೆ. ಸಮುದಾಯದ ಮುಖಂಡರಿಗೆ ಆಹ್ವಾನವನ್ನೂ ನೀಡಿಲ್ಲವೆಂದು ಆಕ್ರೋಶ ವ್ಯಕ್ತಪಡಿಸಿದರು.

ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ತಮ್ಮ ಕಾರ್ಯವೈಖರಿ ಸರಿಪಡಿಸಿಕೊಂಡು, ಜನಪರವಾದ ಕಾರ್ಯಕ್ರಮಗಳು ಮಾಡದಿದ್ದರೆ, ಪುರಸಭೆಗೆ ಮುತ್ತಿಗೆಹಾಕಿ ಪ್ರತಿಭಟನೆ ನಡೆಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

# ‘ಕ್ಯಾತಸಂದ್ರದ ಚಂದ್ರಮೌಳೇಶ್ವರ ದೇವಾಲಯ ಶಕ್ತಿಕೇಂದ್ರವಾಗಲಿ’



ತುಮಕೂರು

“ಕ್ಯಾತಸಂದ್ರದ ಶ್ರೀ ಚಂದ್ರಮೌಳೀಶ್ವರಸ್ವಾಮಿ ದೇವಾಲಯವು ಭಕ್ತರಲ್ಲಿ ಧಾರ್ಮಿಕ ಚೈತನ್ಯ ಹಾಗೂ ಭಗವದ್ ಭಕ್ತಿಯನ್ನು ಸದಾ ಜಾಗೃತಿಗೊಳಿಸುವ ಶಕ್ತಿಕೇಂದ್ರವಾಗಿ ಬೆಳಗಲಿ,” ಎಂದು ಶೃಂಗೇರಿ ಶಾರದಾ ಪೀಠಾಧಿಪತಿಗಳಾದ ಶ್ರೀ ವಿಧುಶೇಖರಭಾರತಿ ಮಹಾಸ್ವಾಮಿಗಳು ಆಶಿಸಿದರು.

ನಗರದ ಕ್ಯಾತಸಂದ್ರದಲ್ಲಿರುವ ಶ್ರೀ ಚಂದ್ರಮೌಳೀಶ್ವರಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದ ನಂತರ ಭಕ್ತಾದಿಗಳನ್ನು ಉದ್ದೇಶಿಸಿ ಅವರು ಅನುಗ್ರಹ ಭಾಷಣ ಮಾಡಿದರು.

ಶೃಂಗೇರಿ ಶಾರದಾಪೀಠಕ್ಕೂ ಈ ದೇವಾಲಯಕ್ಕೂ ದಶಕಗಳ ಅವಿನಾಭಾವ ಸಂಬಂಧವಿದೆ. ದಿವಂಗತ ಯೋಗಾನರಸಿಂಹಶಾಸ್ತ್ರೀಗಳ ಆಹ್ವಾನದಂತೆ ಈ ಹಿಂದೆ ಶೃಂಗೇರಿ ಜಗದ್ಗುರುಗಳಾದ ಶ್ರೀ ಅಭಿನವ ವಿದ್ಯಾತೀರ್ಥ ಮಹಾಸ್ವಾಮಿಗಳು ಹಾಗೂ ಶ್ರೀ ಭಾರತೀತೀರ್ಥ ಮಹಾಸ್ವಾಮಿಗಳು ಹಲವಾರು ಬಾರಿ ಇಲ್ಲಿಗೆ ಭೇಟಿ ನೀಡಿದ್ದನ್ನು ಶ್ರೀಗಳು ಸ್ಮರಿಸಿದರು. “ಅದರ ಮುಂದುವರಿದ ಭಾಗವಾಗಿ ತಾವೂ ಎರಡನೇ ಬಾರಿ ಇಲ್ಲಿಗೆ ಆಗಮಿಸಿದ್ದು, ಜನರಲ್ಲಿ ನಿರಂತರ ಧರ್ಮ ಜಾಗೃತಿಯಾಗಲಿ,” ಎಂದು ಹರಸಿದರು.

ಇದಕ್ಕೂ ಮೊದಲು ದೇವಾಲಯಕ್ಕೆ ಆಗಮಿಸಿದ ಶ್ರೀಗಳನ್ನು ಧರ್ಮದರ್ಶಿಗಳಾದ ಕೆ.ವೈ. ಲಕ್ಷ್ಮೀನರಸಿಂಹಶಾಸ್ತ್ರೀ ವಿದ್ವಾಂಸರಾದ ಕೆ.ವೈ. ಸುಬ್ರಹ್ಮಣ್ಯಶಾಸ್ತ್ರಿ, ಕೆ.ವೈ. ವಿಶ್ವನಾಥ್ ಮತ್ತು ಕುಟುಂಬದವರು ಪೂರ್ಣಕುಂಭದೊಂದಿಗೆ ಭವ್ಯವಾಗಿ ಸ್ವಾಗತಿಸಿದರು. ನಂತರ ಶ್ರೀಗಳ ಪಾದುಕಾಪೂಜೆ ನೆರವೇರಿಸಲಾಯಿತು.

ಜಗದ್ಗುರುಗಳು ದೇವಾಲಯದ ಶ್ರೀ ಚಂದ್ರಮೌಳೀಶ್ವರಸ್ವಾಮಿ, ಶ್ರೀ ಪಾರ್ವತಿ, ಶ್ರೀ ಲಕ್ಷ್ಮೀನರಸಿಂಹಸ್ವಾಮಿ, ಶ್ರೀ ಶಾರದಾಂಬ ಮತ್ತು ಶ್ರೀ ಶಂಕರಾಚಾರ್ಯರ ಮೂರ್ತಿಗಳಿಗೆ ವಿಶೇಷ ಪೂಜೆಗಳನ್ನು ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ನೂರಾರು ಭಕ್ತಾಧಿಗಳು ಪಾಲ್ಗೊಂಡು ಶ್ರೀಗಳ ದರ್ಶನ ಪಡೆದರು. ಪೂಜಾ ಕಾರ್ಯಕ್ರಮಗಳ ನಂತರ ಭಕ್ತಾಧಿಗಳಿಗೆ ಶ್ರೀಗಳು ಫಲ ಮಂತ್ರಾಕ್ಷತೆ ನೀಡಿ ಆಶೀರ್ವದಿಸಿದರು. ದೇವಾಲಯದಲ್ಲಿ ನಿರಂತರವಾಗಿ ಪೂಜೆ, ಉತ್ಸವಗಳು ನಡೆಯುತ್ತಿರಲಿ ಮತ್ತು ಎಲ್ಲರಿಗೂ ಶ್ರೇಯಸ್ಸು ಉಂಟಾಗಲಿ ಎಂದು ಜಗದ್ಗುರುಗಳು ಹಾರೈಸಿದರು.

# ‘ಅಯಾನ ಸೋಲಾರ್’ ಕಂಪನಿಯಿಂದ ಉಚಿತ ಆಂಬುಲೆನ್ಸ್ ಕೊಡುಗೆ

ಪಾವಗಡ

“ಗಡಿ ಭಾಗದ ಗ್ರಾಮೀಣ ಜನರ ಆರೋಗ್ಯ ಮತ್ತು ವಿದ್ಯಾರ್ಥಿಗಳ ಉನ್ನತ ವ್ಯಾಸಂಗಕ್ಕೆ ಅಯಾನ ರಿನೀವಬಲ್ ಪವರ್ ಸೋಲಾರ್ ಕಂಪನಿಯು ನೀಡುತ್ತಿರುವ ಪ್ರೋತ್ಸಾಹವು ದಾನಗಳಲ್ಲೇ ಶ್ರೇಷ್ಠವಾದುದು,” ಎಂದು ಶಾಸಕ ಹೆಚ್.ವಿ. ವೆಂಕಟೇಶ್ ಅಭಿಪ್ರಾಯಪಟ್ಟರು.

ತಾಲ್ಲೂಕಿನ ಗಡಿ ಗ್ರಾಮ ವೆಂಕಟಮ್ಮನಹಳ್ಳಿಯಲ್ಲಿ ಅಯಾನ ರಿನೀವಬಲ್ ಪವರ್ ಸೋಲಾರ್ ಕಂಪನಿ ವತಿಯಿಂದ ಸಾರ್ವಜನಿಕರ ಸೇವೆಗಾಗಿ ಸಿದ್ಧಪಡಿಸಲಾದ ಉಚಿತ ಆರೋಗ್ಯ ಸಂಚಾರ ಆಂಬುಲೆನ್ಸ್ ವಾಹನವನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದ ಜನರು ಕಾಯಕದಲ್ಲಿ ನಿರತರಾಗಿ ಆರೋಗ್ಯದ ಕಡೆಗೆ ಗಮನ ಹರಿಸುವುದು ಕಡಿಮೆ. ತುರ್ತು ಸಂದರ್ಭದಲ್ಲಿ ವಾಹನ ಸೌಕರ್ಯವಿಲ್ಲದೆ ಅಥವಾ ಆಸ್ಪತ್ರೆಗೆ ಹೋಗಲು ಜನರಿಲ್ಲದೆ ಸಂಕಷ್ಟ ಅನುಭವಿಸುವ ಕುಟುಂಬಗಳಿಗೆ ಈ ಉಚಿತ ಆಂಬುಲೆನ್ಸ್ ವರದಾನವಾಗಲಿದೆ. ಖಾಸಗಿ ಕಂಪನಿಯು ಲಾಭದ ಉದ್ದೇಶದ ಜೊತೆಗೆ ಸಾಮಾಜಿಕ ಹೊಣೆಗಾರಿಕೆಯಡಿ ಇಂತಹ ಕೆಲಸ ಮಾಡಿರುವುದು ಶ್ಲಾಘನೀಯ ಎಂದು ಶಾಸಕರು ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಆಂಧ್ರಪ್ರದೇಶದ ಟಿಡಿಪಿ ಯುವ ಮುಖಂಡ ಹಾಗೂ ಧರ್ಮವರಂ ಉಸ್ತುವಾರಿ ಪರಿಟಾಲ ಶ್ರೀರಾಮ್ ಮಾತನಾಡಿ, “ಆಂಧ್ರ ಮತ್ತು ಕರ್ನಾಟಕದ ಜನರ ನಡುವೆ ಅವಿನಾಭಾವ ಸಂಬಂಧವಿದೆ. ಗಡಿ ಗ್ರಾಮಗಳ ರಸ್ತೆ




ಸೇರಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಜನರ ಸಮಸ್ಯೆಗಳ ಪರಿಹಾರಕ್ಕೆ ಉಭಯ ರಾಜ್ಯಗಳ ಮುಖಂಡರು ಪರಸ್ಪರ ಸಹಕಾರದೊಂದಿಗೆ ಕೆಲಸ ಮಾಡುತ್ತೇವೆ,” ಎಂದರು.

ಅಯಾನ ಕಂಪನಿಯ ಮ್ಯಾನೇಜರ್ ತಾಳ್ಳೂರಿ ಅನಿಲ್ ಕುಮಾರ್ ಮಾತನಾಡಿ, “ಬತ್ತಿನೇನಿ ನಾನಿ ಅವರು ಈ ಭಾಗದ ಜನರ ಕಷ್ಟಗಳನ್ನು ಕಂಪನಿಯ ಗಮನಕ್ಕೆ ತಂದು, ನಿರಂತರ ಒತ್ತಡ ಹೇರಿ ಈ ಉಚಿತ ಆಂಬುಲೆನ್ಸ್ ಸೌಲಭ್ಯ ದೊರೆಯುವಂತೆ ಮಾಡಿದ್ದಾರೆ. ಈ ವಾಹನದ ಸಂಪೂರ್ಣ ನಿರ್ವಹಣೆಯನ್ನು ನಮ್ಮ ಕಂಪನಿಯೇ ವಹಿಸಿಕೊಳ್ಳಲಿದೆ. ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು,” ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಅಯಾನ ಕಂಪನಿಯ ವೈಭವ್ ಕರಾಟೆ, ಪ್ರಮುಖರಾದ ಪರಿಟಾಲ ಸುಧಾಕರ್, ಬತ್ತಿನೇನಿ ನಾನಿ, ಶಂಕರ ರೆಡ್ಡಿ, ಶೇಷಗಿರಿ, ರಾಜೇಶ್, ರವಿ, ಎ. ಹನುಮಂತರಾಯ, ನಾಗರಾಜ್, ಭೋಮ್ಮಯ್ಯ, ತಾಲ್ಲೂಕು ಕಾಂಗ್ರೆಸ್ ಮುಖಂಡರು ಹಾಗೂ ಸಾವಿರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

# ಗೋರಕ್ಷಕರ ಮೇಲಿನ ಹಲ್ಲೆ ಪ್ರಕರಣ; ಪೊಲೀಸರ ವಿಳಂಬ ಧೋರಣೆಗೆ ಆಕ್ರೋಶ

ತಿಪಟೂರು

“ಗೋರಕ್ಷಣೆ ಮಾಡುವ ಸಮಯದಲ್ಲಿ ಹಲ್ಲೆಗೊಳಗಾದ ಹಿಂದೂ ಕಾರ್ಯಕರ್ತರ ರಕ್ಷಣೆಗೆ ಮತ್ತು ಅವರ ಹಿತ ಕಾಯಲು ನಾನು ಸದಾ ಸಿದ್ಧನಾಗಿದ್ದೇನೆ,” ಎಂದು ಜೆಡಿಎಸ್ ಮುಖಂಡ ಕೆ.ಟಿ. ಶಾಂತಕುಮಾರ್ ತಿಳಿಸಿದರು.

ನಗರದಲ್ಲಿ ನಡೆದ ಕಾರ್ಯಕ್ರಮದಲ್ಲಿ, ಈ ಹಿಂದೆ ಗೋರಕ್ಷಣೆ ವೇಳೆ ಹಲ್ಲೆಗೊಳಗಾಗಿದ್ದ ಐದು ಜನ ಹಿಂದೂ ಕಾರ್ಯಕರ್ತರಿಗೆ ತಾವು ನೀಡಿದ್ದ ವಾಗ್ದಾನದಂತೆ ತಲಾ 10 ಸಾವಿರ ರೂ.ಗಳಂತೆ ಆರ್ಥಿಕ ಸಹಾಯ ಹಸ್ತ ಚಾಚಿ ಅವರು ಮಾತನಾಡಿದರು.

“ಹಿಂದೂ ಕಾರ್ಯಕರ್ತರ ಮೇಲಿನ ಹಲ್ಲೆಯನ್ನು ವಿರೋಧಿಸಿ ಈಗಾಗಲೇ ತಿಪಟೂರು ಬಂದ್ ಮಾಡಿ ಬೃಹತ್ ಪ್ರತಿಭಟನೆ ನಡೆಸಲಾಗಿದೆ. ಆದರೆ, ಘಟನೆ ನಡೆದು ಹಲವು ದಿನಗಳು ಕಳೆದರೂ ಪೊಲೀಸ್ ಇಲಾಖೆ ಇನ್ನೂ ಪ್ರಮುಖ ಆರೋಪಿಗಳನ್ನು ಬಂಧಿಸಿಲ್ಲ. ಇಲಾಖೆಯು ಕಾನೂನು ಮತ್ತು ಸುವ್ಯವಸ್ಥೆಯ ದೃಷ್ಟಿಯಿಂದ ಈ ಪ್ರಕರಣವನ್ನು



ಗಂಭೀರವಾಗಿ ಪರಿಗಣಿಸಿ, ತಪ್ಪಿತಸ್ಥರ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು,” ಎಂದು ಅವರು ಆಗ್ರಹಿಸಿದರು.

ವಿಶ್ವ ಹಿಂದೂ ಪರಿಷತ್ ಜಿಲ್ಲಾಧ್ಯಕ್ಷ ಬಾಳೆಕಾಯಿ ನಟರಾಜು ಮಾತನಾಡಿ, “ಪ್ರತಿಭಟನೆಯ ಸಂದರ್ಭದಲ್ಲಿ ನೀಡಿದ್ದ ಮಾತಿನಂತೆ ಶಾಂತಕುಮಾರ್ ಅವರು ಕಾರ್ಯಕರ್ತರಿಗೆ ಆರ್ಥಿಕ ನೆರವು ನೀಡಿದ್ದಾರೆ. ಹಣದ ಸಹಾಯಕ್ಕಿಂತ ಹೆಚ್ಚಾಗಿ, ಯಾವುದೇ ಸಂಕಷ್ಟ ಬಂದರೂ ನಿಮ್ಮ ಜೊತೆಗಿರುತ್ತೇನೆ ಎಂದು ಅವರು ತುಂಬಿರುವ ಧೈರ್ಯ ಸ್ತುತ್ಯರ್ಹ. ಎಲ್ಲಾ ಹಿಂದೂ ಸಂಘಟನೆಗಳ ಪರವಾಗಿ ಅವರಿಗೆ ಧನ್ಯವಾದ ಅರ್ಪಿಸುತ್ತೇವೆ,” ಎಂದರು.

ಕಾರ್ಯಕ್ರಮದಲ್ಲಿ ಜೆಡಿಎಸ್ ನಗರಾಧ್ಯಕ್ಷ ಕಂಚಘಟ್ಟ ರಾಜು, ಕಾರ್ಯದರ್ಶಿ ಶಿವಸ್ವಾಮಿ, ತಾಲೂಕು ಕಾರ್ಯದರ್ಶಿ ನಟರಾಜು ಗುರುಗದಹಳ್ಳಿ, ಯುವ ಘಟಕದ ಅಧ್ಯಕ್ಷ ಸುದರ್ಶನ್, ನಟರಾಜು ಹಾಗೂ ವಿವಿಧ ಹಿಂದೂ ಸಂಘಟನೆಗಳ ಕಾರ್ಯಕರ್ತರು ಉಪಸ್ಥಿತರಿದ್ದರು.

# ಕಾರು ಅಪಘಾತ: ಗ್ರಾಮ ಲೆಕ್ಕಾಧಿಕಾರಿ ಸ್ಥಳದಲ್ಲೇ ಸಾವು

ತುರುವೇಕೆರೆ

ತಾಲ್ಲೂಕಿನ ಗಡಿಭಾಗದ ಕುಂದೂರು ಪಾಳ್ಯ ಗೇಟ್ ಬಳಿ ಕಾರು ಅಪಘಾತವಾಗಿ ಗ್ರಾಮ ಆಡಳಿತ ಲೆಕ್ಕಾಧಿಕಾರಿ ಪೂರಪ್ಪ ರಾತೋಡ (25) ಸೋಮವಾರ ರಾತ್ರಿ ನಿಧನರಾಗಿದ್ದಾರೆ.

ಮೃತರು ತಾಲ್ಲೂಕಿನ ದಂಡಿನಶಿವರ ಹೋಬಳಿಯ ಮಾಸ್ತಿಗೊಂಡನ ಹಳ್ಳಿ ಭಾಗದ ಗ್ರಾಮ ಆಡಳಿತ ಲೆಕ್ಕಾಧಿಕಾರಿ 2019 ರಿಂದ ಕೆಲಸ ನಿರ್ವಹಿಸಿದ್ದರು. ಕೆಲ ದಿನಗಳ ಹಿಂದೆಯಷ್ಟೆ ತಾಲ್ಲೂಕಿನ ಮಾಯಸಂದ್ರ ಹೋಬಳಿಯ ತುಯ್ಯಲಹಳ್ಳಿಗೆ ವರ್ಗಾವಣೆಯಾಗಿದ್ದರು. ಇವರು ಮೂಲತಃ ರಾಯಚೂರಿನ ಕಡೆಯವರು. ಇವರಿಗೆ ತಂದೆ, ತಾಯಿ ಮತ್ತು ಮೂವರು ಸಹೋದರರು ಇದ್ದಾರೆಂದು ತಿಳಿದುಬಂದಿದೆ.

ಮೃತ ಪೂರಪ್ಪ ರಾತೋಡ ಸೋಮವಾರ ರಾತ್ರಿ ತಮ್ಮದೇ ಕಾರನ್ನು ಚಾಲನೆ ಮಾಡಿಕೊಂಡು ತುರುವೇಕೆರೆಯಿಂದ ಕೆ.ಬಿ.ಕ್ರಾಸ್ ಕಡೆ ಹೋಗುವ ಮಾರ್ಗ ಮಧ್ಯೆ ನಿಯಂತ್ರಣ ತಪ್ಪಿ ಮರಕ್ಕೆ ಗುದ್ದಿದ ಪರಿಣಾಮ ಪೂರಪ್ಪ ರಾಥೋಡ್ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ನೂತನ ಪದಾಧಿಕಾರಿಗಳ ಪದಗ್ರಹಣ

ಮುಳಬಾಗಿಲು

“ಬಿಜೆಪಿ ಪಕ್ಷದಲ್ಲಿ ಯುವಕರು ಶಿಸ್ತು, ಪಕ್ಷ ಸಂಘಟನೆ ಹಾಗೂ ದೇಶಪ್ರೇಮದ ಕಾರ್ಯಗಳಲ್ಲಿ ತೊಡಗಿಸಿಕೊಂಡು ಇಚ್ಛಾಶಕ್ತಿಯಿಂದ ಕೆಲಸ ಮಾಡಿದರೆ ಉನ್ನತ ಸ್ಥಾನಮಾನಗಳು ಅರಸಿ ಬರುತ್ತವೆ,” ಎಂದು ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ತೇಜಸ್ ರಾಜ್ ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಆಯೋಜಿಸಿದ್ದ ಬಿಜೆಪಿ ಯುವ ಮೋರ್ಚಾ ನಗರ ಘಟಕದ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಬಿಜೆಪಿ ಪಕ್ಷವು ಒಬ್ಬ ಸಾಮಾನ್ಯ ಹಾಗೂ ನಿಷ್ಠಾವಂತ ಕಾರ್ಯಕರ್ತನನ್ನು ಗುರುತಿಸಿ ರಾಜ್ಯ ಮತ್ತು ರಾಷ್ಟ್ರ ಮಟ್ಟದ ನಾಯಕನನ್ನಾಗಿ ಬೆಳೆಸುವ ಏಕೈಕ ಪಕ್ಷವಾಗಿದೆ. ಯುವಕರು ಪಕ್ಷದ ಆಧಾರಸ್ತಂಭಗಳಾಗಿ ಕೆಲಸ ಮಾಡಬೇಕು. ಪಕ್ಷನಿಷ್ಠೆ ಮತ್ತು ಸಂಘಟನಾ ಚತುರತೆ ತೋರಿದಾಗ ಮಾತ್ರ ಯುವಶಕ್ತಿಯನ್ನು ಪಕ್ಷವು ಸೂಕ್ತವಾಗಿ ಬಳಸಿಕೊಳ್ಳುತ್ತದೆ ಎಂದು ಅವರು ಆಶ್ವಾಸನೆ ನೀಡಿದರು.

ಮಾಜಿ ಸಂಸದ ಎಸ್. ಮುನಿಸ್ವಾಮಿ ಹಾಗೂ ಜಿಲ್ಲಾಧ್ಯಕ್ಷ ಓಂ ಶಕ್ತಿ ಚಲಪತಿ ಅವರ ಮಾರ್ಗದರ್ಶನದಲ್ಲಿ ಜಿಲ್ಲೆಯಾದ್ಯಂತ ಪಕ್ಷವನ್ನು ಮತ್ತಷ್ಟು ಗಟ್ಟಿಗೊಳಿಸಲಾಗುವುದು. ಮುಂಬರುವ ಚುನಾವಣೆಗಳಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗಾಗಿ ಯುವ ಮೋರ್ಚಾ ಕಾರ್ಯಕರ್ತರು ಈಗಿನಿಂದಲೇ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ತೇಜಸ್ ರಾಜ್ ಕರೆ ನೀಡಿದರು.

ನೂತನ ಪದಾಧಿಕಾರಿಗಳ ಆಯ್ಕೆ:

ಕಾರ್ಯಕ್ರಮದಲ್ಲಿ ಯುವ ಮೋರ್ಚಾ ನಗರ ಘಟಕದ ನೂತನ ಪದಾಧಿಕಾರಿಗಳನ್ನು ಪದಗ್ರಹಣ ಮಾಡಿಸಲಾಯಿತು.

ಪ್ರಧಾನ ಕಾರ್ಯದರ್ಶಿ: ಎಂ. ಸುಕುಮಾರ್.

ಕಾರ್ಯದರ್ಶಿ: ಶಿವಪ್ರಕಾಶ್ ಎಂ.

ಉಪಾಧ್ಯಕ್ಷರು: ಶಶಾಂಕ್ ಎಂ, ಯುವರಾಜ್ ಕೆ.ಎನ್, ಧನುಷ್ ಎಂ.

ಸಾಮಾಜಿಕ ಜಾಲತಾಣ ಸದಸ್ಯ: ಗಂಗಾಧರ್.

ಹಾಗೂ ವಿವಿಧ ಜವಾಬ್ದಾರಿಗಳಿಗೆ ಬಾಬು ಆರ್, ರಾಮು ಸಿ, ಕಾರ್ತಿಕ್ ಕೆ.ಪಿ, ವಿಜಯ್ ಕುಮಾರ್ ಸೇರಿದಂತೆ ಹಲವರನ್ನು ನೇಮಿಸಲಾಯಿತು.

ಕಾರ್ಯಕ್ರಮದಲ್ಲಿ ಬಿಜೆಪಿ ನಗರ ಘಟಕದ ಮಾಜಿ ಅಧ್ಯಕ್ಷ ಕಾಪರ್ತಿ ಅಮರ್, ತಾಲೂಕು ಪ್ರಧಾನ ಕಾರ್ಯದರ್ಶಿ ಮೈಕ್ ಶಂಕರ್, ಯುವ ಮೋರ್ಚಾ ಅಧ್ಯಕ್ಷ ಬಾಬು ಹಾಗೂ ನೂರಾರು ಕಾರ್ಯಕರ್ತರು ಪಾಲ್ಗೊಂಡಿದ್ದರು.

# ಬುಕ್ಕಪಟ್ಟಣ ಕಾವಲಮ್ಮ ಸನ್ನಿಧಿಯಲ್ಲಿ ಭಕ್ತಿಯ ಪರಾಕಾಷ್ಠೆ: ಅಕ್ಕ-ತಂಗಿಯರ ಸಮಾಗಮದ ಜಾತ್ರೆ

ಕೊರಟಗೆರೆ

ತಾಲೂಕಿನ ಇತಿಹಾಸ ಪ್ರಸಿದ್ಧ ಬುಕ್ಕಪಟ್ಟಣ ಕಾವಲಮ್ಮ ದೇವಿಯ ಜಾತ್ರಾ ಮಹೋತ್ಸವವು ಈ ಬಾರಿಯೂ ಅತ್ಯಂತ ಸಡಗರ ಹಾಗೂ ಸಾಂಪ್ರದಾಯಿಕ ನಿಷ್ಠೆಯೊಂದಿಗೆ ಜರುಗುತ್ತಿದೆ. ಸುತ್ತಮುತ್ತಲ 30ಕ್ಕೂ ಹೆಚ್ಚು ಗ್ರಾಮಗಳ ಆರಾಧ್ಯ ದೇವಿಯಾಗಿರುವ ಕಾವಲಮ್ಮನ ಈ ಜಾತ್ರೆಯು ಜಾನಪದ ನಂಬಿಕೆ ಹಾಗೂ ಭಕ್ತಿಭಾವದ ಅಪೂರ್ವ ಸಂಗಮವಾಗಿ ಮೂಡಿಬರುತ್ತಿದೆ.

ಹುತ್ತದ ಕೋವಿಯಲ್ಲಿ ಜನಿಸಿದ ಏಳು ದೇವಿಯರನ್ನು ಒಟ್ಟಾಗಿ ‘ಕಾವಲಮ್ಮ’ ಎಂದು ಪೂಜಿಸಲಾಗುತ್ತದೆ. ಇವರಲ್ಲಿ ಹಿರಿಯವಳನ್ನು ‘ದೊಡ್ಡಮ್ಮ’ ಎಂದು ಕರೆಯಲಾಗುತ್ತದೆ. ಆಂಧ್ರಪ್ರದೇಶದ ಕಲ್ಯಾಣದುರ್ಗದ ಅಕ್ಕಮ್ಮಕೊಂಡದಲ್ಲಿ ಜನಿಸಿ, ಮೈಲಾರದಲ್ಲಿ ಬೆಳೆದ ಈ ಅಕ್ಕ-ತಂಗಿಯರು ಸಿದ್ದಪ್ಪನ ಅನುಮತಿ ಪಡೆದು ಸಿದ್ದರಬೆಟ್ಟದ ಸುತ್ತಮುತ್ತ ನೆಲೆಯೂರಿದ್ದಾರೆ ಎಂಬ ಜಾನಪದ ಕಥೆ ಇಂದಿಗೂ ಜೀವಂತವಾಗಿದೆ. ಬುಕ್ಕಪಟ್ಟಣ, ಪೂಜಾರಹಳ್ಳಿ, ನೇಗಲಾಲ ಹಾಗೂ ಜಟ್ಟಿ ಅಗ್ರಹಾರ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಈ ಅಕ್ಕ-ತಂಗಿಯರ ಆರಾಧನೆ ನಡೆಯುತ್ತದೆ.



10 ದಿನಗಳ ಕಟ್ಟುನಿಟ್ಟಿನ ಮಡಿ-ನಿಯಮ: ಈ ಜಾತ್ರೆಯು ತನ್ನ ಕಠಿಣ ಸಂಪ್ರದಾಯಗಳಿಗೆ ಹೆಸರಾಗಿದೆ.

ಬಾಳೆಯಾಯಿ ತರಿಸುವ ಪದ್ಧತಿ: ಜಾತ್ರೆಗೆ ಐದು ದಿನಗಳ ಮುಂಚೆ ಮಡಿಯಿಂದ ಬಾಳೆಗೊನೆ ಕತ್ತರಿಸಿ, ಬರಿಗಾಲಿನಲ್ಲಿ ಕಲ್ಲು-ಮುಳ್ಳು ಎನ್ನದೆ ಹೊಲಗಳ ಮೂಲಕ ದೇವಾಲಯಕ್ಕೆ ತರಲಾಗುತ್ತದೆ.

ಆಹಾರ ಪದ್ಧತಿ: ಬಾಳೆಕಾಯಿ ಉಗ್ರಾಣ ಸೇರಿದ ನಂತರ ಜಾತ್ರೆ ಮುಗಿಯುವವರೆಗೆ ಸುತ್ತಮುತ್ತಲ ಗ್ರಾಮಸ್ಥರು ಮಾಂಸಾಹಾರವನ್ನು ಸಂಪೂರ್ಣವಾಗಿ ತ್ಯಜಿಸುತ್ತಾರೆ.

ರಹಸ್ಯ ಗವಿಯ ಪೂಜೆ: ಜಾತ್ರೆಯ ಹಿಂದಿನ ದಿನ ಶೈವ ದೀಕ್ಷೆ ಪಡೆದ ಅರ್ಚಕರು ‘ಅಮ್ಮನ ಬೆಟ್ಟ’ದ ರಹಸ್ಯ ಗವಿಗೆ ತೆರಳಿ, ಅಲ್ಲಿ ದೀಪ ಹಚ್ಚಿ ಮೂಲ ದೇವರನ್ನು ಹೊರತರುತ್ತಾರೆ. ಜಾತ್ರೆ ಮುಗಿದ ನಂತರ ಮತ್ತೆ ದೇವರನ್ನು ಅದೇ ಗವಿಯಲ್ಲಿ ಸುರಕ್ಷಿತವಾಗಿ ಇಟ್ಟು ಬರುವುದು ಇಲ್ಲಿನ ಸಂಪ್ರದಾಯ.

ಸಾಮಾಜಿಕ ಒಗ್ಗಟ್ಟಿನ ಪ್ರತೀಕ: ಜಾತ್ರೆಗೆ ಅಗತ್ಯವಿರುವ ಪರಿಕರಗಳನ್ನು ವಿವಿಧ ಸಮುದಾಯದವರು ಉಪವಾಸವಿದ್ದು ಸಿದ್ಧಪಡಿಸುತ್ತಾರೆ. ಮೇದರು ಬಿದಿರಿನ ಬುಟ್ಟಿಗಳನ್ನು, ಕುಂಬಾರರು ಮಡಕೆಗಳನ್ನು ನೀಡುವ ಮೂಲಕ ಈ ಜಾತ್ರೆಯು ಸಮಾಜದ ಸರ್ವ ಜನಾಂಗದ ಒಗ್ಗಟ್ಟನ್ನು ಪ್ರತಿಬಿಂಬಿಸುತ್ತದೆ.

ವಿಶೇಷ ಉತ್ಸವಗಳು ಮತ್ತು ಭವಿಷ್ಯವಾಣಿ: ಹತ್ತು ದಿನಗಳ ಕಾಲ ನಡೆಯುವ ಈ ಉತ್ಸವದಲ್ಲಿ ಜಲಧಿ ಉತ್ಸವ, ಉಯ್ಯಾಲೆ ಸೇವೆ, ಭಂಡುಬಂಡಾರ, ಮಧ್ಯರಾತ್ರಿ ರಥೋತ್ಸವ, ಓಕಳಿ ಹಾಗೂ ನಾಗರಪೂಜೆಗಳು ವಿಶಿಷ್ಟವಾಗಿ ನಡೆಯುತ್ತವೆ. ವಿಶೇಷವಾಗಿ, ಜಾತ್ರೆಯ ಸಮಯದಲ್ಲಿ ದೇವರು ನೀಡುವ ‘ಪಟ್ಟದ ವೇಳೆ’ ಸೂಚನೆಯು ಆ ವರ್ಷದ ಮಳೆ-ಬೆಳೆಯ ಭವಿಷ್ಯವಾಣಿಯೆಂದು ನಂಬಲಾಗುತ್ತದೆ. ಈ ಭವಿಷ್ಯದ ಮೇಲೆಯೇ



ಈ ಭಾಗದ ರೈತರು ತಮ್ಮ ಕೃಷಿ ಚಟುವಟಿಕೆಗಳನ್ನು ಅವಲಂಬಿಸಿದ್ದಾರೆ.

ಕರ್ನಾಟಕ ಮಾತ್ರವಲ್ಲದೆ ಆಂಧ್ರಪ್ರದೇಶದಿಂದಲೂ ಸಾವಿರಾರು ಭಕ್ತರು ಈ ಜಾತ್ರೆಗೆ ಆಗಮಿಸಿ ದೇವಿಗೆ ಭಕ್ತಿ ಸಮರ್ಪಿಸುತ್ತಿದ್ದಾರೆ. ಒಟ್ಟಾರೆಯಾಗಿ ಬುಕ್ಕಪಟ್ಟಣ ಕಾವಲಮ್ಮ ಜಾತ್ರೆಯು ಶ್ರದ್ಧೆ ಮತ್ತು ಸಂಸ್ಕೃತಿಯ ಕಣಜವಾಗಿ ಸಾಕ್ಷಿಯಾಗಿದೆ.

# ಯುವಜನತೆ ಮೊಬೈಲ್ ವ್ಯಸನ ಬಿಟ್ಟು ಆರೋಗ್ಯದ ಕಡೆಗೆ ಗಮನಹರಿಸಿ: ಪ್ರೊ. ರಾಮಾಂಜನಪ್ಪ

ಕುಣಿಗಲ್

“ಇಂದಿನ ಯುವಜನರಲ್ಲಿ ಅತಿಯಾದ ಮೊಬೈಲ್ ಬಳಕೆ ಒಂದು ವ್ಯಸನವಾಗಿ ಮಾರ್ಪಡುತ್ತಿದೆ. ಜಂಕ್ ಫುಡ್ ಸಂಸ್ಕೃತಿಯನ್ನು ತೊರೆದು ಮನೆಯಲ್ಲಿ ತಯಾರಿಸಿದ ಪೌಷ್ಟಿಕ ಆಹಾರ ಸೇವಿಸುವ ಮೂಲಕ ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಳ್ಳಬೇಕು,” ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ರಾಮಾಂಜನಪ್ಪ ಕಿವಿಮಾತು ಹೇಳಿದರು.

ಕಾಲೇಜಿನ ಐ.ಕ್ಯೂ.ಎ.ಸಿ, ಯುವ ರೆಡ್ ಕ್ರಾಸ್, ರೆಡ್ ರಿಬ್ಬನ್ ಕ್ಲಬ್ ಮತ್ತು ಎನ್.ಎಸ್.ಎಸ್ ಘಟಕಗಳ ಸಹಯೋಗದಲ್ಲಿ ಆಯೋಜಿಸಿದ್ದ ವಿಶ್ವ ಆರೋಗ್ಯ



ದಿನಾಚರಣೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದೈಹಿಕ ಚಟುವಟಿಕೆಗಳು ಮನುಷ್ಯನನ್ನು ಶಕ್ತಿಯುತವಾಗಿಸುತ್ತವೆ ಮತ್ತು ಅನೇಕ ಕಾಯಿಲೆಗಳಿಂದ ದೂರವಿಡುತ್ತವೆ. ಕಾಯಿಲೆ ಬಂದ ಮೇಲೆ ಚಿಕಿತ್ಸೆ ಪಡೆಯುವ ಬದಲು, ಕಾಯಿಲೆ ಬರದಂತೆ ಮುಂಜಾಗ್ರತೆ ವಹಿಸುವುದು ಇಂದಿನ ಅಗತ್ಯವಾಗಿದೆ ಎಂದು ಅವರು ತಿಳಿಸಿದರು.

ಅಕ್ಷಯ ನ್ಯೂಟ್ರಿಷಿಯನ್ ಕ್ಲಬ್‌ನ ರಾಜೇಶ್ ಮಾತನಾಡಿ, “ದೇಶದಲ್ಲಿ ಶೇ 35 ರಷ್ಟು ಜನರು ಸ್ಥೂಲಕಾಯದಿಂದ ಹಾಗೂ ಶೇ 15 ರಷ್ಟು ಜನರು ಅತಿಯಾದ ತೂಕದಿಂದ ಬಳಲುತ್ತಿದ್ದಾರೆ. ಎತ್ತರಕ್ಕೆ ತಕ್ಕ ತೂಕ ಕಾಪಾಡಿಕೊಳ್ಳುವುದು ಮುಖ್ಯ. ಅತಿಯಾದ ಮೊಬೈಲ್ ಸ್ಕ್ರೀನ್ ಟೈಮ್ ನಿದ್ರಾಹೀನತೆಗೆ ಕಾರಣವಾಗಿ ಹಾರ್ಮೋನ್ ಉತ್ಪತ್ತಿಯ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತದೆ,” ಎಂದು ಎಚ್ಚರಿಸಿದರು.

ತುಮಕೂರಿನ ಆರ್ಚಿಡ್ ಸಂಸ್ಥೆಯ ಮುತ್ತುರಾಯ ಅವರು ವ್ಯಸನಮುಕ್ತ ಜೀವನದ ಬಗ್ಗೆ ಮಾತನಾಡಿ, ಮದ್ಯಪಾನ ಮತ್ತು ಡ್ರಗ್ಸ್‌ನಂತಹ ಸಾಮಾಜಿಕ ಪಿಡುಗುಗಳಿಗೆ ಬಲಿಯಾಗುತ್ತಿರುವ ಯುವಜನರ ಭವಿಷ್ಯ ಮಸುಕಾಗುತ್ತಿದೆ. ಉತ್ತಮ ಆರೋಗ್ಯ ಪಡೆಯಲು ಯುವಜನರು ಈ ದಿನ ಶಪಥ ಮಾಡಬೇಕು ಎಂದರು.

ಯುವ ರೆಡ್ ಕ್ರಾಸ್ ಸಂಚಾಲಕ ಶ್ರೀನಿವಾಸಪ್ರಭು ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ಎಲ್ಲಾ ಸಂಪತ್ತಿಗಿಂತ ಆರೋಗ್ಯ ಸಂಪತ್ತು ಶ್ರೇಷ್ಠವಾದುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಐ.ಕ್ಯೂ.ಎ.ಸಿ ಸಂಚಾಲಕ ಡಾ. ಟಿ.ಎನ್. ನರಸಿಂಹಮೂರ್ತಿ, ಅಧ್ಯಾಪಕರಾದ ಡಾ. ಎಂ.ಕೆ. ಮಂಜುಳ, ಡಾ. ಬಿ. ನಿರ್ಮಲ, ಕೆ.ಹೆಚ್. ಅನಿತಲಕ್ಷ್ಮಿ, ಮ್ಯಾನೇಜರ್ ಚಲುವಮೂರ್ತಿ, ಡಾ. ಎಸ್.ಎ. ಸಂತೋಷ್, ಎನ್.ಎಸ್.ಎಸ್ ಅಧಿಕಾರಿಗಳಾದ ಕೆ. ರವಿಕುಮಾರ್ ಮತ್ತು ಸಿ.ಜಿ. ನಾಗಮಣಿ ಭಾಗವಹಿಸಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy